19 December 2025 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಕಷ್ಟ ಮತ್ತು ಬಡತನ
ಹೇಳುವ ಪಾಠ ಜೀವನದಲ್ಲಿ
ಬೇರೆ ಎಲ್ಲೂ ಸಿಗಲಾರದು!
ಸ್ನೇಹಾ ಆನಂದ್

info.varthaman@gmail.com

**ಒಂದೊಳ್ಳೆ ಮಾತು**

ಪ್ರೀತಿಗೆ
ಪಾತ್ರನಾಗುವದಕ್ಕಿಂತ
ನಂಬಿಕೆಗೆ ಪಾತ್ರನಾಗು
ನಂಬಿಕೆಯಿದ್ದ ಕಡೆ ಪ್ರೀತಿ
ತಾನಾಗಿಯೇ
ಒಲೆಯುತ್ತದೆ.
ಮೈಲಾರ ಸಾವಿತ್ರಿಬಾಯಿ

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 57 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

# ದ್ವೇಷ ಭಾಷಣ: ಮಸೂದೆಗೆ ಅಸ್ತು

## ವಿಪಕ್ಷಗಳ ತೀವ್ರ ಆಕ್ರೋಶದ ನಡುವೆಯೂ ಪ್ರತಿಬಂಧಕ ಕಾಯ್ದೆ ಅಂಗೀಕಾರ

**ಬೆಳಗಾವಿ:** ಪ್ರತಿಪಕ್ಷಗಳ ಆಕ್ರೋಶದ ನಡುವೆಯೂ ವಿಧಾನಸಭೆಯಲ್ಲಿ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ಮಸೂದೆಯನ್ನು ಗುರುವಾರ ಯಶಸ್ವಿಯಾಗಿ ಅಂಗೀಕರಿಸಲಾಯಿತು.

ಸರ್ಕಾರ ಮಂಡಿಸಿದ್ದ ಮಸೂದೆಗೆ ವಿಪಕ್ಷಗಳ ಸದಸ್ಯರು ತೀವ್ರ ವಿರೋಧ ವ್ಯಕ್ತಪಡಿಸಿದರು. ಸದನದ ಬಾವಿಗಿಳಿದು ಧರಣಿ ನಡೆಸಿದರು. ವಿಧೇಯಕದ ಪ್ರತಿಗಳನ್ನು ಹರಿದು ಬಿಸಾಕುವ ಮೂಲಕ ಆಕ್ರೋಶ ವ್ಯಕ್ತಪಡಿಸಿದರು. ವಿಪಕ್ಷಗಳ ವಿರೋಧ ಹೆಚ್ಚಾಗುತ್ತಿದ್ದಂತೆ ಗದ್ದಲದ ನಡುವೆಯೇ ಮಸೂದೆಯನ್ನು ಆಡಳಿತ ಪಕ್ಷದ ಸದಸ್ಯರು ಅನುಮೋದಿಸಿದರು.

ಮಸೂದೆಯ ಬಗ್ಗೆ ಗೃಹ ಸಚಿವ ಡಾ.ಜಿ. ಪರಮೇಶ್ವರ್ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಬಹಳಷ್ಟು ಜನ ಸಮಾಜಕ್ಕೆ ನೋವಾಗುವ ರೀತಿಯಲ್ಲಿ ಮಾತನಾಡುತ್ತಿದ್ದಾರೆ. ಇದರ ಪ್ರಮಾಣ ಜಾಸ್ತಿಯಾಗಿರುವುದರಿಂದ ಕೊಲೆ, ಹೊಡೆದಾಟಗಳು ನಡೆದಿವೆ. ಇದನ್ನು ನಿಯಂತ್ರಣ ಮಾಡಬೇಕಾಗಿದೆ ಎಂದು ಹೇಳಿದರು.

ಸಾಮಾಜಿಕ, ರಾಜಕೀಯ ಸಭೆಗಳಲ್ಲಿ ಆಡುವ ದ್ವೇಷದ ಮಾತುಗಳು ಮತ್ತೊಂದು ಸಮುದಾಯದ ಮೇಲೆ ಪರಿಣಾಮ ಬೀರುತ್ತಿದೆ. ದ್ವೇಷ ಭಾಷಣದಲ್ಲಿ ಮತ್ತೊಂದು ಸಮುದಾಯದ ಬಗ್ಗೆ ಕೆಟ್ಟ ಮಾತುಗಳನ್ನು ಆಡುವುದು ಈಗ ಸಾಮಾನ್ಯವಾಗಿದೆ. ದ್ವೇಷ ಭಾಷಣ ಮಾಡುವ ವ್ಯಕ್ತಿಗಳಿಗೆ ಎಷ್ಟು ದಿನ ನಿರ್ಬಂಧ

ಪುಟ 2ಕ್ಕೆ



### 7 ವರ್ಷ ಗರಿಷ್ಠ ಶಿಕ್ಷೆ: ಪರಮೇಶ್ವರ್

**ಬೆಳಗಾವಿ:** ಮೊದಲ ಬಾರಿಗೆ ದ್ವೇಷ ಭಾಷಣ ಮಾಡಿದರೆ 1ರಿಂದ 7 ವರ್ಷ ಜೈಲು, 50 ಸಾವಿರ ರೂ ದಂಡ ದ್ವೇಷ ಭಾಷಣ ಪುನರಾವರ್ತನೆಗೆ 2 ವರ್ಷದಿಂದ ಶಿಕ್ಷೆ 7 ವರ್ಷ ಗರಿಷ್ಠ ಜೈಲು, 1 ಲಕ್ಷ ದಂಡ ವಿಧಿಸಲು ಮಸೂದೆಯಲ್ಲಿ ಅವಕಾಶ ಕೊಡಲಾಗಿದೆ. ತಪ್ಪು ಪುನರಾವರ್ತನೆಗೆ ಈ ಮೊದಲು 10 ವರ್ಷ ಜೈಲು ಇದ್ದಿದ್ದನ್ನು 7 ವರ್ಷಕ್ಕೆ ಇಳಿಸಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.



ಈಗಾಗಲೇ ಮುದ್ರಿತವಾಗಿರುವ ಪುಸ್ತಕ, ಗ್ರಂಥದಲ್ಲಿ ದ್ವೇಷದ ಮಾತುಗಳು ಇವೆ ಎಂದಾದರೆ ಏನು ಕ್ರಮ? ಎಂದು ಬಿಜೆಪಿಯ ಸುನೀಲ್ ಕುಮಾರ್ ಪ್ರಶ್ನಿಸಿದರು. ಇದಕ್ಕೆ ಸ್ಪಷ್ಟನೆ ಕೊಟ್ಟ ಪರಮೇಶ್ವರ್, ಹಳೆ ಪುಸ್ತಕದಲ್ಲಿ ಇಂತಹ ಅಂಶ ಇದ್ದರೂ ಅದು ಕೂಡ ಈ ಕಾನೂನಿನ ವ್ಯಾಪ್ತಿಯಲ್ಲಿ ಬರಲಿದೆ. ಅಂತಹವನ್ನು ಬ್ಯಾನ್ ಮಾಡುವ ಪ್ರಕ್ರಿಯೆಗೆ ಅವಕಾಶ ಇದೆ ಎಂದು ತಿಳಿಸಿದರು.

ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ ಪ್ರತಿಬಂಧಕ ವಿಧೇಯಕ ಮೇಲೆ ಮಾತಾಡಿದ ವಿಪಕ್ಷ

ಪುಟ 2ಕ್ಕೆ

### ಮಸೂದೆಯಲ್ಲಿ ಅಂಶಗಳೇನು?

- ನಿರ್ದಿಷ್ಟ ವ್ಯಕ್ತಿ, ಸಮೂಹ, ಸಂಸ್ಥೆಗಳ ವಿರುದ್ಧ ದ್ವೇಷ ಹುಟ್ಟಿಸುವ ಅಪರಾಧಗಳ ತಡೆಗೆ ಅವಕಾಶ.
- ದ್ವೇಷ ಭಾಷಣ ಕೇಸ್ ಜಾಮೀನು ರಹಿತ ಪ್ರಕರಣವಾಗಲಿದೆ.
- ಮೊದಲ ಬಾರಿಗೆ ದ್ವೇಷ ಭಾಷಣ, ದ್ವೇಷ ಅಪರಾಧಗಳಿಗೆ ಕನಿಷ್ಟ 1 ವರ್ಷ, ಗರಿಷ್ಟ 7 ವರ್ಷದವರೆಗೆ ಜೈಲು, 50 ಸಾವಿರ ರೂ ದಂಡ.
- ಅಪರಾಧ ಪುನರಾವರ್ತನೆಯಾದರೆ ಕನಿಷ್ಟ 2 ವರ್ಷದಿಂದ ಗರಿಷ್ಠ 7 ವರ್ಷದ ವರೆಗೆ ಜೈಲು ಶಿಕ್ಷೆ, 1 ಲಕ್ಷ ರೂ ದಂಡ
- ಪ್ರಥಮ ದರ್ಜೆ ನ್ಯಾಯಿಕ ಮ್ಯಾಜಿಸ್ಟ್ರೇಟರ ಮೂಲಕ ದ್ವೇಷ ಭಾಷಣಗಳ ವಿಚಾರಣೆಗೆ ಅವಕಾಶ.
- ದ್ವೇಷ ಭಾಷಣಗಳ ಪ್ರಕರಣಗಳನ್ನು ಕಾರ್ಯನಿರ್ವಾಹಕ ಮ್ಯಾಜಿಸ್ಟ್ರೇಟ್ ಅಥವಾ ಉಪ ಪೊಲೀಸ್ ವರಿಷ್ಠಾಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ಪೊಲೀಸ್ ಅಧಿಕಾರಿಯು ವಿಚಾರಣೆ ಮಾಡಿ ಕಾಯ್ದೆಯಡಿ ಕ್ರಮ ಕೈಗೊಳ್ಳಲು ಅವಕಾಶ.
- ಈ ಕಾಯ್ದೆಯಡಿ ದ್ವೇಷ ಭಾಷಣಗಳಿಗೆ ನೋಂದಾಯಿತ ಅಥವಾ ನೊಂದಾಯಿತವಲ್ಲದ ಸಂಘ ಸಂಸ್ಥೆಗಳೂ ಹೊಣೆಗಾರರು.
- ದ್ವೇಷ ಭಾಷಣಗಳ ಕಂಟೆಂಟ್‌ಗಳನ್ನು ಡೊಮೈನ್ ನಿಂದ ಬ್ಲಾಕ್ ಮಾಡುವ ಅಥವಾ ತೆಗೆದು ಹಾಕುವ ಅಧಿಕಾರ.

### ಬೈರತಿ 'ಬೆಂಕಿ ಹೇಳಿಕೆ'ಗೆ ವಿಪಕ್ಷ ಸದಸ್ಯರ ಆಕ್ರೋಶ

ಬಿಜೆಪಿ ಸದಸ್ಯರ ಆಕ್ಷೇಪಕ್ಕೆ ಸಚಿವ ಬೈರತಿ ಸುರೇಶ್ ಅವರು, ಕರಾವಳಿ ಬಗ್ಗೆ ನೀಡಿದ ಹೇಳಿಕೆ ಸದನದಲ್ಲಿ ಕೋಲಾಹಲ ಸೃಷ್ಟಿಸಿತ್ತು. ಕರಾವಳಿಯಲ್ಲಿ ಬೆಂಕಿ



ಹಾಕಿ ಇಲ್ಲೂ ಬೆಂಕಿ ಹಾಕ್ತಿದ್ದಾರೆಂಬ ಬೈರತಿ ಸುರೇಶ್ ಹೇಳಿಕೆ ಬೆಂಕಿಗೆ ತುಪ್ಪ ಸುರಿದಂತಾಯ್ತು. ಕರಾವಳಿ ಶಾಸಕರು ಕೆರಳಿ ಏಕಾಏಕಿ ಸದನದ

ಪುಟ 2ಕ್ಕೆ

### ಅಂದ್ಲೆ ಜಗದೀಶ್ವರಿ ದೇವಿ ಮೊರೆ ಹೋದ ಡಿಕೆಶಿ



**ಕಾರವಾರ:** ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಇಷ್ಟಾರ್ಥ ಸಿದ್ಧಿಗಾಗಿ ಅಂಕೋಲ ತಾಲೂಕಿನ ಅಂದ್ಲೆ ಶ್ರೀ ಜಗದೀಶ್ವರಿ ದೇವಿ ಮೊರೆ ಹೋಗಿದ್ದಾರೆ. ಶುಕ್ರವಾರ ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

ಬೆಳಗಾವಿಯಿಂದ ಹೆಲಿಕಾಪ್ಟರ್ ಮೂಲಕ ಗೋಕರ್ಣಕ್ಕೆ ಆಗಮಿಸಿ ನಂತರ ಅಂದ್ಲೆಯ ದೇವಾಲಯದಲ್ಲಿ ಪೂಜಾಕಾರ್ಯ ನೆರವೇರಿಸಿದ ಅವರು ಪ್ರಸಾದ ರೂಪದ ಫಲ ಕೇಳಿದ್ದಾರೆ. ಈ ದೇವಾಲಯ ಹರಕೆ ಸಿದ್ಧಿ ಹಾಗೂ ಪ್ರಶ್ನಾ ಫಲಕ್ಕೆ ಪ್ರಸಿದ್ಧಿ ಪಡೆದಿದೆ. 2019ರಲ್ಲಿ ಇಲ್ಲಿಗೆ ಭೇಟಿ ನೀಡಿದ್ದ ಡಿ.ಕೆ.ಶಿವಕುಮಾರ್ ತಮ್ಮ ಮನೋಇಚ್ಛೆ ಪೂರೈಕೆಗಾಗಿ ಏಕಾಂತದಲ್ಲಿ ಮೂರು ತಾಸುಗಳ ಕಾಲ ಪೂಜಾಕಾರ್ಯ ನೆರವೇರಿಸಿದ್ದರು. ಈಗ ಮುಖ್ಯಮಂತ್ರಿ ಸ್ಥಾನದ ಗೊಂದಲದ ನಡುವೆ ಮತ್ತೆ ಕ್ಷೇತ್ರಕ್ಕೆ ಡಿ.ಕೆ ಶಿವಕುಮಾರ್ ಭೇಟಿ ನೀಡಿ ವಿಶೇಷ ಪೂಜಾಕಾರ್ಯ ನೆರವೇರಿಸಿದ್ದಾರೆ.


### ತಿಮರೋಡಿ ಮತ್ತೆ ಗಡಿಪಾರು

**ದಕ್ಷಿಣ ಕನ್ನಡ:** ರಾಷ್ಟ್ರೀಯ ಹಿಂದೂ ಜಾಗರಣ ವೇದಿಕೆ ಅಧ್ಯಕ್ಷ ಮಹೇಶ್ ತಿಮರೋಡಿ ಅವರನ್ನು ಗಡಿಪಾರು ಮಾಡಿ ಪುತ್ತೂರು ಉಪ ವಿಭಾಗಾಧಿಕಾರಿ ಎರಡನೇ ಬಾರಿಗೆ ಆದೇಶ ಹೊರಡಿಸಿದ್ದಾರೆ.

ಈ ಹಿಂದೆ ಗಡಿಪಾರು ಮಾಡಿ ಹೊರಡಿಸಿದ್ದ ಆದೇಶವನ್ನು ತಿಮರೋಡಿ ಹೈಕೋರ್ಟ್‌ನಲ್ಲಿ ಪ್ರಶ್ನಿಸಿದ್ದರು. ಮರುಪರಿಶೀಲಿಸಲು ಹೈಕೋರ್ಟ್ ಸೂಚಿಸಿತ್ತು. ಈಗ ಹೈಕೋರ್ಟ್ ಆದೇಶದಂತೆ ಮರುಪರಿಶೀಲನೆ ಮಾಡಿ ಒಂದು ವರ್ಷ ರಾಯಚೂರು ಜಿಲ್ಲೆಯ ಮಾನ್ವಿ ತಾಲ್ಲೂಕಿಗೆ ಗಡಿಪಾರು ಮಾಡಿ ಆದೇಶ ಹೊರಡಿಸಲಾಗಿದೆ. ಗಡಿಪಾರು ಆದೇಶ ಪ್ರತಿ ಬೆಳ್ತಂಗಡಿ ಪೊಲೀಸ್ ಠಾಣೆಗೆ ಬಂದಿದೆ. ಉಜಿರೆಯಲ್ಲಿ ರುವ ಮಹೇಶ್ ಶೆಟ್ಟಿ ತಿಮರೋಡಿ ಮನೆಗೆ ಗುರುವಾರ ಪೊಲೀಸರು ನೋಟಿಸ್ ಜಾರಿಗೆ ಹೋದಾಗ ಅವರು ಮನೆಯಲ್ಲಿ ಇರಲಿಲ್ಲ ಎನ್ನಲಾಗಿದೆ.

### ಹೈಕಮಾಂಡಿಗೆ ರಾಜ್ಯದ ಖಜಾನೆ ಲೂಟಿ ಹಣ: ಬಿ.ವೈ.ವಿಜಯೇಂದ್ರ

**ಬೆಳಗಾವಿ:** ರಾಜ್ಯ ಕಾಂಗ್ರೆಸ್ ಸರ್ಕಾರ ರಾಜ್ಯದ ಖಜಾನೆಯನ್ನ ಲೂಟಿ ಮಾಡಿ ಕಾಂಗ್ರೆಸ್ ತನ್ನ ಪಕ್ಷದ ಹೈಕಮಾಂಡ್ ಅನ್ನು ತೃಪ್ತಿಪಡಿಸುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಆಕ್ರೋಶ ವ್ಯಕ್ತಪಡಿಸಿದರು.



ಆಯುಷ್ ಇಲಾಖೆಯ ಔಷಧಿ ಖರೀದಿಯ ಭ್ರಷ್ಟಾಚಾರ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಭ್ರಷ್ಟಾಚಾರದ ಮುಖೇನ ಕಾಂಗ್ರೆಸ್ ಹೈಕಮಾಂಡ್‌ಗೆ ಹಣ ಸಂದಾಯ ಮಾಡ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಅವರ ಹೈಕಮಾಂಡ್ ಗೆ ಎಟಿಎಂ ಆಗಿ ಪರಿವರ್ತನೆ ಆಗುತ್ತದೆ. ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನೂರಾರು ಕೋಟಿ ಹಣ ಪೋಲಾಗಿದೆ. ಹೈಕಮಾಂಡ್ ತೃಪ್ತಿ ಪಡಿಸಲು ಗುತ್ತಿಗೆದಾರರ ಬಳಿ

ಪುಟ 2ಕ್ಕೆ

### ವಿಜಯೇಂದ್ರ 'ಕಲೆಕ್ಷನ್ ಕಿಂಗ್'

* ಯಡಿಯೂರಪ್ಪ ಹೆಸರು ಕೆಡಿಸಿದ್ದೇ ಆತ: ಡಿಕೆಶಿ ತಿರುಗೇಟು

**ಬೆಳಗಾವಿ:** ರಾಜ್ಯದಲ್ಲಿ ಕಲೆಕ್ಷನ್ ಕಿಂಗ್ ಅಂದರೆ ಬಿ.ವೈ.ವಿಜಯೇಂದ್ರ. ನಾವು ನಿಮ್ಮ ಕಲೆಕ್ಷನ್ ಬಗ್ಗೆ ಬಿಚ್ಚಿಡಬೇಕಾ? ವಿಜಯೇಂದ್ರಗೆ ಅನುಭವದ ಕೊರತೆಯಿದೆ. ಅವರ ತಂದೆ ಯಡಿಯೂರಪ್ಪ ಹೆಸರು ಕೆಡಿಸಿದ್ದೇ ವಿಜಯೇಂದ್ರ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಗುಡುಗಿದರು.

ಬೆಳಗಾವಿಯಲ್ಲಿ ಗುರುವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, ವಿರೋಧ ಪಕ್ಷದವರ ಮಾತು, ಆರೋಪಕ್ಕೆ ಇತಿಮಿತಿ ಇರಬೇಕು. ರಾಜ್ಯದ ಯಾವ ಖಜಾನೆ ಖಾಲಿಯಾಗಿದೆ. ಈ ಬಗ್ಗೆ ಅವರು ಸದನಕ್ಕೆ ಬಂದು ಮಾತನಾಡಲಿ. ತಪ್ಪಿಸಿಕೊಂಡು ಹೊರಗೆ ಮಾತನಾಡುವುದಲ್ಲ. ಸದನದಲ್ಲಿ ಪ್ರಶ್ನೆ ಮಾಡಲಿ ಎಂದು



ಸವಾಲು ಹಾಕಿದರು.

ಫೆಬ್ರವರಿ–ಮಾರ್ಚ್ ತಿಂಗಳ ಗೃಹಲಕ್ಷ್ಮಿ ಯೋಜನೆ ಹಣವನ್ನು ಸರ್ಕಾರ ಬಿಡುಗಡೆ ಮಾಡಿಲ್ಲ, ಸರ್ಕಾರ ಬಡವರ ಹಣ ಲೂಟಿ ಮಾಡಿದೆ ಎಂಬ ಬಿಜೆಪಿ ನಾಯಕ ಬಿ.ವೈ.ವಿಜಯೇಂದ್ರ

ಪುಟ 2ಕ್ಕೆ

### 3,600 ಹುದ್ದೆ ಭರ್ತಿಗೆ ಕ್ರಮ

ಪೊಲೀಸ್ ನೇಮಕಾತಿಗೆ ಆರ್ಥಿಕ ಇಲಾಖೆ ಒಪ್ಪಿಗೆ: ಪರಮೇಶ್ವರ್

**ಬೆಂಗಳೂರು:** ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿಯಿರುವ 3,600 ಖಾಲಿ ಹುದ್ದೆಗಳ ಭರ್ತಿಗೆ ಆರ್ಥಿಕ ಇಲಾಖೆಯಿಂದ ಒಪ್ಪಿಗೆ ಸಿಕ್ಕಿದೆ. ಅಧಿಸೂಚನೆ ಹೊರಡಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.



ವಿಧಾನ ಪರಿಷತ್‌ನಲ್ಲಿ ಪ್ರಶ್ನೋತ್ತರ ಕಲಾಪದ ವೇಳೆ ಸದಸ್ಯರಾದ ಜಗದೇವ್ ಗುತ್ತೇದಾರ ಪ್ರಶ್ನೆಗೆ ಉತ್ತರ ನೀಡಿದ ಅವರು, ಒಳಮೀಸಲಾತಿ ಪ್ರಕ್ರಿಯೇ ಪೂರ್ವದಲ್ಲೇ ಅಧಿಸೂಚನೆ ಆಗಿದ್ದರಿಂದ ಈಗಾಗಲೇ 947 ಪಿಎಸ್‌ಐಗಳ ಭರ್ತಿ ಪ್ರಕ್ರಿಯೆ ಪೂರ್ಣಗೊಂಡು ಅಭ್ಯರ್ಥಿಗಳು ತರಬೇತಿಯಲ್ಲಿದ್ದಾರೆ. ಒಳಮೀಸಲು ಕಲ್ಪಿಸುವ ಪ್ರಕ್ರಿಯೆ ಪೂರ್ಣವಾಗಿದ್ದರಿಂದ ಈಗ ಇಲಾಖೆಯಲ್ಲಿ ನೇಮಕಾತಿ ಪ್ರಕ್ರಿಯೆ ಚುರುಕುಗೊಂಡಿದೆ ಎಂದು ಹೇಳಿದರು.

ಬಿಜೆಪಿ ಅವಧಿಯಲ್ಲಿ ನೇಮಕಾತಿ ಪ್ರಕ್ರಿಯೆಯೇ ಆಗಿರಲಿಲ್ಲ. ನಮ್ಮ ಸರ್ಕಾರ ಇದನ್ನು ಮಾಡುತ್ತಿದೆ. ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಅನುದಾನದಡಿಯಲ್ಲಿ ಕಾಳಗಿ ತಾಲೂಕಿನಲ್ಲಿ

ಪುಟ 2ಕ್ಕೆ

### ಬಿಪಿಎಲ್ ಆದಾಯ ಮಿತಿ ಪರಿಷ್ಕರಣೆಗೆ ಚಿಂತನೆ: ಸಚಿವ

**ಬೆಳಗಾವಿ:** ಬಿಪಿಎಲ್ ಕಾರ್ಡ್ ಪಡೆಯಲು ಇರುವ ಆದಾಯ ಮಿತಿ ಪರಿಷ್ಕರಣೆಗೆ ಸರ್ಕಾರ ಚಿಂತನೆ ನಡೆಸಿದೆ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

ವಿಧಾನಸಭೆಯಲ್ಲಿ ಬಂಟ್ವಾಳ ಶಾಸಕ ರಾಜೇಶ್ ನಾಯ್ಕ್ ಪ್ರಶ್ನೆಗೆ ಗುರುವಾರ ಉತ್ತರಿಸಿದ ಮುನಿಯಪ್ಪ ಅವರು, ಕೇಂದ್ರ ಸರ್ಕಾರ ಬಿಪಿಎಲ್ ಕಾರ್ಡ್ ದಾರರ ಆದಾಯವನ್ನು 1.20ಲಕ್ಷ ರೂ.ಗೆ ಮಿತಿಗೊಳಿಸಿದೆ. ಆದರೆ ಕೂಲಿ ಕೆಲಸಗಾರರಿಗೂ ಪ್ರತಿದಿನ 500 ರೂ. ದೊರೆಯುತ್ತದೆ. ಇದರ ಆಧಾರದಲ್ಲಿ ಅವರ ಆದಾಯ ವರ್ಷಕ್ಕೆ 1.80 ಲಕ್ಷ ರೂ.ಗಿಂತ ಅಧಿಕವಾಗುತ್ತಿದೆ. ಹೀಗಾಗಿ ಆದಾಯ ಮಿತಿ ಪರಿಷ್ಕರಣೆ ಕುರಿತು ಚಿಂತನೆ ನಡೆದಿದೆ ಎಂದು ತಿಳಿಸಿದರು.

### ಮ.ಬೆಟ್ಟದ ಸುತ್ತಲಿನ ಗ್ರಾಮಾಭಿವೃದ್ಧಿಗೆ ಆಗ್ರಹ

**ಬೆಳಗಾವಿ:** ಚಾಮರಾಜನಗರದ ಮಲೆ ಮಹದೇಶ್ವರ ಬೆಟ್ಟದ ದೇವಾಲಯ ಆದಾಯದಲ್ಲಿ ಸುತ್ತಮುತ್ತಲಿನ ಹಳ್ಳಿಗಳ ಮೂಲಸೌಕರ್ಯ ಅಭಿವೃದ್ಧಿ ಪಡಿಸಬೇಕು ಎಂದು ವಿಧಾನ ಪರಿಷತ್ ಸದಸ್ಯ ಕೆ.ಶಿವಕುಮಾರ್ ಆಗ್ರಹಿಸಿದರು.ಅಧಿವೇಶನದಲ್ಲಿ ಗುರುವಾರ ಮಾತನಾಡಿದ ಅವರು, ದೇವಾಲಯಕ್ಕೆ ಕೋಟ್ಯಾಂತರ ರೂಪಾಯಿ ಆದಾಯ ಬರುತ್ತದೆ. ಅದರಲ್ಲಿ ಸ್ಥಳೀಯ ಗ್ರಾಮಗಳನ್ನು



ಪುಟ 2ಕ್ಕೆ


### ಅಪರಾಧ ಕೃತ್ಯ: ಪೊಲೀಸರ ವಜಾ

#### ಕಳ್ಳತನ, ದರೋಡೆ ಕೇಸ್‌ನಲ್ಲಿ ಪೊಲೀಸರು ಭಾಗಿ: ವಿಪಕ್ಷ ಟೀಕೆ

**ಬೆಳಗಾವಿ:** ದರೋಡೆ, ಕಳ್ಳತನ ಸೇರಿದಂತೆ ಅಕ್ರಮಗಳಲ್ಲಿ ಭಾಗಿಯಾರುವ ಪೊಲೀಸರನ್ನು ಕೆಲಸದಿಂದಲೇ ವಜಾ ಮಾಡುವ ಕೆಲಸವನ್ನು ಸರ್ಕಾರ ಮಾಡಲಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.

ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಜೆಡಿಎಸ್ ಸದಸ್ಯ ಶರವಣ ಮಾತನಾಡಿ, ರಾಜ್ಯದಲ್ಲಿ ದರೋಡೆ, ಮನೆಗಳ್ಳತನ, ಹಗಲು ದರೋಡೆಗಳು ಜಾಸ್ತಿ ಆಗಿವೆ. ಪೊಲೀಸ್ ಅಧಿಕಾರಗಳೇ ಕಳ್ಳತನದಲ್ಲಿ ಭಾಗಿಯಾಗ್ತಾ ಇದ್ದಾರೆ. ಬೇಲಿಯೇ ಎದ್ದು ಹೊಲ ಮೆಯ್ಯುತ್ತಿದೆ. ಪೊಲೀಸರ ಮೇಲೆ ನಂಬಿಕೆ ಕಳೆದು ಹೋಗ್ತಿದೆ. ಕಳ್ಳತನ, ದರೋಡೆ ಕೇಸ್‌ನಲ್ಲಿ ಪೊಲೀಸರು ಭಾಗಿಯಾಗುತ್ತಿದ್ದಾರೆ. ಇಂತಹ ಅಕ್ರಮದಲ್ಲಿ ಭಾಗಿಯಾದವರನ್ನು ಕೆಲಸದಿಂದ ವಜಾ ಮಾಡಿ. ಇದಕ್ಕೆ ಕಾನೂನು ತರಬೇಕು ಅಂತ ಒತ್ತಾಯ ಮಾಡಿದರು.

ಸಚಿವ ಪರಮೇಶ್ವರ್ ಉತ್ತರ ನೀಡಿ, 37 ಜಿಲ್ಲೆಗಳಲ್ಲಿ 88 ಜನ ಪೊಲೀಸರು ಅಕ್ರಮಗಳಲ್ಲಿ ಭಾಗಿಯಾದ ಕೇಸ್ ಇದೆ. ನಮ್ಮ ಸರ್ಕಾರ ಬಂದಾಗಿನಿಂದ ಮಾತ್ರ ಇದು ಆಗಿಲ್ಲ. 1.6 ಲಕ್ಷ ಸಿಬ್ಬಂದಿ ಇದ್ದಾರೆ ಎಲ್ಲರನ್ನು ಒಂದೇ ತಕ್ಕಡಿಯಾಗಿ ತೂಗೋಕೆ



ಆಗೊಲ್ಲ. ಎಲ್ಲರೂ ಕಳ್ಳರು ಅನ್ನೋದು ಸರಿಯಲ್ಲ. ಒಳ್ಳೆಯ ಅಧಿಕಾರಿಗಳು ಇದ್ದಾರೆ. ಎಲ್ಲರನ್ನೂ ಒಟ್ಟಿಗೆ ಸೇರಿಸೋದು ಬೇಡ ಎಂದು ಹೇಳಿದರು.

ಅಕ್ರಮದಲ್ಲಿ ಭಾಗಿ ಆಗಿರುವ 88 ಪೊಲೀಸರ ಮೇಲೆ ಕೇಸ್ ಹಾಕಲಾಗಿದೆ. ಬಂಧನ ಮಾಡಲಾಗಿದೆ. ಸಾವಿರಾರು ಕೋಟಿ ಡ್ರಗ್ಸ್ ಹಿಡಿದ್ದೇವೆ. ಪೊಲೀಸ್ ಇಲಾಖೆ ಚೆನ್ನಾಗಿ ಕೆಲಸ ಮಾಡ್ತಿರೋದಕ್ಕೆ ನಮ್ಮ ರಾಜ್ಯ ಶಾಂತವಾಗಿದೆ. ಬೇರೆ ರಾಜ್ಯದ ಬಗ್ಗೆಯೂ ನೋಡಬೇಕು. ಅಕ್ರಮದಲ್ಲಿ ಭಾಗಿಯಾಗೋ ಪೊಲೀಸರನ್ನ ಅಮಾನತು ಅಲ್ಲ. ಅವರನ್ನ ಕೆಲಸದಿಂದ ವಜಾ ಮಾಡೋ ಕೆಲಸ ಮಾಡ್ತಾ ಇದ್ದೇವೆ ಎಂದು ತಿಳಿಸಿದರು.

### ಜಾರಕಿಹೊಳಿ 'ದಲಿತಾಸ್ತ್ರ ಪ್ರಯೋಗ'

#### ದಲಿತ ಸಚಿವರು, ಶಾಸಕರು, ಉದ್ಯಮಿಗಳ 'ಡಿನ್ನರ್ ಮೀಟಿಂಗ್'

**ಬೆಳಗಾವಿ:** ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವ ಬದಲಾವಣೆ ವಿಚಾರ ತಾರಕಕ್ಕೇರಿರುವ ಸಂದರ್ಭದಲ್ಲಿಯೇ ಉಬಯ ಬಣಗಳು ಸಮಾನ ಮನಸ್ಕರ ಹೆಸರಿನಲ್ಲಿ ಡಿನ್ನರ್ ಮೀಟಿಂಗ್ ಮುಂದುವರಿದಿದೆ. ಕಾಂಗ್ರೆಸ್ ನಾಯಕರು ದಿನಕ್ಕೊಂದು ಡಿನ್ನರ್ ಮೀಟಿಂಗ್ ನಡೆಸುವ ಮೂಲಕ ತಮ್ಮ ಬಣಗಳ ಶಕ್ತಿ ಪ್ರದರ್ಶನ ನಡೆಸುತ್ತಿದ್ದಾರೆ.



ಡಿಸಿಎಂ ಡಿ.ಕೆ.ಶಿವಕುಮಾರ್ ಆಪ್ತರಾದ 40ಕ್ಕೂ ಹೆಚ್ಚು ಶಾಸಕರಿಗೆ ಔತಣ ಕೂಟ ನೀಡಿದ್ದ ಬೆನ್ನಲ್ಲೇ ಸಿದ್ದರಾಮಯ್ಯ ಅವರ ಆಪ್ತ ಸಚಿವ ಸತೀಶ್ ಜಾರಕಿಹೊಳಿ ಅವರು ಈಗ ದಲಿತ ಶಾಸಕರು, ಸಚಿವರ ಡಿನ್ನರ್ ಸಭೆ ನಡೆಸಿರುವುದು ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ.

ಬೆಳಗಾವಿ ಖಾಸಗಿ ಹೋಟೆಲ್‌ನಲ್ಲಿ ಬುಧವಾರ ರಾತ್ರಿ ಸತೀಶ್ ಜಾರಕಿಹೊಳಿ ಅವರು ಸಭೆ ನಡೆಸಿದ್ದಾರೆ. ಈ ಸಭೆಯಲ್ಲಿ ದಲಿತ ಮುಖ್ಯಮಂತ್ರಿ ವಿಷಯ ಪ್ರಸ್ತಾಪವಾಗದಿದ್ದರೂ ದಲಿತ ರಾಜಕಾರಣಿಗಳು ಹಾಗೂ ಉದ್ಯಮಿಗಳ ಸಮಸ್ಯೆ ಆಲಿಸುವ ನೆಪದಲ್ಲಿ ದಲಿತ ಸಿಎಂ ಬೇಡಿಕೆಯನ್ನು ಮುನ್ನೆಲೆಗೆ ತಂದಿದ್ದಾರೆಂಬ ಮಾತುಗಳು ಕೇಳಿ ಬರುತ್ತಿದೆ.

ಸಚಿವರಾದ ಕೆ.ಎಚ್.ಮುನಿಯಪ್ಪ, ಆರ್.ಬಿ.ತಿಮ್ಮಾಪುರ್, ಶಾಸಕರಾದ ಟಿ.ರಘುಮೂರ್ತಿ, ಎ.ಆರ್.ಕೃಷ್ಣಮೂರ್ತಿ, ಬಿಜೆಪಿಯ ಛಲವಾದಿ ನಾರಾಯಣಸ್ವಾಮಿ, ದುರ್ಯೋಧನ ಐಹೊಳೆ, ಎಂ.ಚಂದ್ರಪ್ಪ, ಜೆಡಿಎಸ್‌ನ ಕರೆಮ್ಮ ನಾಯಕ್ ಸೇರಿದಂತೆ ವಿವಿಧ ಪಕ್ಷಗಳ 33 ಶಾಸಕರು ಭಾಗವಹಿಸಿದ್ದರು.

ಕೈಗಾರಿಕಾ ಭೂಮಿಯ ಶೇ.24ರಷ್ಟು ಎಸ್‌ಸಿ/ಎಸ್‌ಟಿಗಳಿಗೆ ಮೀಸಲಿಡುವ ನಿಯಮವನ್ನು ಉಲ್ಲಂಘಿಸಲಾಗಿದೆ. 239 ಎಕರೆಗಳನ್ನು ಇತರರಿಗೆ ಅನ್ಯಾಯವಾಗಿ ಹಂಚಿಕೆ ಮಾಡಲಾಗಿದೆ ಎಂದು ಉದ್ಯಮಿಗಳು ಈ ಸಂದರ್ಭದಲ್ಲಿ ಆರೋಪಿಸಿದ್ದಾರೆ ಎನ್ನಲಾಗಿದೆ.

## 'ಜಿ ರಾಮ್ ಜಿ' ಮಸೂದೆ ಅಂಗೀಕಾರ

### * ಮಹಾತ್ಮ ಗಾಂಧಿ ಹೆಸರು ಕೈಬಿಡುವುದಕ್ಕೆ ಪ್ರತಿಪಕ್ಷಗಳ ತೀವ್ರ ವಿರೋಧ

**ನವದೆಹಲಿ:** ಪ್ರತಿಪಕ್ಷಗಳ ತೀವ್ರ ವಿರೋಧದ ನಡುವೆಯೇ ಅಸ್ತಿತ್ವದಲ್ಲಿರುವ ಎಂನರೇಗಾ ಯೋಜನೆಯಲ್ಲಿ (ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ) ಮಹಾತ್ಮ ಗಾಂಧಿ ಹೆಸರನ್ನು ತೆಗೆದುಹಾಕುವ ಮೂಲಕ ಜಿ ರಾಮ್ ಜಿ ಮಸೂದೆಯನ್ನು ಲೋಕಸಭೆಯಲ್ಲಿ ಗುರುವಾರ ಅಂಗೀಕಾರಿಸಲಾಯಿತು.

ನರೇಗಾ ಯೋಜನೆಯಿಂದ ಮಹಾತ್ಮ ಗಾಂಧಿ ಹೆಸರನ್ನು ಕೈಬಿಟ್ಟಿದ್ದನ್ನು ವಿರೋಧಿಸಿ, ಪ್ರತಿಪಕ್ಷ ಸದಸ್ಯರು ವಿಧೇಯಕದ ಪ್ರತಿಯನ್ನು ಹರಿದು ಹಾಕಿ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಮಸೂದೆಯನ್ನು ಸ್ಥಾಯಿ ಸಮಿತಿಗೆ ಕಳುಹಿಸಬೇಕೆಂಬ ವಿರೋಧ ಪಕ್ಷಗಳ ಒತ್ತಾಯವನ್ನು ಸ್ಪೀಕರ್ ಓಂ ಬಿರ್ಲಾ ತಿರಸ್ಕರಿಸಿದರು. ಶಾಸನದ ಬಗ್ಗೆ ಸುದೀರ್ಘ ಚರ್ಚೆ

ಪುಟ 2ಕ್ಕೆ

### ಸಂಸತ್ ಆವರಣದಲ್ಲಿ ಪ್ರತಿಪಕ್ಷಗಳ ಪ್ರತಿಭಟನೆ

**ನವದೆಹಲಿ:** ಕೇಂದ್ರ ಸರ್ಕಾರವು ಅಸ್ತಿತ್ವದಲ್ಲಿರುವ ನರೇಗಾ ಯೋಜನೆಯಿಂದ ಮಹಾತ್ಮ ಗಾಂಧಿ ಹೆಸರನ್ನು ತೆಗೆದುಹಾಕುವ ಕ್ರಮವನ್ನು ಖಂಡಿಸಿ ವಿರೋಧ ಪಕ್ಷದ ನಾಯಕರು ಗುರುವಾರ ಸಂಸತ್ ಭವನದ ಆವರಣದಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು. ಮಸೂದೆಯನ್ನು ಹಿಂಪಡೆಯುವಂತೆ ಒತ್ತಾಯಿಸಿದರು.

ಮಹಾತ್ಮ ಗಾಂಧಿ ನರೇಗಾ ಎಂದು ಬರೆದಿದ್ದ ಬೃಹತ್ ಬ್ಯಾನರ್ ಹಿಡಿದು, ಅವರು ಪ್ರೇರಣಾ ಸ್ಥಳದಲ್ಲಿರುವ ಗಾಂಧಿ ಪ್ರತಿಮೆಯಿಂದ ಮಕರ ದ್ವಾರದವರೆಗೆ

ಪುಟ 2ಕ್ಕೆ




### ಉಪಗ್ರಹ ಆಧಾರಿತ ಟೋಲ್ ಸಂಗ್ರಹ

2026ರ ಅಂತ್ಯಕ್ಕೆ ಜಾರಿ: ಕೇಂದ್ರ ಸಚಿವ ಗಡ್ಕರಿ ಘೋಷಣೆ


**ನವದೆಹಲಿ:** ದೇಶಾದ್ಯಂತ 2026ರ ಅಂತ್ಯದ ವೇಳೆಗೆ ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯು ಕಾರ್ಯರೂಪಕ್ಕೆ ಬರಲಿದೆ ಎಂದು ಕೇಂದ್ರ ಸಾರಿಗೆ ಸಚಿವ ನಿತಿನ್ ಗಡ್ಕರಿ ಘೋಷಣೆ ಮಾಡಿದರು.

ರಾಜ್ಯಸಭೆಯಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಮಾತನಾಡಿದ ಅವರು, ಹೊಸ ತಂತ್ರಜ್ಞಾನ ಉಪಗ್ರಹ ಮತ್ತು ಎಐ ಆಧಾರಿತವಾಗಿದೆ. ಪ್ರಯಾಣಿಕರು ಟೋಲ್ ಪ್ಲಾಜಾಗಳಲ್ಲಿ ಕಾಯುವ ಅಗತ್ಯವಿಲ್ಲ ಎಂದು ತಿಳಿಸಿದರು.

ಮೊದಲು ಟೋಲ್‌ನಲ್ಲಿ ಹಣ ಪಾವತಿಸಬೇಕಿತ್ತು. ಈ ಪ್ರಕ್ರಿಯೆ ಮುಗಿಸಿಕೊಳ್ಳಲು 3ರಿಂದ 10 ನಿಮಿಷ ಬೇಕಾಗಿತ್ತು. ಫಾಸ್ಟ್ ಟ್ಯಾಗ್ ಬಂದ ನಂತರ 60 ಸೆಕೆಂಡ್ ಅಥವಾ ಅದಕ್ಕಿಂತ ಕಡಿಮೆ ಅವಧಿಯಲ್ಲಿ ಟೋಲ್ ಪ್ರಕ್ರಿಯೆ ಮುಕ್ತಾಯವಾಗುತ್ತಿದೆ. ಇದರಿಂದ ನಮ್ಮ ಆದಾಯ ಕನಿಷ್ಠ 5 ಸಾವಿರ ಕೋಟಿ ರೂ. ಏರಿಕೆಯಾಗಿದೆ ಎಂದು ಸಚಿವರು ವಿವರಿಸಿದರು.

ದೇಶಾದ್ಯಂತ ಬಹುಪಥ ಮುಕ್ತ ಹರಿವು ಜಾರಿಯಾದರೆ ಕಾರುಗಳು ಗಂಟೆಗೆ ಗರಿಷ್ಠ 80 ಕಿ.ಮೀ. ವೇಗದಲ್ಲಿ ಟೋಲ್ ದಾಟಬಹುದು. 2026ರ ಅಂತ್ಯದ ವೇಳೆಗೆ ನಾವು ಈ ಕೆಲಸ ಪೂರ್ಣಗೊಳಿಸುತ್ತೇವೆ. ಇದರಿಂದ ಸುಮಾರು 1,500 ಕೋಟಿ ರೂ. ಮೌಲ್ಯದ ಇಂಧನ ಉಳಿತಾಯವಾಗಲಿದೆ. ನಮ್ಮ ಆದಾಯ ಇನ್ನೂ 6,000 ಕೋಟಿ

ಪುಟ 2ಕ್ಕೆ



## ಮೊದಲ ಪುಟದಿಂದ

### ಮಲೆಮಹದೇಶ್ವರ ಬೆಟ್ಟದ ಸುತ್ತಲಿನ ಗ್ರಾಮಾಭಿವೃದ್ಧಿಗೆ ಶಿವಕುಮಾರ್ ಆಗ್ರಹ

ಕೋಟ್ಯಾಂತರ ರೂಪಾಯಿ ಆದಾಯ ಬರುತ್ತದೆ. ಅದರಲ್ಲಿ ಸ್ಥಳೀಯ ಗ್ರಾಮಗಳನ್ನು ಅಭಿವೃದ್ಧಿಪಡಿಸಲು ಅನುಕೂಲವಾಗುವಂತೆ ನಿಯಮ ತಿದ್ದುಪಡಿ ಮಾಡಬೇಕು ಎಂದು ಕೋರಿದರು.

ಈ ಗ್ರಾಮಗಳಲ್ಲಿ ದಶಕಗಳಿಂದಲೂ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಸಮರ್ಪಕವಾದ ರಸ್ತೆಗಳಿಲ್ಲದೆ ಸಂಚಾರಕ್ಕೆ ಬಹಳ ತೊಂದರೆ ಉಂಟಾಗುತ್ತಿದೆ. ಅಲ್ಲಿನ ಮಹಿಳೆಯರು ನೀರು ತರಲು ಪ್ರತಿ ನಿತ್ಯವೂ ಕಾಡಿನ ದುರ್ಗಮ ಹಾದಿಯಲ್ಲಿ ತೆರಳುವುದು ಶೋಚನೀಯ. ರಸ್ತೆ ಸಂಪರ್ಕವಿಲ್ಲದ ಕಾರಣ ಗರ್ಭಿಣಿಯರ ಪ್ರಸವ ಸಂದರ್ಭದಲ್ಲಿ ಬಟ್ಟೆ ಜೋಲಿಯಲ್ಲಿ ಹೊತ್ತುಕೊಂಡು ಆಸ್ಪತ್ರೆ ದಾಖಲಿಸುವ ದಯನೀಯ ಸ್ಥಿತಿ ಎದುರಾಗಿದೆ. ಇದು ಮಾನವ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು. ಬೆಟ್ಟದಲ್ಲಿ ಅನೇಕ ವರ್ಷಗಳಿಂದ ವಾಸಿಸುತ್ತಿರುವ ಜನರೇ ಮಹದೇಶ್ವರ ಸ್ವಾಮಿಯ ನಿಜವಾದ ಭಕ್ತರು. ಅವರು ಕಾಡಿನ ಸಂರಕ್ಷಕರೂ ಅಗಿದ್ದಾರೆ. ದೇವಾಲಯದ ಅಭಿವೃದ್ಧಿಗೆ ಅಡ್ಡಿಯಿಲ್ಲ. ಜೊತೆಗೆ ಅಲ್ಲಿನ ಸ್ಥಳೀಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ದೇವಸ್ಥಾನದ ಸಂಪನ್ಮೂಲವನ್ನು ವಿನಿಯೋಗಿಸಬೇಕಿದೆ ಎಂದು ಹೇಳಿದರು.

ಇತ್ತೀಚಿಗೆ ಸರ್ಕಾರವು ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿ ಹಲವಾರು ಅಭಿವೃದ್ಧಿ ಯೋಜನೆ ಘೋಷಣೆ ಮಾಡಿದೆ. ದೇವಾಲಯಕ್ಕೆ ಲಕ್ಷಾಂತರ ಜನರು ಭೇಟಿ ನೀಡುತ್ತಾರೆ. ಶಕ್ತಿ ಯೋಜನೆಯಿಂದ ಮಹಿಳೆಯರ ಭೇಟಿ ಹೆಚ್ಚಾಗಿದೆ. ಹೀಗಾಗಿ ಎರಡನೇ ಹಂತದಲ್ಲಿ ಕಾವೇರಿ ನೀರು ತರುವ ಯೋಜನೆಯಿಂದ ಕುಡಿಯುವ ನೀರು ಪೂರೈಸಬೇಕಿದೆ ಎಂದರು. ಮಲೆಮಹದೇಶ್ವರ ದೇವಾಲಯದಲ್ಲಿ ಹೊರಗುತ್ತಿಗೆ ಹಾಗೂ ತಾತ್ಕಾಲಿಕವಾಗಿ ವಿವಿಧ ಹುದ್ದೆಗಳಲ್ಲಿ ಕೆಲಸ ಮಾಡುತ್ತಿರುವ ಸ್ಥಳೀಯ ಉದ್ಯೋಗಿಗಳನ್ನು ಕಾಯಂಗೊಳಿಸಬೇಕು. ಆ ಮೂಲಕ ಅವರ ಭವಿಷ್ಯ ರೂಪಿಸಬೇಕಿದೆ ಎಂದು ಒತ್ತಾಯ ಮಾಡಿದರು.

### ಸಂಸತ್ ಆವರಣದಲ್ಲಿ ಪ್ರತಿಪಕ್ಷಗಳ ಪ್ರತಿಭಟನೆ

ಮೆರವಣಿಗೆ ನಡೆಸಿದರು. ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಮೋದಿ ಸರ್ಕಾರ ರಾಷ್ಟ್ರಪಿತ ಮಹಾತ್ಮ ಗಾಂಧಿಯವರನ್ನು ಅವಮಾನಿಸಿದೆ. ಭಾರತದ ಹಳ್ಳಿಗಳಲ್ಲಿ ಸಾಮಾಜಿಕ– ಆರ್ಥಿಕ ಪರಿವರ್ತನೆಗೆ ಕಾರಣವಾದ ಕೆಲಸ ಮಾಡುವ ಹಕ್ಕನ್ನು ಸಹ ಹತ್ತಿಕ್ಕಿದೆ. ಆಡಳಿತ ನಡೆಸುತ್ತಿರುವ ಸರ್ವಾಧಿಕಾರಿ ಸರ್ಕಾರದ ಈ ದಬ್ಬಾಳಿಕೆಯ ವಿರುದ್ಧ, ನಾವು ಸಂಸತ್ತಿನಿಂದ ಹಿಡಿದು ಬೀದಿಗಳಲ್ಲಿಯೂ ಹೋರಾಡುತ್ತೇವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು.

ಮಹಾತ್ಮ ಗಾಂಧಿ ನರೇಗಾ ಯೋಜನೆಗೆ ಮರುನಾಮಕರಣ ಮಾಡುವ ಬಗ್ಗೆ ಮಾತ್ರವಲ್ಲ ಇದು ಕೆಲಸ ಮಾಡುವ ಹಕ್ಕನ್ನು ಕಸಿದುಕೊಳ್ಳಲಾಗುತ್ತಿದೆ. ಬಿಜೆಪಿಯವರು ನಾವು ನೀಡಿದ ಹಕ್ಕನ್ನು ಕಸಿದುಕೊಳ್ಳುತ್ತಿದ್ದಾರೆ. ಇದು ಬಡವರಿಗೆ ತುಂಬಾ ಕಷ್ಟಕರವಾಗಿದೆ. ನಾವು ಇದಕ್ಕಾಗಿ ಕೊನೆಯವರೆಗೂ ಹೋರಾಡುತ್ತೇವೆ. ನಾವು ಬೀದಿಗಿಳಿದು ಹೋರಾಡುತ್ತೇವೆ ಎಂದು ಖರ್ಗೆ ತಿಳಿಸಿದರು.

ಹಿರಿಯ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ಡಿಎಂಕೆಯ ಕೆ ಕನ್ನಿಮೋಳಿ, ಟಿಆರ್ ಬಲ್ಲು, ಎ ರಾಜಾ, ಐಯುಎಂಎಲ್‌ನ ಇ ಟಿ ಮೊಹಮ್ಮದ್ ಬಶೀರ್, ಶಿವಸೇನೆ (ಯುಬಿಟಿ) ಯ ಅರವಿಂದ್ ಸಾವಂತ್ ಮತ್ತು ಆರ್‌ಎಸ್‌ಪಿಯ ಎನ್‌ಕೆ ಪ್ರೇಮಚಂದ್ರನ್ ಸೇರಿದಂತೆ ಹಲವು ನಾಯಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ವಿಜಯೇಂದ್ರ 'ಕಲೆಕ್ಷನ್ ಕಿಂಗ್'

ಆರೋಪಕ್ಕೆ ತೀವ್ರವಾಗಿ ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದರು.

ಸದನದಲ್ಲಿ ಇಂದು ಮತ್ತು ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕಂದಾಯ ಸಚಿವರು ಉತ್ತರ ಕರ್ನಾಟಕ ಅಭಿವೃದ್ಧಿ ಬಗ್ಗೆ ಮಾತನಾಡುತ್ತಾರೆ. ಮಹದಾಯಿ ಮತ್ತು ನೀರಾವರಿ ಅಭಿವೃದ್ಧಿ ಬಗ್ಗೆ ನಾನು ಸಹ ಉತ್ತರ ಕೊಡುತ್ತೇನೆ. ಸರ್ಕಾರ ರೈತರ ಪರವಾಗಿದೆ ಎಂದರು.

ನ್ಯಾಷನಲ್ ಹೆರಾಲ್ಡ್ ಪ್ರಕರಣವನ್ನು ಈಗಾಗಲೇ ಕೈಬಿಡಲಾಗಿದೆ. ಒಂದು ಎಫ್‌ಐಆರ್ ಇದೆ. ಅದನ್ನು ಹಿಂಪಡೆದರೆ ಉತ್ತಮ. ಗೃಹಲಕ್ಷ್ಮಿ ಯೋಜನೆ ಬಗ್ಗೆ ಯಾವುದೇ ತಪ್ಪು ಮಾಹಿತಿ ಸರ್ಕಾರದ ಕಡೆಯಿಂದ ಆಗಿಲ್ಲ. ಬಿಜೆಪಿಯವರು ಮುಖ್ಯ ವಿಷಯಗಳಿಂದ ವಿಮುಖರಾಗಲು ಗೃಹಲಕ್ಷ್ಮಿ ವಿಚಾರವನ್ನು ಎತ್ತುತ್ತಿದ್ದಾರೆ ಎಂದು ಡಿ.ಕೆ ಶಿವಕುಮಾರ್ ಟೀಕಿಸಿದರು.

### 7 ವರ್ಷ ಗರಿಷ್ಠ ಶಿಕ್ಷೆ: ಪರಮೇಶ್ವರ್

ನಾಯಕ ಆರ್.ಅಶೋಕ್, ರಾಜಕೀಯ ದ್ವೇಷ ತೀರಿಸಿಕೊಳ್ಳಲು ಇದನ್ನು ಬಳಕೆ ಮಾಡುವಂತಹ ಅವಕಾಶ ಸಿಕ್ಕಂತಾಗಿದೆ. ಇದು ಅಭಿವ್ಯಕ್ತಿ ಸ್ವಾತಂತ್ರ್ಯದ ಹರಣವಾಗಲಿದೆ. ಭ್ರಷ್ಟಾಚಾರದಂತಹ ಗಂಭೀರ ಆರೋಪಗಳ ಸುದ್ದಿ ಮಾಡಿದರೆ ಮಾಧ್ಯಮದ ಪ್ರತಿನಿಧಿಗಳು ಮೊದಲೇ ಜಾಮೀನು ಪಡೆಯುವಂತಹ ಸ್ಥಿತಿ ಇದೆ. ಇದು ಪ್ರಜಾಪ್ರಭುತ್ವ ವಿರೋಧಿ, ಅಭಿವ್ಯಕ್ತಿ ಸ್ವಾತಂತ್ರ್ಯ ವಿರೋಧಿ. ಪೊಲೀಸರು ಹಿಟ್ಲರ್ ಅಂತಾಗಲು ಅವಕಾಶ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

### ಬೈರತಿ 'ಬೆಂಕಿ ಹೇಳಿಕೆ'ಗೆ ವಿಪಕ್ಷ ಸದಸ್ಯರ ಆಕ್ರೋಶ

**ಬಾವಿಗಿಳಿದರು. ಇದರಿಂದ ವಿಪಕ್ಷಗಳ ಉಳಿದ ಸದಸ್ಯರಲ್ಲೂ ಗೊಂದಲ ಆಯ್ತು. ಕೊನೆಗೆ ಗದ್ದಲ ಹೆಚ್ಚಾಯ್ತು. ಗೊಂದಲ, ಗದ್ದಲದ ನಡುವೆ ಸರ್ಕಾರ ವಿಧೇಯಕ ಪಾಸ್ ಮಾಡಿತು. ಅಶೋಕ್ ಸೇರಿ ಅನೇಕರು ಮಸೂದೆ ಪ್ರತಿಗಳನ್ನು ಹರಿದು ಹಾಕಿ ಆಕ್ರೋಶ ವ್ಯಕ್ತಪಡಿಸಿದರು.**

# ಕೋಟೆಯಲ್ಲಿ ಹರಿದ ಯುವಕನ ನೆತ್ತರು

ಎಚ್.ಡಿ.ಕೋಟೆ: ಯುವಕ ನೋರ್ವನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಭೀಕರವಾಗಿ ಹತ್ಯೆಗೈದಿರುವ ಘಟನೆ ಪಟ್ಟಣದ ಮುಸ್ಲಿಂ ಬ್ಲಾಕ್ ನಲ್ಲಿ ನಡೆದಿದೆ. ಕೊಲೆಯಾದ ಯುವಕನನ್ನು 23 ವರ್ಷದ ಮೊಹಮ್ಮದ್ ರಫಿ ಅಲಿಯಾಸ್ ಕಲಾಂ ಎಂದು ಗುರುತಿಸಲಾಗಿದೆ. ಕೊಲೆ ಮಾಡಿರುವ ಆರೋಪಿ ತೌಹೀದ್ ಪಾಷಾ ಪತ್ತೆಗೆ ಪೊಲೀಸರು ಶೋಧ ನಡೆಸುತ್ತಿದ್ದಾರೆ.

**ಘಟನೆ ವಿವರ**

ಮೊಹಮ್ಮದ್ ಸಾಧಿಕ್–ರಿಹಾನಾ ಬೇಗಂ ದಂಪತಿಗೆ ಇಬ್ಬರು ಮಕ್ಕಳು. ಮಗಳು ರುಕ್ಸನಾ ಮದುವೆಯಾಗಿದ್ದು, ಹುಣಸೂರಿನಲ್ಲಿ ಪತಿ ಜೊತೆ ವಾಸವಾಗಿದ್ದಾರೆ. 12 ವರ್ಷಗಳ ಹಿಂದೆ ತಾಯಿ ಕಳೆದುಕೊಂಡಿರುವ ಮೊಹಮ್ಮದ್ ರಫಿ ಅಲಿಯಾಸ್ ಕಲಾಂ, ತಾಯಿ ಚಿಕ್ಕಮ್ಮ ಫರ್ಜಾನಾ ಜೊತೆ ಪಟ್ಟಣದ ಮುಸ್ಲಿಂ ಬ್ಲಾಕ್ ನಲ್ಲಿ ವಾಸವಾಗಿದ್ದು, ರಿಹಾನಾ ಬೇಗಂ ಮಾವ ನವಾಜ್ ಪಾಷಾ ಪುತ್ರ ತೌಹೀದ್ ಪಾಷಾ ಬಳಿ ವೆಲ್ಡಿಂಗ್ ಕೆಲಸ ಮಾಡುತ್ತಿದ್ದನು. ತಿಂಗಳ ಹಿಂದೆ ತೌಹೀದ್ ಪಾಷಾ ಬಳಿ ಕೆಲಸ ಬಿಟ್ಟು, ಬೇರೊಬ್ಬರ ಜೊತೆಗೆ ಕೆಲಸ ಮಾಡುತ್ತಿದ್ದ. ಈ ನಡುವೆ ಕಲಾಂ

ತೌಹೀದ್ ಪಾಷಾ ಬಳಿ ಹಣ ಪಡೆದುಕೊಂಡು ಸಾಲ ಕೂಡ ಹಿಂತಿರುಗಿಸಿದ್ದ ಎನ್ನಲಾಗಿದೆ. ಆದರೆ, ಕಲಾಂ ಕೆಲಸ ಮಾಡುತ್ತಿದ್ದ ಮಾಲೀಕನ ಜೊತೆ ತೌಹೀದ್ ಪಾಷಾಗೆ ವೈಷಮ್ಯವಿತ್ತು ಎಂದು ತಂದೆ ಮೊಹಮ್ಮದ್ ಸಾಧಿಕ್ ಹೇಳುತ್ತಾರೆ.

ಮಂಗಳವಾರ ರಾತ್ರಿ ಸುಮಾರು 10:15 ರ ಸುಮಾರಿಗೆ ಕರೆ ಕರೆ ಮಾಡಿದ್ದ ತೌಹೀದ್ ಪಾಷಾ, ನನ್ನ ತಾಯಿ ಬಗ್ಗೆ ನೀನು ಅಸಹ್ಯವಾಗಿ ಮಾತನಾಡಿದ್ದೀಯಾ , ಆದರೆ ನಾನು ನಿನ್ನ ತಾಯಿ ಬಗ್ಗೆ ಮಾತನಾಡಲ್ಲ. ನೀನು ಇರುವ ಜಾಗಕ್ಕೆ ಬಂದಿದ್ದೀನಿ ಬಾ ಅಂತ ಕಲಾಂನನ್ನ ದೊಡ್ಡ ಮಸೀದಿ ಹಿಂಭಾಗ ಕರೆಸಿಕೊಂಡಿದ್ದಾನೆ. ಈ ವೇಳೆ ಇಬ್ಬರ ನಡುವೆ ಮಾತಿಗೆ ಮಾತು ಬೆಳೆದು, ನನ್ನ ತಾಯಿ ಬಗ್ಗೆ ಮಾತನಾಡಿರುವ ನಿನ್ನನ್ನ ಬಿಡಲ್ಲ ಎಂದು ದೊಣ್ಣೆಯಿಂದ ಕಲಾಂಗೆ ತೌಹೀದ್ ಮನಬಂದಂತೆ ಹೊಡೆದಿದ್ದಾನೆ. ತೀವ್ರ ಹಲ್ಲೆಗೊಳಗಾಗಿ ಅಲ್ಲೇ ಒದ್ದಾಡುತ್ತಿದ್ದ ಕಲಾಂನನ್ನ ಅಲ್ಲೇ ಇದ್ದ ಇಬ್ಬರು ಹುಡುಗರು ಆಟೋದಲ್ಲಿ ಕರೆದುಕೊಂಡು ಹೋಗಿ ಹೆಚ್.ಡಿ.ಕೋಟೆ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿದ್ದಾರೆ. ಪ್ರಾಥಮಿಕ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್. ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಚಿಕಿತ್ಸೆ ಫಲಕಾರಿಯಾಗದೆ ಕಲಾಂ ಮೃತಪಪಟ್ಟಿದ್ದಾನೆ. ಈ ಸಂಬಂಧ ಮೃತ ಕಲಾಂ ಸಹೋದರಿ ರುಕ್ಸನಾ ಹೆಚ್‌ಡಿಕೋಟೆ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಸ್ಥಳ ಪರಿಶೀಲನೆ ನಡೆಸಿ, ಎಫ್‌ಐ ಆರ್ ದಾಖಲಿಸಿದ್ದಾರೆ.

### ಆರೋಪಿ ಪತ್ತೆಗೆ ತನಿಖಾ ತಂಡ ರಚನೆ

**ಕೊಲೆ ಪ್ರಕರಣ ಸಂಬಂಧ ಎಫ್ ಐ ಆರ್ ದಾಖಲಿಸಿಕೊಂಡಿರುವ ಹೆಚ್ ಡಿ ಕೋಟೆ ಪೊಲೀಸರು, ಆರೋಪಿ ಪತ್ತೆಗೆ ಶೋಧ ನಡೆಸುತ್ತಿದ್ದಾರೆ. ಕೊಲೆ ಬಳಿಕ ತಲೆಮರೆಸಿಕೊಂಡಿರುವ ಆರೋಪಿ ತೌಹೀದ್ ಪಾಷಾ ಪತ್ತೆಗೆ ಎರಡು ತನಿಖಾ ತಂಡ ರಚನೆ ಮಾಡಲಾಗಿದ್ದು, ಆದಷ್ಟು ಬೇಗ ಆರೋಪಿ ಬಂಧಿಸುವುದಾಗಿ ಡಿವೈಎಸ್ಪಿ ರವಿ ತಿಳಿಸಿದರು.**



**ನನಗೆ ತಾಯಿ ಇಲ್ಲ, ನನ್ನ ಸಹೋದರನನ್ನ ನಾನೇ ನೋಡಿಕೊಳ್ಳುತ್ತಿದೆ. ಒಂದು ತಿಂಗಳ ಹಿಂದೆ ತೌಹೀದ್ ಪಾಷಾ ಬಳಿ ಕೆಲಸಬಿಟ್ಟು ಬೇರೆ ಕಡೆ ಕೆಲಸ ಮಾಡುತ್ತಿದ್ದ. ನನಗೆ ತಾಯಿನೂ ಇಲ್ಲ, ಈಗ ತಮ್ಮನೂ ಇಲ್ಲ. ಯಾವ ವಿಷಯಕ್ಕೆ ಕೊಲೆ ಮಾಡಿದ್ದನೋ ಗೊತ್ತಿಲ್ಲ. ತೌಹೀದ್ ಬಳಿ ಕೆಲಸ ಮಾಡುವಾಗ 15 ಸಾವಿರ ರೂಪಾಯಿ ತೆಗೆದುಕೊಂಡು ವಾಪಸ್ ಕೂಡ ಮಾಡಿ ಕೆಲಸ ಬಿಟ್ಟಿದ್ದ. ನನ್ನ ತಮ್ಮನ ಜೀವ ತೆಗೆದಿರುವ ಆತನಿಗೆ ಗಲ್ಲು ಶಿಕ್ಷೆಯಾಗಬೇಕು. ಕಠಿಣ ಶಿಕ್ಷೆ ವಿಧಿಸಿ ನನ್ನ ಸಹೋದರನ ಸಾವಿಗೆ ಪೊಲೀಸರು ನ್ಯಾಯ ಕೊಡಿಸಬೇಕು.**

–**ರುಕ್ಸನಾ** ಮೃತ ಕಲಾಂ ಸಹೋದರಿ

**ಪಟ್ಟಣದ ಹಲವೆಡೆ ಪೊಲೀಸರ ಕಣ್ತಪ್ಪಿಸಿ ಡ್ರಗ್ಸ್ ಪೆಡ್ಲರ್ ಗಳು ಗಾಂಜಾ ಮಾರಾಟ ಮಾಡಿ ಯುವ ಸಮುದಾಯವನ್ನು ದಾರಿ ತಪ್ಪಿಸುತ್ತಿದ್ದಾರೆ. ಕತ್ತಲು ಆವರಿಸಿದರೆ ಸಾಕು, ಕೆಲ ಯುವಕರು ಗಾಂಜಾ ಮತ್ತಿನಲ್ಲಿ ತೇಲಾಡುತ್ತಾರೆ. ಕಿರಿಕ್ ಕೂಡ ಮಾಡಿಕೊಂಡು ಆಗಾಗ್ಗ ಜಗಳಗಳು ನಡೆಯುತ್ತಿದೆ. ಈ ಬಗ್ಗೆ ಪೊಲೀಸರು ಹೆಚ್ಚಿನ ಗಮನ ಹರಿಸಬೇಕು, ನೈಟ್ ಬೀಟ್ ಹೆಚ್ಚಿಸುವ ಮೂಲಕ ಗಾಂಜಾ ಮಾರಾಟಕ್ಕೆ ಬ್ರೇಕ್ ಹಾಕಬೇಕು.**

–**ಶರ್ಫುದ್ದಿನ್** ಮೈಸೂರು ಜಿಲ್ಲಾ ವಕ್ಫ್ ಸಲಹಾ ಸಮಿತಿ ಸದಸ್ಯ

# ತ್ಯಾಜ್ಯ ಉತ್ಪತ್ತಿ ಕಡಿಮೆ ಮಾಡಲು ಜಾಗೃತಿ

## ವಾಸವಿ ಕ್ಲಬ್ ರಾಮನಗರದಿಂದ ಅಭಿಯಾನ | ಕರಪತ್ರಗಳನ್ನು ಬಿಡುಗಡೆ ಮಾಡಿದ ನಗರಸಭಾಧ್ಯಕ್ಷ

ರಾಮನಗರ: ನಗರಸಭೆ ವ್ಯಾಪ್ತಿಯಲ್ಲಿ ದಿನ ನಿತ್ಯ 40ಕ್ಕೂ ಹೆಚ್ಚು ಟನ್ ತ್ಯಾಜ್ಯ ಉತ್ಪತ್ತಿಯಾಗುತ್ತಿದ್ದು, ಈ ಪ್ರಮಾಣ ತಗ್ಗ ಬೇಕಾದರೆ ಮನೆ, ವ್ಯಾಪಾರ ಸ್ಥಳ ಇತ್ಯಾದಿ ಮೂಲ ಸ್ಥಳಗಳಲ್ಲೇ ತ್ಯಾಜ್ಯ ಉತ್ಪತ್ತಿ ಕಡಿಮೆಯಾಗಬೇಕು. ಈ ನಿಟ್ಟಿನಲ್ಲಿ ವಾಸವಿ ಕ್ಲಬ್ ರಾಮನಗರ ಮುಂದಾಗಿದ್ದು, ಜನರಲ್ಲಿ ಜಾಗೃತಿ ಮೂಡಿಸುವ ಕರಪತ್ರಗಳನ್ನು ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಬಿಡುಗಡೆ ಮಾಡಿದರು.

ಈ ವೇಳೆ ಮಾತನಾಡಿದ ನಗರಸಭಾಧ್ಯಕ್ಷ ಕೆ. ಶೇಷಾದ್ರಿ, ತ್ಯಾಜ್ಯ ವಿಲೇವಾರಿ ವಿಚಾರದಲ್ಲಿ ನಗರ ಸಭೆ ಹಲವಾರು ಕ್ರಮಗಳನ್ನು ಕೈಗೊಂಡಿದೆ. ನಗರಸಭೆಗೆ ಈ ಕ್ರಮಗಳಿಗೆ ಪೂರಕವಾಗಿ ವಾಸವಿ ಕ್ಲಬ್ ರಾಮನಗರದ ಪದಾಧಿಕಾರಿಗಳು ಮತ್ತು ಸದಸ್ಯರು ತಮ್ಮದೇ ಆಲೋಚನೆಯಲ್ಲಿ ಜನ ಜಾಗೃತಿ ಮುಂದಾಗಿರುವದು ಶ್ಲಾಘನೀಯ ವಿಚಾರ ಎಂದರು. ತ್ಯಾಜ್ಯ ವಿಲೇವಾರಿ ವಿಚಾರದಲ್ಲಿ ನಗರಸಭೆವತಿಯಿಂದ ನಡೆಯುವ ಅಭಿಯಾನಗಳಲ್ಲಿ ವಾಸವಿ ಕ್ಲಬ್ ರಾಮನಗರ ಸಹ ಭಾಗಿಯಾಗಲಿ ಎಂದರು.

ನಾಗರೀಕರಲ್ಲಿ ಸ್ವಚ್ಚತೆಯ ಬಗ್ಗೆ ಯೂತ್ ಐಕಾನ್ ಚಿತ್ರಾರಾವ್ ಅವರು ನಗರಸಭೆಯ ರಾಯಭಾರಿಯಾಗಿ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ. ಯುಧರ್ಮ ಎಂಬ ಸಂಘಟನೆಯ ಪದಾಧಿಕಾರಿಗಳು ಸಹ ಈ ಜಾಗೃತಿಯಲ್ಲಿ ಭಾಗಿಯಾಗಿದ್ದಾರೆ. ಇದೀಗ ವಾಸವಿ ಕ್ಲಬ್ ರಾಮನಗರ ಕೂಡ ನಗರಸಭೆಯೊಂದಿಗೆ ಕೈಜೋಡಿಸುತ್ತಿದೆ. ಸ್ವಚ್ಚ ರಾಮನಗರದ ಕಲ್ಪನೆ ಸಾಕಾರವಾಗಲಿ ಎಂದು ಆಶಿಸಿದರು.

**ಮೂಲದಲ್ಲೇ ತ್ಯಾಜ್ಯ ಉತ್ಪತ್ತಿ**



**ಕಡಿವಾಣವಾಗಲಿ**

ವಾಸವಿ ಕ್ಲಬ್ ರಾಮನಗರದ ಅಧ್ಯಕ್ಷ ಗಿರೀಶ್. ಕೆ.ಎನ್ ಮತ್ತು ಕಾರ್ಯದರ್ಶಿ ಹರ್ಷಿತ ಮಾತನಾಡಿ ಪ್ರತಿ ಮನೆಯಲ್ಲಿ ಕನಿಷ್ಠ ವಾರಕ್ಕೆ ಒಂದು ಚೀಲ ಕಸವನ್ನಾದರೂ ಕಡಿಮೆ ಮಾಡಿದರೆ, ನಗರದಲ್ಲಿ ಹಲವಾರು ಟನ್‌ಗಳಷ್ಟು ಕಸ ಉತ್ಪಾದನೆ ಕಡಿಮೆಯಾಗುತ್ತದೆ. ನಾಗರೀಕರು ಈ ಹೊಣೆಗಾರಿಕೆಯಿಂದ ನಡೆದುಕೊಂಡರೆ, ಸ್ವಚ್ಚ ಆರೋಗ್ಯ ಮತ್ತು ಸುಂದರಾಗುತ್ತದೆ. ಹೀಗಾಗಿ ತಾವೆಲ್ಲ ಮನೆ, ಮನೆಗೂ ತೆರಳಿ ಜಾಗೃತಿ ಮೂಡಿಸುವ ಪ್ರಯತ್ನದಲ್ಲಿ ತೊಡಗಿಸಿಕೊಂಡಿರುವುದಾಗಿ ತಿಳಿಸಿದರು.

**ವೈದ್ಯಕೀಯ ತ್ಯಾಜ್ಯದ ಬಗ್ಗೆ ಮನವಿ**

ನಗರಸಭೆ ಸಂಗ್ರಹಿಸುವ ಕಸದೊಟ್ಟಿಗೆ ನಾಗರೀಕರು ಅವಧಿ ಮೀರಿದ ಔಷಧಗಳು, ಉಪಯೋಗಿಸಿದ ಸಿರೆಂಜ್, ಸೂಜಿ, ಬ್ಯಾಂಡೇಜ್ ಇತ್ಯಾದಿ ವೈದ್ಯಕೀಯ ತ್ಯಾಜ್ಯವನ್ನು ಸಹ ವಿಲೇವಾರಿ ಮಾಡುತ್ತಿದ್ದಾರೆ. ವೈದ್ಯಕೀಯ ತ್ಯಾಜ್ಯ ವಿಷಕಾರಕ, ಪೌರಕಾರ್ಮಿಕರನ್ನು ಬಾಧಿಸುವ ಸಾಧ್ಯತೆ ಇದೆ. ಹೀಗಾಗಿ ವೈದ್ಯಾಲಯಗಳು, ಔಷಧಾಲಯಗಳಲ್ಲಿ ವೈದ್ಯಕೀಯ ತ್ಯಾಜ್ಯ ಸಂಗ್ರಹ ಮತ್ತು ವೈಜ್ಞಾನಿಕ ವಿಲೇವಾರಿಗೆ ಸೂಕ್ತ ವ್ಯವಸ್ಥೆ ಮಾಡುವಂತೆ ಸೂಚಿಸಬೇಕು ಎಂದು ವಾಸವಿ ಕ್ಲಬ್ ಪದಾದಿಕಾರಿಗಳು ಮನವಿ ಮಾಡಿದರು.

**ಇ–ತ್ಯಾಜ್ಯ ಸಂಗ್ರಹಣೆಗೆ ಸಲಹೆ**

ನಗರಸಭೆ ವ್ಯಾಪ್ತಿಯಲ್ಲಿ ಇ–ತ್ಯಾಜ್ಯ (ನಿರುಪಯುಕ್ತ ಎಲೆಕ್ಟ್ರಾನಿಕ್ ಮತ್ತು ಎಲೆಕ್ಟ್ರಿಕಲ್ ವಸ್ತುಗಳು) ವಿಲೇವಾರಿಗೂ ನಗರದಲ್ಲಿ ಸೂಕ್ತ ವ್ಯವಸ್ಥೆ ಇಲ್ಲ. ಹೀಗಾಗಿ ನಗರಸಭೆವತಿಯಿಂದಲೇ ಇ–ತ್ಯಾಜ್ಯ ಸಂಗ್ರಹಣೆಗೆ ಕೇಂದ್ರವೊಂದನ್ನು ಸ್ಥಾಪಿಸಬೇಕು ಎಂದು ವಾಸವಿ ಕ್ಲಬ್ ಪದಾಧಿಕಾರಿಗಳು ಮನವಿ ಮಾಡಿದರು.

ಈ ವೇಳೆ ಪೌರಾಯುಕ್ತ ಡಾ.ಜಯಣ್ಣ, ಪೌರಕಾರ್ಮಿಕರ ಸಂಘದ ರಾಜ್ಯ ಉಪಾಧ್ಯಕ್ಷ ನಾಗರಾಜ್ (ಬೆಂಕಿ), ಕರ್ನಾಟಕ ಆರ್ಯ ವೈಶ್ಯ ಮಹಾಸಭಾದ ವಿಭಾಗೀಯ ಕಾರ್ಯದರ್ಶಿ ಕೆ.ವಿ.ಪ್ರಸನ್ನ ಕುಮಾರ್ ಮತ್ತು ವಾಸವಿ ಕ್ಲಬ್ ಪದಾಧಿಕಾರಿಗಳು ಹಾಜರಿದ್ದರು.

### ಹೋಟೆಲ್‌ಗಳಿಗೆ ಸೂಚನೆ ನೀಡಲು ಮನವಿ

**ಹೋಟೆಲ್‌ಗಳಲ್ಲಿ ಪಾರ್ಸಲ್‌ಗಳಿಗೆ ಬಳಕೆಯಾಗುವ ಪೇಪರ್, ಪ್ಲಾಸ್ಟಿಕ್ ಕವರ್ ಇತ್ಯಾದಿ ಕೂಡ ಹಲವಾರು ಕೇಜಿಗಳಷ್ಟು ಪ್ರಮಾಣದಲ್ಲಿ ಇರಲಿವೆ. ಇದು ಕೂಡ ತ್ಯಾಜ್ಯವಾಗಿ ಮಾರ್ಪಾಟಾಗುತ್ತಿದೆ. ಇದನ್ನು ತಡೆಯಲು ನಾಗರೀಕರು ಆಹಾರ ಪದಾರ್ಥಗಳ ಪಾರ್ಸಲ್‌ಗೆ ಮನೆಯಿಂದಲೆ ಪಾತ್ರೆಗಳನ್ನು ತೆಗೆದುಕೊಂಡು ಹೋಗಬೇಕು. ಈ ವಿಚಾರದಲ್ಲಿ ಹೋಟೆಲ್ ಮಾಲೀಕರು ಸಹ ತಮ್ಮ ಗ್ರಾಹಕರನ್ನು ಪಾತ್ರೆ ತರಲು ಪ್ರೋತ್ಸಾಹಿಸಬೇಕಾಗಿದೆ. ನಗರಸಭೆವತಿಯಿಂದಲೇ ಹೋಟೆಲ್ ಮಾಲೀಕರಿಗೆ ತಿಳುವಳಿಕೆ ನೀಡಬೇಕು ಎಂದು ವಾಸವಿ ಕ್ಲಬ್‌ನ ಪದಾಧಿಕಾರಿಗಳು ನಗರಸಭಾಧ್ಯಕ್ಷರ ಗಮನ ಸೆಳೆದರು.**

**ಇದಕ್ಕೆ ಪ್ರತಿಕ್ರಿಯಿಸಿದ ನಗರಸಭಾಧ್ಯಕ್ಷ ಕೆ.ಶೇಷಾದ್ರಿ ಉಪಯುಕ್ತ ಸಲಹೆಗಳಿದ್ದು, ಪರಿಗಣಿಸುವುದಾಗಿ ತಿಳಿಸಿದರು.**

## ಮೊದಲ ಪುಟದಿಂದ

### 'ಜಿ ರಾಮ್ ಜಿ' ಮಸೂದೆ ಅಂಗೀಕಾರ

ನಡೆದಿದ್ದು, ಲೋಕಸಭೆಯು ಮಸೂದೆಯನ್ನು ಅಂಗೀಕರಿಸಿದೆ ಎಂದು ಸ್ಪೀಕರ್ ಘೋಷಿಸಿದರು.

ದೇಶದ 20 ವರ್ಷ ಹಳೆಯದಾದ ಎಂಜಿಎನ್‌ಆರ್‌ಇಜಿಎ ಬದಲಿಗೆ ವಿಕಸಿತ ಭಾರತ– ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್ (ಗ್ರಾಮೀಣ) (ವಿಬಿ–ಜಿ ರಾಮ್ ಜಿ) ಮಸೂದೆ 2025 ಅನ್ನು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಲೋಕಸಭೆಯಲ್ಲಿ ಮಂಡಿಸಿದ್ದರು.

ಮಸೂದೆ ಮೇಲಿನ ಚರ್ಚೆಗೆ ಗುರುವಾರ ಶಿವರಾಜ್ ಸಿಂಗ್ ಚೌಹಾಣ್ ಉತ್ತರಿಸಿದ ನಂತರ ಜಿ ರಾಮ್ ಜಿ ಮಸೂದೆಯನ್ನು ಅಂಗೀಕರಿಸಲಾಯಿತು. ಪ್ರತಿಪಕ್ಷಗಳ ಪ್ರತಿಭಟನೆಯ ನಡುವೆಯೂ, ಲೋಕಸಭೆಯಲ್ಲಿ ಮಸೂದೆ ಅಂಗೀಕರಿಸಿದೆ ಎಂದು ಸ್ಪೀಕರ್ ಓಂಬಿರ್ಲಾ ಘೋಷಿಸಿದರು.

ಪ್ರತಿಪಕ್ಷಗಳ ತೀವ್ರ ಗದ್ದಲದ ಪರಿಣಾಮವಾಗಿ, ಸ್ಪೀಕರ್ ಓಂ ಬಿರ್ಲಾ ಅವರು ಲೋಕಸಭೆ ಕಲಾಪವನ್ನು ನಾಳೆಗೆ ಮುಂದೂಡಿದರು. ಶುಕ್ರವಾರ ಚಳಿಗಾಲದ ಅಧಿವೇಶನದ ಕೊನೆಯ ದಿನವಾಗಿದೆ.

### 3,600 ಹುದ್ದೆ ಭರ್ತಿಗೆ ಕ್ರಮ

ಸಿಪಿಐ ಕಚೇರಿ ಕಟ್ಟಡ ಮತ್ತು ಸಿಪಿಐ ಸಿಬ್ಬಂದಿಗೆ ವಸತಿ ಗೃಹ ನಿರ್ಮಾಣಕ್ಕೆ ಅವಕಾಶ ಕಲ್ಪಿಸಲಾಗುವುದು ಎಂದು ಸಚಿವರು ಸದಸ್ಯರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದರು.

### ದ್ವೇಷ ಭಾಷಣ: ಮಸೂದೆಗೆ ಅಸ್ತು

ಹೇರಲು ಸಾಧ್ಯ? ಹೀಗಾಗಿ ಕಾನೂನು ತರಲಾಗಿದೆ ಎಂದು ಸರ್ಕಾರದ ನಿರ್ಧಾರವನ್ನು ಪರಮೇಶ್ವರ್ ಸಮರ್ಥಿಸಿಕೊಂಡರು.

### ಉಪಗ್ರಹ ಆಧಾರಿತ ಟೋಲ್ ಸಂಗ್ರಹ

ರೂ.ಗಳಷ್ಟು ಹೆಚ್ಚಾಗುತ್ತದೆ ಮತ್ತು ಟೋಲ್ ಕಳ್ಳತನ ಕೊನೆಗೊಳ್ಳುತ್ತದೆ ಎಂದು ತಿಳಿಸಿದರು.

ಸರಿಯಾಗಿ ನಿರ್ವಹಣೆ ಮಾಡದ ಹೆದ್ದಾರಿ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮಕ್ಕೆ ಸೂಚನೆ ನೀಡಿದ ಅವರು, ಸರಿಯಾಗಿ ಕೆಲಸ ಮಾಡದ ಗುತ್ತಿಗೆದಾರರನ್ನು ಎರಡು ವರ್ಷಗಳ ಕಾಲ ಡಿಬಾರ್ ಮಾಡಲಾಗುತ್ತದೆ. ಇದರಿಂದ ಅವರು ಮುಂದಿನ ಟೆಂಡರ್‌ಗಳಿಗೆ ಅರ್ಜಿ ಸಲ್ಲಿಸಲು ಸಾಧ್ಯವಿಲ್ಲ ಎಂದು ಹೇಳಿದರು.

### ರಾಜ್ಯದ ಖಜಾನೆ ಲೂಟಿ ಹಣ

ಕಮಿಷನ್ ಪಡೆಯುವಂತಾಗಿದೆ. ಈ ಬಗ್ಗೆ ಗುತ್ತಿಗೆದಾರರ ಸಂಘದವರು ಸಹ ಪತ್ರ ಬರೆದಿದ್ದಾರೆ. ಭ್ರಷ್ಟಾಚಾರ ಬಿಟ್ಟರೆ ರಾಜ್ಯದಲ್ಲಿ ಏನೂ ಅಭಿವೃದ್ಧಿ ಆಗ್ತಿಲ್ಲ. ದುಡ್ಡು ಹೊಡೆಯೋರಿಗೆ ಬಡವರಾದರೇನೂ ಶ್ರೀಮಂತರಾದರೇನು? ರಾಜ್ಯದ ಖಜಾನೆ ಖಾಲಿ ಮಾಡಿ ಹೈಕಮಾಂಡ್ ತೃಪ್ತಿ ಪಡಿಸುವ ಕೆಲಸ ನಡೀತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರು.

# ಪರಿಶಿಷ್ಟ ಜಾತಿ, ಪಂಗಡದವರ ದೌರ್ಜನ್ಯ ನಡೆದರೆ ಕ್ರಮ: ಜಿ ಲಕ್ಷ್ಮೀಕಾಂತ ರೆಡ್ಡಿ

ಮೈಸೂರು: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲೆ ಯಾವುದೇ ದೌರ್ಜನ್ಯ ಕಂಡುಬಂದರೆ ಎಫ್‌ಐಆರ್ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಮಾನ್ಯ ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತರೆಡ್ಡಿ ತಿಳಿಸಿದರು.

ಸಮಾಜ ಕಲ್ಯಾಣಇಲಾಖೆಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು. ಎಸ್.ಸಿ, ಎಸ್.ಟಿ ದೌರ್ಜನ್ಯ ನಡೆದರೆ ತಕ್ಷಣ ಎಫ್ ಐಆರ್ ದಾಖಲಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು. ಎಸ್.ಸಿ.ಪಿ, ಟಿ.ಎಸ್.ಪಿ ಅನುದಾನದಲ್ಲಿ ಮಹಾನಗರಪಾಲಿಕೆ ವತಿಯಿಂದ 77 ಸಮುದಾಯ ಭವನಗಳನ್ನು ನಿರ್ಮಿಸಲು ಸಮಿತಿ ರಚಿಸಲಾಗುತ್ತಿದೆ. ಹೊಲಿಗೆ ಯಂತ್ರದ ವಿತರಣೆ ಬದಲು ಲ್ಯಾಪ್ ಟಾಪ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್ ಗಳಿಗೆ ಕಾಟ್ ಹಾಗೂ ಬೆಡ್ ಗಳನ್ನು ನೀಡಲು ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

ಮಹಾ ನಗರಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್ ಮಾತನಾಡಿ, ಮೈಸೂರು ಮಹಾನಗರ ಪಾಲಿಕೆಯ ಎಸ್.ಸಿ.ಪಿ ಹಾಗೂ ಟಿಎಸ್ ಪಿ ಅನುದಾನದಲ್ಲಿ ಎಂಜಿನಿಯರಿಂಗ್, ಎಂಬಿಬಿಎಸ್ ಹಾಗೂ ಪೋಸ್ಟ್ ಗ್ರಾಜುಯೇಟ್ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ನೀಡಲಾಗುವುದು. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಹಾಸ್ಟೆಲ್ ಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಿಯಾ ಯೋಜನೆ ತಯಾರಿಸಲಾಗುತ್ತಿದೆ ಎಂದು ತಿಳಿಸಿದರು.

ಸಮಿತಿಯ ಸದಸ್ಯರಾದ ಚಿಕ್ಕ ಜವರಯ್ಯ ಮಾತನಾಡಿ, ಎಸ್.ಸಿ.ಪಿ, ಟಿ.ಎಸ್.ಪಿ ಅನುದಾನ ಸಕಾಲದಲ್ಲಿ ವೆಚ್ಚವಾಗುತ್ತಿಲ್ಲ. ಅರ್ಜಿ ಹಾಕಿದ ಫಲಾನುಭವಿಗಳಿಗೆ ಸೌಲಭ್ಯ ದೊರೆಯುತ್ತಿಲ್ಲ. ಗಂಗಾ ಕಲ್ಯಾಣ ಯೋಜನೆಯಡಿ ಬೋರ್ ವೆಲ್ ಕೊರೆಸಿದ್ದರೂ ವಿದ್ಯುತ್ ಸೌಲಭ್ಯ ಕಲ್ಪಿಸಿಲ್ಲ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಜಮೀನನ್ನು ಕೆಲವರು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಸಭೆಗೆ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್.ಯುಕೇಶ್ ಕುಮಾರ್, ಸಮಿತಿಯ ಸದಸ್ಯ ಎಸ್.ಟಿ.ರವಿಕುಮಾರ್, ಎಸ್.ಬಸವರಾಜು, ನಗರ ಪೊಲೀಸ್ ಡಿ.ಸಿ.ಪಿ.ಬಿಂದುಮಣಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ರಂಗೇಗೌಡ ಸೇರಿ ಇತರರು ಉಪಸ್ಥಿತರಿದ್ದರು.

**ಪುರಸಭಾ ಕಾರ್ಯಾಲಯ, ಗುಂಡ್ಲುಪೇಟೆ**
**ಚಾಮರಾಜನಗರ ಜಿಲ್ಲೆ–571111**
**Phone No: 08229-222226** **Help line No: 08229-223377**
**ಪ.ಗು/ಕಿ.ಅ/15ನೇಹ.ಕಾ.(2021–22 ಉಳಿಕೆ ಮತ್ತು 2022–23)ಎಸ್‌ಎಫ್‌ಸಿ (2023–24)/ಪಿಆರ್/05/2025–26 ದಿನಾಂಕ: 15.12.2025**

**ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ನಿಯಮಗಳು ಹಾಗೂ ಇತ್ತೀಚಿನ ತಿದ್ದುಪಡಿ ನಿಬಂಧನೆಗೆ ಒಳಪಟ್ಟುಂತೆ ಅಧಿಕೃತ ಸಿವಿಲ್ ಗುತ್ತಿಗೆದಾರರು/ಅಧಿಕೃತ ಸರಬರಾಜುದಾರರಿಂದ ಗುಂಡ್ಲುಪೇಟೆ ಪುರಸಭೆ ವ್ಯಾಪ್ತಿಯಲ್ಲಿ ಈ ಕೆಳಗೆ ನಮೂದಿಸಿದ ಹಣಕಾಸು ಯೋಜನೆಯ ಲೆಕ್ಕ ಶೀರ್ಷಿಕೆಯಡಿಯಲ್ಲಿ ಬರುವ ಕಾಮಗಾರಿಗಳಿಗೆ ಕರ್ನಾಟಕ ಪಾರದರ್ಶಕ ಅಧಿನಿಯಮದ ಪ್ರಕಾರದ ಇ–ಪೋರ್ಟಲ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ನಲ್ಲಿ ಭಾಗವಹಿಸಲು ಆಸಕ್ತಿವುಳ್ಳ ಗುತ್ತಿಗೆದಾರರು. https://kppp.karnataka.gov.in ನಲ್ಲಿ ಮಾಹಿತಿ ಪಡೆಯುವುದು.
**ಶ್ರೀ. ಸರವಣ.ಎಸ್, ಮುಖ್ಯಾಧಿಕಾರಿಗಳು,**
ಪುರಸಭೆ, ಗುಂಡ್ಲುಪೇಟೆ, ದೂರವಾಣಿ ಸಂಖ್ಯೆ: 08229–222226, 08229–223377

| ಕ್ರ. ಸಂ. | ಕಾಮಗಾರಿ ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ.ಮೊತ್ತ (ರೂ. ಗಳಲ್ಲಿ) | ಗುತ್ತಿಗೆದಾರರ ದರ್ಜೆ/ಮೀಸಲಾತಿ |
|---|---|---|---|---|
| 1 | DMA/2024-25/OW/WORK_ INDENT-30478 (Call-4) | 46.80 | 93600 | 3ನೇ ದರ್ಜೆ ಹಾಗೂ ಮೇಲ್ಪಟ್ಟು |
| 2 | DMA/2024-25/OW/WORK_ INDENT-35807 (Call-2) | 36.67 | 36670 | 3ನೇ ದರ್ಜೆ ಹಾಗೂ ಮೇಲ್ಪಟ್ಟು Category-1 |
| 3 | DMA/2025-26/OW/WORK INDENT-52172 | 20.00 | 50000 | 3ನೇ ದರ್ಜೆ ಹಾಗೂ ಮೇಲ್ಪಟ್ಟು |

ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ: 01,01.2026 ರ ಸಂಜೆ 5.30 ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ: 03.01.2026ರ ಬೆಳಿಗ್ಗೆ 11.30 ಗಂಟೆಗೆ.
**ಸಹಿ/– ಎಸ್. ಸರವಣ. ಕೆ.ಎಂ.ಎ.ಎಸ್., ಮುಖ್ಯಾಧಿಕಾರಿ, – ಪುರಸಭೆ ಗುಂಡ್ಲುಪೇಟೆ**
**ಸಂ:ವಾಸಾಸಂಇ:ಚಾ.ನಗರ:573:2025–26**

**ಕರ್ನಾಟಕ ಸರ್ಕಾರ**
**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಾಂತ್ರಿಕ ಸಹಾಯಕರು, ಮೈಸೂರು ಉಪ ವಿಭಾಗ,**
**ಅರಣ್ಯ ಭವನ, ಅಶೋಕಪುರಂ ಮೈಸೂರು–570008**
**Ph:0821-2483853- Email:acfmysuru@gmail.com**
**ಸಂಖ್ಯೆ:ಸಅಸಂ/ಮೈಉವಿ/ಬಿ1/ಬಿಯುಡಿ/ಟೆಂಡರ್/ಸಿಆರ್–19/2025–26**
**ದಿನಾಂಕ: 12.12.2025**

**ಸವಿವರ ಟೆಂಡರ್ ಪ್ರಕಟಣೆ (ಇ–ಪ್ರಕ್ಯೂರ್‌ಮೆಂಟ್ ವೇದಿಕೆ)**

ಕರ್ನಾಟಕ ರಾಜ್ಯದ ಮೈಸೂರು ಜಿಲ್ಲೆಯ ಮೈಸೂರು ಅರಣ್ಯ ವಿಭಾಗದ ಟಿ.ನರಸೀಪುರ ವಲಯದಲ್ಲಿ 2025–26ನೇ ಸಾಲಿನಲ್ಲಿ ಫಾಸ್ಟ್ ಫುಡ್ ಶೆಡ್‌ಗಳಿಗೆ ತಾತ್ಕಾಲಿಕ ಶೆಲ್ಟರ್ ಶೆಡ್ ನಿರ್ಮಾಣ, ಮಾಹಿತಿ ಕೇಂದ್ರ ನಿರ್ಮಾಣ ಮತ್ತು ಪ್ರವೇಶ ದ್ವಾರ ನಿರ್ಮಾಣ ಕಾಮಗಾರಿಗಳನ್ನು ಗುತ್ತಿಗೆದಾರರ ಮುಖಾಂತರ ಅನುಷ್ಠಾನಗೊಳಿಸಲು ಇ–ಪ್ರಕ್ಯೂರ್‌ಮೆಂಟ್ ವೇದಿಕೆಯಲ್ಲಿ ಟೆಂಡರ್ ಆಹ್ವಾನಿಸಿದ್ದು, ವಿವಿರ ಈ ಕೆಳಕಂಡಂತಿರುತ್ತದೆ. **1)** ಗುತ್ತಿಗೆದಾರರು https://kppp.karnataka.gov.in ಅಂತರ್ಜಾಲದ ಮೂಲಕ ಟೆಂಡರಿನಲ್ಲಿ ಭಾಗವಹಿಸಬಹುದು. **2)** ಒಟ್ಟು ಟೆಂಡರ್‌ಗಿಟ್ಟಿರುವ ಕಾಮಗಾರಿಗಳ ಸಂಖ್ಯೆ–03 **3)** ಕಾಮಗಾರಿಗೆ ಗರಿಷ್ಠ ಮೊತ್ತ ರೂ.42.00, ಕನಿಷ್ಠ ರೂ.10.00 **4)** ಕಾಮಗಾರಿಯ ಇ.ಎಂ.ಡಿ ಮೊತ್ತ ಕ್ರಮವಾಗಿ ಗರಿಷ್ಠ ಮೊತ್ತ ರೂ.1.050 ಕನಿಷ್ಠ ರೂ.0.25 **5)** ಟೆಂಡರ್ ಷರತ್ತುಗಳ ಕುರಿತಾದ ಸ್ಪಷ್ಟೀಕರಣ ಕೇಳಲು ಕೊನೆಯ ದಿ: 20.12.2025 ಅಪರಾಹ್ನ 4.00 ಘಂಟೆವರೆಗೆ. **6)** ಗುತ್ತಿಗೆದಾರರು ಅಂತರ್ಜಾಲದ ಮೂಲಕ ಇ–ಪ್ರಕ್ಯೂಮೆಂಟ್ ವೇದಿಕೆಯಲ್ಲಿ ತಾಂತ್ರಿಕ ಮತ್ತು ಆರ್ಥಿಕ ಬಿಡ್ಡುಗಳನ್ನು ಸಲ್ಲಿಸಲು ಕೊನೆಯ ದಿ: 20.12.2025 ಸಂಜೆ 4.00 ಘಂಟೆವರೆಗೆ. **7)** ತಾಂತ್ರಿಕ ಬಿಡ್ಡುಗಳನ್ನು ತೆರೆಯುವ ದಿ: 22.12.2025 ಸಂಜೆ 4.00 ಘಂಟೆ ನಂತರ. **8)** ಆರ್ಥಿಕ ಬಿಡ್ಡುಗಳನ್ನು ತೆರೆಯುವ ದಿನಾಂಕ: 23.12.2025 ಮಧ್ಯಾಹ್ನ 4.00 ಘಂಟೆ. **9)** ಮೇಲ್ಕಂಡ ದಿನಾಂಕಗಳಂದು ಟೆಂಡರ್ ಬಾರದ ಕಾಮಗಾರಿಗಳಿಗೆ ಸದರಿ ಟೆಂಡರ್ ಪ್ರಕಟಣೆ ಷರತ್ತುಗಳಿಗೆ ಒಳಪಟ್ಟು **10)** ಮರುಟೆಂಡರ್ ಸಲ್ಲಿಸಲು ಕೊನೆಯ ದಿ: 26.12.2025 ಸಂಜೆ 4.00 ಘಂಟೆವರೆಗೆ **11)** ತಾಂತ್ರಿಕ ಬಿಡ್ಡುಗಳನ್ನು ತೆರೆಯುವ ದಿ: 29.12.2025 ಸಂಜೆ 4.00 ಘಂಟೆ ನಂತರ **12)** ಆರ್ಥಿಕ ಬಿಡ್ಡುಗಳನ್ನು ತೆರೆಯುವ ದಿನಾಂಕ: 30.12.2025 ಸಂಜೆ 4.00 ಘಂಟೆ. **13)** ಹೆಚ್ಚಿನ ವಿವರಗಳಿಗಾಗಿ – https://kppp.karnataka.gov.in ಅಂತರ್ಜಾಲ ಅಥವಾ ಈ ಕಛೇರಿಯ ದೂರವಾಣಿ ಸಂಖ್ಯೆ: 0821–2483853ನ್ನು ಕೆಲಸದ ದಿನಗಳಲ್ಲಿ ಸಂಪರ್ಕಿಸುವುದು. **14)** ಟೆಂಡರ್ ಪ್ರಕಟಣೆಯಲ್ಲಿ ಯಾವುದೇ ತಿದ್ದುಪಡಿ, ಮಾರ್ಪಾಡು ಅಥವಾ ಇತರ ಬದಲಾವಣೆಗಳಿದ್ದಲ್ಲಿ https://kppp.karnataka.gov.in ವೆಬ್‌ಸೈಟ್‌ನಲ್ಲಿ ಪ್ರಚಾರಪಡಿಸಲಾಗುವುದು.


**ಸಹಿ/– ಸಹಾಯಕ ಅರಣ್ಯ ಸರರಕ್ಷಣಾಧಿಕಾರಿ ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಾಂತ್ರಿಕ ಸಹಾಯಕರು, ಮೈಸೂರು ಉಪ ವಿಭಾಗ, ಮೈಸೂರು**
**DIPR/DDMYS/1370/KSMCA/784/2025-26**

# ತಮಿಳುನಾಡು ರೈತ ನಾಯಕರ ಬಿಡುಗಡೆ ಒತ್ತಾಯ

ಚಾಮರಾಜನಗರ: ಸುಳ್ಳು ಪ್ರಕರಣದಲ್ಲಿ ಸಿಲುಕಿಸಿ, ಸುಳ್ಳು ಸಾಕ್ಷ್ಯಗಳನ್ನು ಬಳಸಿ ಶಿಕ್ಷೆಗೊಳಪಡಿಸಿರುವ

ತಮಿಳುನಾಡು ರೈತ ನಾಯಕರಾದ ಪಿ.ಆರ್. ಪಾಂಡಿಯನ್ ಮತ್ತು ಸೆಲ್ವರಾಜ್ ಅವರ

ಬಿಡುಗಡೆ ಒತ್ತಾಯಿಸಿ ಸಂಯುಕ್ತ ಕಿಸಾನ್ ಮೋರ್ಚಾ, ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ವತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಹೆಚ್ಚುವರಿ ಜಿಲ್ಲಾಧಿಕಾರಿ ಜವರೇಗೌಡ ಅವರ ಮುಖಾಂತರ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.



ತಮಿಳುನಾಡಿನ ರೈತ ನಾಯಕ ಪಿ.ಆರ್. ಪಾಂಡಿಯನ್ ತಮ್ಮ ಇಡೀ ಜೀವನವನ್ನು ರೈತ ಸಮುದಾಯದ ಉನ್ನತಿಗಾಗಿ ಮುಡಿಪಾಗಿಟ್ಟಿದ್ದಾರೆ. 2013 ರಲ್ಲಿ ತಮಿಳುನಾಡಿನ ಧರ್ಮಪುರಿ ಜಿಲ್ಲೆಯ ಕರಿಯಮಂಗಲಂನಲ್ಲಿ ರಾಜ್ಯ ಸರ್ಕಾರವು 'ಸಂರಕ್ಷಿತ ಕೃಷಿ ಭೂಮಿ" ಎಂದು ಘೋಷಿಸಿದ ಪ್ರದೇಶದಲ್ಲಿ ಉತ್ಖನನ ಮತ್ತು ಕೊರೆಯುವ ಕೆಲಸವನ್ನು ನಡೆಸುತ್ತಿತ್ತು. 2013 ರಲ್ಲಿ ಈ ಪ್ರದೇಶದಲ್ಲಿ ಅನಿಲ ಸೋರಿಕೆಯೂ ಸಂಭವಿಸಿದ್ದು, ಸ್ಥಳೀಯ ನಿವಾಸಿಗಳಲ್ಲಿ ದೊಡ್ಡ ಜೀವ ಮತ್ತು ಆಸ್ತಿ ಅಪಾಯದ ಬಗ್ಗೆ ಭಯವನ್ನು ಸೃಷ್ಟಿಸಿತು. ಮೇಲೆ ತಿಳಿಸಿದ ಸ್ಥಳದಲ್ಲಿ ಕೆಲಸ ಮುಂದುವರಿಸುವುದನ್ನು ರಾಜ್ಯ ಸರ್ಕಾರ ನಿಷೇಧಿಸಿತು. ಇದರ ಹೊರತಾಗಿಯೂ, ಆ ಪ್ರದೇಶದಲ್ಲಿ ಕೆಲಸ ನಿಲ್ಲಿಸುವ ಬದಲು, ಸ್ಥಳೀಯ ಜೀವಗಳಿಗೆ ಅಪಾಯವನ್ನುಂಟುಮಾಡುವ ಕೆಲಸವನ್ನು ಮುಂದುವರಿಸಿತು. 2015 ರಲ್ಲಿ, ಪಿ.ಆರ್. ಪಾಂಡಿಯನ್ ನೇತೃತ್ವದ ರೈತರು ಯೋಜನೆಯ ಕೃಷಿ ಮತ್ತು ಪರಿಸರದ ಮೇಲೆ ಭೀಕರ ಪರಿಣಾಮಗಳನ್ನು ಬೀರುವ ಭಯದಿಂದ ಸ್ಥಳದಲ್ಲಿ ಶಾಂತಿಯುತ ಪ್ರತಿಭಟನೆ ನಡೆಸಿದರು.

ಒಎನ್ ಜಿಸಿ ತನ್ನ ಸ್ವಂತ ಹಿತಾಸಕ್ತಿಗಳನ್ನು ಹೆಚ್ಚಿಸಿಕೊಳ್ಳುವ ಸಲುವಾಗಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರ ವಿರುದ್ಧ ಪಿತೂರಿ ನಡೆಸಿ, ಸುಳ್ಳು ಸಾಕ್ಷ್ಯಗಳ ಆಧಾರದ ಮೇಲೆ ಸುಳ್ಳು ಪ್ರಕರಣ ದಾಖಲಿಸಿತು. ಡಿಸೆಂಬರ್ 6, 2025 ರಂದು, ತಿರುವರೂರು ಜಿಲ್ಲೆಯ ತ್ವರಿತ ನ್ಯಾಯಾಲಯವು ರೈತ ನಾಯಕರಾದ ಪಿ.ಆರ್. ಪಾಂಡಿಯನ್ ಮತ್ತು ಸೆಲ್ವರಾಜ್ ಅವರಿಗೆ 13 ವರ್ಷಗಳ ಜೈಲು ಶಿಕ್ಷೆ ವಿಧಿಸಿತು. ಅಂದಿನಿಂದ, ಇಬ್ಬರೂ ರೈತ ನಾಯಕರು ಜೈಲಿನಲ್ಲಿದ್ದಾರೆ. ಇದು ದೇಶಾದ್ಯಂತ ರೈತರಲ್ಲಿ ಕೋಪಕ್ಕೆ ಕಾರಣವಾಗಿದೆ. ದೇಶದ ಎಲ್ಲಾ ರೈತರ ಪರವಾಗಿ, ದೇಶದ ಅತ್ಯುನ್ನತ ನಾಗರಿಕರಾಗಿ ನೀವು ಈ ವಿಷಯವನ್ನು ಅರಿತುಕೊಳ್ಳಬೇಕು ಮತ್ತು ಈ ಸುಳ್ಳು ಪ್ರಕರಣದಲ್ಲಿ ನಿಮ್ಮ ಸಾಂವಿಧಾನಿಕ ಅಧಿಕಾರವನ್ನು ಚಲಾಯಿಸುವ ಮೂಲಕ ಅಥವಾ ಈ ಪರಿಸ್ಥಿತಿಗೆ ಕಾನೂನು ಪರಿಹಾರವನ್ನು ಕಂಡುಕೊಳ್ಳಲು ಕೇಂದ್ರ ಸರ್ಕಾರ ಮತ್ತು ತಮಿಳುನಾಡು ಸರ್ಕಾರಕ್ಕೆ ಸೂಚನೆ ನೀಡುವ ಮೂಲಕ ರೈತ ನಾಯಕರಾದ ಪಿ.ಆರ್. ಪಾಂಡಿಯನ್ ಮತ್ತು ಸೆಲ್ವರಾಜ್ ಅವರ ಬಿಡುಗಡೆಗೊಳಿಸಬೇಕು ಎಂದು ಮನವಿಯಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೆಚ್.ಮೂಕಳ್ಳಿ ಮಹಾದೇವಸ್ವಾಮಿ, ಉಪಾಧ್ಯಕ್ಷ ಹೆಗ್ಗೋಠಾರ ಶಿವಸ್ವಾಮಿ ಒತ್ತಾಯಿಸಿದ್ದಾರೆ. ಈ ಸಂದರ್ಭದಲ್ಲಿ ಉಡಿಗಾಲ ಗುರುಪ್ರಸಾದ್, ರಘು, ನಟರಾಜು ಹಾಜರಿದ್ದರು.

## 19ರಂದು ಸಿಎಂಇ, ಕಾರ್ಯಗಾರ

ಚಾಮರಾಜನಗರ, ಬರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಇಎನ್‌ಟಿ ವಿಭಾಗದ ವತಿಯಿಂದ ಎಸ್.ಎ.ಎಲ್.ಐ–ಇಎನ್‌ಟಿ ಸಿಮ್ಸ್ 2025 ಎಂಬ ಒಂದು ದಿನದ ಹ್ಯಾಂಡ್ಸ್–ಆನ್ ಕ್ಯಾಡವರಿಕ್ ಲಾಲಗ್ರಂಥಿ ಡಿಸೆಕ್ಷನ್ ಕಾರ್ಯಾಗಾರ ಮತ್ತು ಸಿಎಂಇ ಕಾರ್ಯಕ್ರಮವನ್ನು ಡಿಸೆಂಬರ್ 19ರಂದು ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಡಿಸೆಂಬರ್ 19ರಂದು ಬೆಳಿಗ್ಗೆ 11 ಗಂಟೆಗೆ ಚಾಮರಾಜನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಉಪನ್ಯಾಸ ಸಭಾಂಗಣ–1ರಲ್ಲಿ ನಡೆಯಲಿದೆ. ಸಿಮ್ಸ್ ಡೀನ್ ಮತ್ತು ನಿರ್ದೇಶಕರಾದ ಡಾ. ಎಚ್.ಜಿ. ಮಂಜುನಾಥ್ ಅವರು ಅಧ್ಯಕ್ಷತೆ ವಹಿಸುವರು. ಪ್ರಾಂಶುಪಾಲರಾದ ಡಾ. ಅಜಯ್ ಕೆ.ಟಿ., ವೈದ್ಯಕೀಯ ಅಧೀಕ್ಷಕರಾದ ಡಾ. ಮಾರುತಿ ಸಿ.ವಿ, ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಚಿನ್ನಬೋವಿ ಅವರ ಉಪಸ್ಥಿತಿಯಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ಡಾ. ಬಸವರಾಜ್.ಎಸ್ (ಎಫ್.ಎ.ಎಂ.ಇ ಮೈಸೂರು), ಡಾ. ಅಕ್ಷಯ್ ಕುಡ್ವಾಜೆ (ಸ್ಪೈಟ್ ಕೇರ್ ಆಸ್ಪತ್ರೆ ಬೆಂಗಳೂರು), ಡಾ. ವಿಜಯ್.ಪಿ (ಮಿಮ್ಸ್ ಮಂಡ್ಯ), ಡಾ. ರಾಕೇಶ್ ಬಿ.ಎಸ್ (ಜೆ.ಎಸ್.ಎಸ್.ಎಂ.ಸಿ ಮೈಸೂರು), ಡಾ. ಸುನಿಲ್. ಕೆ.ಸಿ (ಎಂಎಂಸಿಆರ್ಐ ಮೈಸೂರು), ಡಾ. ಗಿರೀಶ್ ಪಾಟೀಲ್ (ಅನಾಟಮಿ ವಿಭಾಗ, ಸಿಮ್ಸ್) ಮತ್ತು ಡಾ. ಶಶಿಧರ. ಪಿ (ಜನರಲ್ ಸರ್ಜರಿ ವಿಭಾಗ, ಸಿಮ್ಸ್), ಡಾ. ಎಂ.ಎ. ಶರೀಫ್, (ಕಿವಿ, ಮೂಗು, ಗಂಟಲು ವಿಭಾಗ, ಸಿಮ್ಸ್) ಅವರು ಭಾಗವಹಿಸಲಿದ್ದಾರೆ.

ಲಾಲಗ್ರಂಥಿ ಸಂಬಂಧಿತ ರೋಗಗಳು, ವಿಶೇಷವಾಗಿ ಕ್ಯಾನ್ಸರ್‌ನಲ್ಲಿ ಶಸ್ತ್ರಚಿಕಿತ್ಸೆ ಅವಶ್ಯಕವಾಗಿರುತ್ತವೆ. ಈ ಶಸ್ತ್ರಚಿಕಿತ್ಸೆಗಳಲ್ಲಿ ಮುಖನರ, ಪ್ರಮುಖ ರಕ್ತನಾಳಗಳು ಮತ್ತು ಅನೇಕ ಜೀವಾಳ ರಚನೆಗಳು ಇರುವುದರಿಂದ, ಸೂಕ್ತ ತರಬೇತಿ ಮತ್ತು ನೈಪುಣ್ಯ ಅತ್ಯಂತ ಅಗತ್ಯ. ಕ್ಯಾಡವರಿಕ್ ಡಿಸೆಕ್ಷನ್ ಮೂಲಕ ಟ್ರೈನೀಸ್ ಗಳಿಗೆ ನೈಜ ಅನಾಟಮಿ ಅರಿವು, ಶಸ್ತ್ರಚಿಕಿತ್ಸಾ ಆತ್ಮವಿಶ್ವಾಸ ಮತ್ತು ಸುರಕ್ಷಿತ ಶಸ್ತ್ರಚಿಕಿತ್ಸಾ ಕೌಶಲ್ಯವನ್ನು ಅಭಿವೃದ್ಧಿಪಡಿಸಲು ಈ ಕಾರ್ಯಾಗಾರ ಸಹಕಾರಿಯಾಗುತ್ತದೆ. ಡಿಸೆಕ್ಷನ್ ಕಾರ್ಯಗಳು ಸಿಮ್ಸ್ ಅನಾಟಮಿ ವಿಭಾಗದ ಡಿಸೆಕ್ಷನ್ ಹಾಲ್‌ನಲ್ಲಿ ನಡೆಯಲಿದ್ದು, ಅಧ್ಯಾಪಕರೊಂದಿಗೆ ಸಂವಾದ ಚರ್ಚೆಗಳು ಸಿಮ್ಸ್ ಕಾಲೇಜು ಕಟ್ಟಡದ ಉಪನ್ಯಾಸ ಸಭಾಂಗಣ 1ರಲ್ಲಿ ನಡೆಯಲಿವೆ. ಈ ಕಾರ್ಯಾಗಾರಕ್ಕೆ ಕರ್ನಾಟಕ ಸೇರಿದಂತೆ ಕೇರಳ, ಆಂಧ್ರಪ್ರದೇಶ, ಮಹಾರಾಷ್ಟ್ರ ಮತ್ತು ತೆಲಂಗಾಣ ರಾಜ್ಯಗಳಿಂದಲೂ ಡಿಸೆಕ್ಟರ್ಸ್ ಮತ್ತು ಅಬ್ಸರ್ವರ್ ಗಳು ನೋಂದಾಯಿಸಿಕೊಂಡಿದ್ದಾರೆ ಎಂದು ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರು ಹಾಗೂ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪತ್ನಿ ಕೊಲೆಗೆ ಸುಪಾರಿ: ಪತಿ ಬಂಧನ

ಮೈಸೂರು: ಪತ್ನಿಯನ್ನು ಕೊಲೆ ಮಾಡಲು ಪತಿಯೇ ಸುಪಾರಿ ಕೊಟ್ಟಿದ್ದು, ಕೊಲೆ ಯತ್ನದಲ್ಲಿ ಗಾಯಗೊಂಡ ಮಹಿಳೆ ಚಿಕಿತ್ಸೆ ಪಡೆಯುತ್ತಿದ್ದಾರೆ.

ಮೈಸೂರಿನ ಬಿಎಂಶ್ರೀ ನಗರ ಬಡಾವಣೆ ನಿವಾಸಿ ನಾಗರತ್ನ ಗಾಯಗೊಂಡವರು. ಪತಿ ಮಹೇಶ್‌ನನ್ನು ಬಂಧಿಸಿರುವ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

**ಆಗಿದ್ದೇನು?:** ಮಹೇಶ್ ಹಾಗೂ ನಾಗರತ್ನ 18 ವರ್ಷಗಳ ಹಿಂದೆ ಮದುವೆ ಆಗಿದ್ದರು. ಮಹೇಶ್ ಬಂಗಾರಪೇಟೆ ಪಾನೀಪುರಿ ಅಂಗಡಿ ಮಾಲೀಕನಾಗಿದ್ದು, ವಹಿವಾಟು ಚನ್ನಾಗಿಯೇ ಇತ್ತು. ಪತ್ನಿ ಜತೆಗೂಡಿ ಪಾನಿಪುರ ಮಾಡುವ ತರಬೇತಿ ನೀಡಿ ಫ್ರಾಂಚೈಸಿ ಕೂಡ ಕೊಡುತ್ತಿದ್ದ. ದಂಪತಿಗೆ ಮಕ್ಕಳು ಇರಲಿಲ್ಲ. ಪ್ರಾರಂಭದಲ್ಲಿ ಅನ್ಯೋನ್ಯವಾಗಿಯೇ ಇದ್ದ ದಂಪತಿ ಇತ್ತೀಚೆಗೆ ಸಣ್ಣಪುಟ್ಟ ವಿಚಾರಕ್ಕೂ ಗಲಾಟೆ ಮಾಡಿಕೊಳ್ಳುತ್ತಿದ್ದರು. ಪತ್ನಿ ನಾಗರತ್ನ ಗಂಡನ ಸಂಪಾದನೆಯ ಹಣವನ್ನು ಬಡ್ಡಿಗೆ ಕೊಟ್ಟು ಲೇವಾದೇವಿ ವ್ಯವಹಾರ ಮಾಡುತ್ತಿದ್ದಳು. ದುಡ್ಡು ಕಾಸಿನ ವಿಚಾರದ ಬಗ್ಗೆ ಪ್ರಶ್ನಿಸಿದರೆ ಎಲ್ಲರ ಮುಂದೆಯೇ ಬಾಯಿಗೆ ಬಂದಂತೆ ಬೈಯ್ಯುತ್ತಿದ್ದಳು ಎನ್ನಲಾಗಿದೆ. ಇದರಿಂದ ರೋಸಿ ಹೋಗಿದ್ದ ಮಹೇಶ್, ಫ್ರಾಂಚೈಸಿ ಪಡೆಯಲು ಬಂದಿದ್ದ ಕೊಡಗು ಜಿಲ್ಲೆ ವಿರಾಜಪೇಟೆ ತಾಲೂಕಿನ ಭಾಸ್ಕರ್ ಹಾಗೂ ಅಭಿಷೇಕ್ ಎಂಬವರಿಗೆ ಪತ್ನಿಯನ್ನು ಕೊಲೆ ಮಾಡುವಂತೆ ಸುಪಾರಿ ಕೊಟ್ಟಿದ್ದ ಎಂಬ ಆರೋಪ ಕೇಳಿಬಂದಿದೆ. ನಾಗರತ್ನ ಬಿಎಂಶ್ರೀ ನಗರದ ಮನೆಯಲ್ಲಿ ಒಬ್ಬಂಟಿಯಾಗಿ ಇದ್ದ ವೇಳೆ ಬಂದ ಆರೋಪಿಗಳಾದ ಅಭಿಷೇಕ್ ಹಾಗೂ ಭಾಸ್ಕರ್, ಏಕಾಏಕಿ ಹಲ್ಲೆ ನಡೆಸಿದ್ದರು. ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಪರಾರಿಯಾಗಿದ್ದಾರೆ. ಮನೆಯಲ್ಲಿದ್ದ ಗ್ಯಾಸ್ ಸಿಲಿಂಡರ್ ಸ್ಫೋಟಿಸಿ ಕೊಲೆ ಮಾಡಲು ಯೋಜನೆ ರೂಪಿಸಲಾಗಿತ್ತು. ಹೊಗೆ ತುಂಬಿಕೊಂಡ ಪರಿಣಾಮ ಅಕ್ಕಪಕ್ಕದ ಮನೆಯವರು ಬೆಂಕಿ ನಂದಿಸಿ ಗಾಯಗೊಂಡಿದ್ದ ನಾಗರತ್ನ ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದಾರೆ. ಸದ್ಯ ಐಸಿಯುನಲ್ಲಿಟ್ಟು ಚಿಕಿತ್ಸೆ ನೀಡಲಾಗುತ್ತಿದೆ. ಈ ಸಂಬಂಧ ಮೇಟಗಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಪ್ರೆಂಟಿಸ್ ತರಬೇತಿಗೆ ಅರ್ಜಿ

ಚಾಮರಾಜನಗರ, 2025–26ನೇ ಸಾಲಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಚಾಮರಾಜನಗರ ಜಿಲ್ಲಾ ಕಚೇರಿಯಲ್ಲಿ ಮಾಧ್ಯಮ ಹಾಗೂ ಕ್ಷೇತ್ರ ಪ್ರಚಾರ ಕುರಿತ ಒಂದು ವರ್ಷ ಅವಧಿಯ ಅಪ್ರೆಂಟಿಸ್ ತರಬೇತಿಗೆ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಪರಿಶಿಷ್ಟ ಜಾತಿಯ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ 2026ರ ಜನವರಿ ಯಿಂದ ಡಿಸೆಂಬರ್ ವರೆಗೆ ತರಬೇತಿ ನೀಡಲಿದ್ದು, ಚಾಮರಾಜನಗರ ವಾರ್ತಾ ಇಲಾಖೆಯ ಜಿಲ್ಲಾ ಕಚೆ?ರಿಗೆ ಪರಿಶಿಷ್ಟ ಜಾತಿಗೆ ಸೇರಿದ ಓರ್ವ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಓರ್ವ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ. ತರಬೇತಿ ಅವಧಿಯಲ್ಲಿ ಪ್ರತಿ ತಿಂಗಳಿಗೆ ಅಭ್ಯರ್ಥಿಗೆ 15 ಸಾವಿರ ರೂ. ತರಬೇತಿ ಭತ್ಯೆ ನೀಡಲಾಗುತ್ತದೆ. ಕರ್ನಾಟಕ ರಾಜ್ಯದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರಬೇಕು. ಕಂಪ್ಯೂಟರ್ ಜ್ಞಾನ, ಕನ್ನಡ ಭಾಷೆ ಬಳಕೆ ಬಗ್ಗೆ ಪ್ರಬುದ್ಧತೆ ಇರಬೇಕು. ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು 35 ವರ್ಷ ಮೀರಿರಬಾರದು. ಅಭ್ಯರ್ಥಿಗಳು ಪದವಿ/ಸ್ನಾತಕೋತ್ತರ ಅಂತಿಮ ವರ್ಷದ ಪದವಿ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕ ಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ನಿಗದಿತ ನಮೂನೆ ಅರ್ಜಿಯನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ ಅಂಕಪಟ್ಟಿ/ ಜನ್ಮ ದಿನಾಂಕಕ್ಕೆ ಸಂಬಂಧಿಸಿದ ಪ್ರಮಾಣ ಪತ್ರ, ಪದವಿ/ಸ್ನಾತ್ತಕೋತ್ತರ ಪದವಿ ಅಂಕಪಟ್ಟಿ ಪ್ರಮಾಣಪತ್ರ, ಜಾತಿ ಪ್ರಮಾಣ ಪತ್ರ, ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ, ಇನ್ನಿತರ ಪೂರಕ ದಾಖಲೆಗಳು, ಪ್ರಮಾಣ ಪತ್ರದ ನಕಲನ್ನು ದೃಢೀಕರಿಸಿ ಡಿಸೆಂಬರ್ 24 ರೊಳಗೆ ಹಿರಿಯ ಸಹಾಯಕ ನಿರ್ದೇಶಕರು, ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ಜಿಲ್ಲಾ ಆಡಳಿತ ಭವನದ ಆವರಣ, ಬಿ. ರಾಚಯ್ಯ ಜೋಡಿ ರಸ್ತೆ, ಚಾಮರಾಜನಗರ–571313 ಇಲ್ಲಿಗೆ ಸಲ್ಲಿಸಬೇಕು. ಮಾಹಿತಿಗಾಗಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಭವನ, ಜಿಲ್ಲಾ ಆಡಳಿತ ಭವನದ ಆವರಣ,ಚಾಮರಾಜನಗರ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಮೂರು ದಿನಗಳ ಅಸ್ಟ್ರಿಂಗ್ ಮೈಸೂರ್" ಮೆಗಾ ಪ್ರದರ್ಶನ

ಮೈಸೂರು: ನಗರದ ಭಾರತ ಸೌಟ್ಸ್ ಮತ್ತು ಗೈಡ್ಸ್ ಮೈದಾನದಲ್ಲಿ ಆಯೋಜಿಸಿದ್ದ ದೆಹಲಿ ಮೂಲದ ಪ್ರಯಾಸ್ ಈವೆಂಟ್ಸ್ ಆ?ಯಂಡ್ ಎಕ್ಸಿಬಿಷನ್ಸ್ ಮೂಲಕ "ಅಸ್ಟ್ರಿಂಗ್ ಮೈಸೂರು" ಎಂಬ ಮೂರು ದಿನಗಳ ಮೆಗಾ ಪ್ರದರ್ಶನವನ್ನು ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಮತ್ತು ಪ್ರಾದೇಶಿಕ ಮುಖ್ಯಸ್ಥ ಡಾ.ಟಿ.ಆರ್.ಅರುಣ್ ಉದ್ಘಾಟನೆಯನ್ನು ಮಾಡಿದರು.

ಈ ವೇಳೆ ಮಾತನಾಡಿದ ಅವರು, ಆಸ್ಟ್ರಿಂಗ್ ಮೈಸೂರು ಮೆಗಾ ಪ್ರದರ್ಶನವು ಮೈಸೂರಿನ ನಾಗರಿಕರಿಗೆ ಸಮಗ್ರ, ಸಮೃದ್ಧ ಮತ್ತು ಸಂವಾದಾತ್ಮಕ ವೇದಿಕೆಯಾಗಿ ಕಲ್ಪಿಸಲಾಗಿದೆ. ಸಾರ್ವಜನಿಕರಲ್ಲಿ ಜಾಗೃತಿ, ಕಲಿಕೆ ಮತ್ತು ಅರ್ಥಪೂರ್ಣ ತೊಡಗಿಸಿಕೊಳ್ಳುವಿಕೆಯನ್ನು ಬೆಳೆಸುವ ಗುರಿಯನ್ನು ಹೊಂದಿದೆ. ವಿಧ ಸರ್ಕಾರಿ ಯೋಜನೆಗಳು, ಸಾರ್ವಜನಿಕ ಕಲ್ಯಾಣ ಉಪಕ್ರಮಗಳು ಮತ್ತು ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಸಂದರ್ಶಕರಿಗೆ ವಿವರವಾದ ಮಾಹಿತಿಯನ್ನು ಒದಗಿಸುತ್ತದೆ. ವಿಜ್ಞಾನ ಮತ್ತು ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ, ಪರಿಸರ ಮತ್ತು ಅರಣ್ಯ, ಹವಾಮಾನ ಬದಲಾವಣೆ, ಆರೋಗ್ಯ, ಬಂದರುಗಳು ಮತ್ತು ಸಾಗಾಣಿಕೆ, ಗಣಿಗಾರಿಕೆ, ಕರಕುಶಲ ವಸ್ತುಗಳು ಮತ್ತು ಜವಳಿ ಸೇರಿ ವಿವಿಧ ಕ್ಷೇತ್ರಗಳಲ್ಲಿನ ಪ್ರಗತಿಯನ್ನು ಪ್ರದರ್ಶನವು ಪ್ರದರ್ಶಿಸುತ್ತದೆ ಎಂದರು.

ಪ್ರದರ್ಶನದ ಆಯೋಜಕರಾದ ವನೀಶ ಗುಪ್ತಾ ಮಾತನಾಡಿ, ಡಿ.20ರವರೆಗೆ ಪ್ರದರ್ಶನ ನಡೆಯಲಿದ್ದು, ಕೇಂದ್ರ ಸರ್ಕಾರದ ಸಚಿವಾಲಯ, ಸರ್ಕಾರಿ ಇಲಾಖೆ, ಸಾರ್ವಜನಿಕ ವಲಯದ




ಉದ್ಯಮ ಮತ್ತು ಪ್ರಮುಖ ರಾಷ್ಟ್ರೀಯ ಸಂಸ್ಥೆಗಳು ಸಹರ್ಷವಾಗಿ ಭಾಗವಹಿಸಲಿದ್ದು, ಇವರು "ಅಭಿವೃದ್ಧಿ ಹೊಂದಿದ ಭಾರತ 2047 ರ ದೃಷ್ಟಿಕೋನಕ್ಕೆ ಅನುಗುಣವಾಗಿ ತಮ್ಮ ಇತ್ತೀಚಿನ ಉಪಕ್ರಮಗಳು, ನಾವೀನ್ಯತೆಗಳು ಮತ್ತು ಅಭಿವೃದ್ಧಿಯ ಕೊಡುಗೆಗಳನ್ನು ಪ್ರದರ್ಶಿಸಲಿದೆ ಎಂದರು. ಮೂರು ದಿನಗಳವರೆಗೆ ಬೆಳಿಗ್ಗೆ 10 ರಿಂದ ಸಂಜೆ 5:30 ರವರೆಗೆ ನಡೆಯುವ ಈ ಪ್ರದರ್ಶನದಲ್ಲಿ ಎಲ್ಲರಿಗೂ ಉಚಿತ ಪ್ರವೇಶವಿದೆ. ಈ ಸಂದರ್ಭದಲ್ಲಿ ಕರ್ನಾಟಕ ಬ್ಯಾಂಕ್ ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ ಮತ್ತು ಪ್ರಾದೇಶಿಕ ಮುಖ್ಯಸ್ಥ ಡಾ.ಟಿ.ಆರ್.ಅರುಣ್ ಟಿ.ಆರ್, ಎನ್ ಐಸಿ ಕರ್ನಾಟಕ ಮಹಾ ನಿರ್ದೇಶಕ ದಶರತ್ ಮಶಾಲ್, ಜಿಎಸ್‌ಎಸ್‌ಎಸ್ ಚೇರ್ಮನ್ ಅನುಪಮಾ.ಬಿ.ಪಂಡಿತ್, ಎ.ರಾಮಕೃಷ್ಣ, ಭಾರತೀಯ ಭೂ ವೈಜ್ಞಾನಿಕ ಸಮೀಕ್ಷೆಯ ನಿರ್ದೇಶಕ ಗೋರ್ ಮೊಹಮ್ಮದ್ ಷರೀಫ್ ಇದ್ದರು.

### ಸಂಸದರ ಶುಭ ಹಾರೈಕೆ

**ವಿಡಿಯೋ ಕಾನ್ಫರೆನ್ಸ್ ಮೂಲಕ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಂಸದ ಯಧುವೀರ ಕೃಷ್ಣದತ್ತ ಚಾಮರಾಜ ಒಡೆಯರ ಭವಿಷ್ಯದ ಭಾರತವನ್ನು ರೂಪಿಸುವಲ್ಲಿ ಇಂತಹ ಜಾಗತಿಕ ವಸ್ತುಪ್ರದರ್ಶನಗಳು ಹೆಚ್ಚು ಪ್ರಯೋಜನಕಾರಿಯಾಗಿವೆ. ಇಲ್ಲಿರುವ ತಂತ್ರಜ್ಞಾನ, ಜಾಗತಿಕ ಜ್ಞಾನವನ್ನು ಎಲ್ಲರೂ ವೀಕ್ಷಿಸುವ ಮೂಲಕ ತಾವು ಸಹ ಭಾರತ ಕಲ್ಪನೆಯನ್ನು ಸಕಾರಗೊಳಿಸಲು ಹೆಜ್ಜೆ ಹಾಕಬಹುದಾಗಿದೆ ಎಂದು ತಿಳಿಸಿದರು.**

# ಮುಳ್ಳೂರು ಆಸ್ಪತ್ರೆಯಲ್ಲಿ ಸಿಬ್ಬಂದಿ ಕೊರತೆ ನೀಗಿಸಲು ಕ್ರಮ

ಎಚ್.ಡಿ.ಕೋಟೆ: ಮುಳ್ಳೂರು ಸರ್ಕಾರಿ ಆಸ್ಪತ್ರೆಗೆ ಎರಡು ಬಾರಿ ಪ್ರಶಸ್ತಿ ಬಂದಿದೆ. ಆದರೆ ಸಿಬ್ಬಂದಿ ಕೊರತೆ ಇದ್ದ ದಿನಗಳಲ್ಲಿ ಏನೇ ಸಮಸ್ಯೆಗಳಿದ್ದರೂ, ಏನೇ ಕುಂದು ಕೊರತೆಗಳಿದ್ದರೂ ಪರಿಹರಿಸಿ, ರೋಗಿಗಳಿಗೆ ಎಲ್ಲಾ ಸೌಲಭ್ಯವೂ ಸಿಗುವಂತೆ ಮಾಡಲಾಗುವುದು, ಆಸ್ಪತ್ರೆಗೆ ಬೇಕಾದ ಸವಲತ್ತು ಕಲ್ಪಿಸಲಾಗುವುದು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಭರವಸೆ ನೀಡಿದರು.



ತಾಲೂಕಿನ ಮುಳ್ಳೂರು ಸರ್ಕಾರಿ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು ಮಾತನಾಡಿದರು. ಮುಳ್ಳೂರು ಆಸ್ಪತ್ರೆಯು ಹೆಚ್ ಡಿ ಕೋಟೆ ಹಾಗೂ ನಂಜನಗೂಡು ತಾಲೂಕಿನ ಮಧ್ಯೆ ಇದ್ದರೂ ಹದಗೆಟ್ಟ ರಸ್ತೆಗಳಿಂದ ಜನರಿಗೆ ಸಮಸ್ಯೆಯಾಗಿದೆ. ಹೆಚ್ ಡಿ ಕೋಟೆ ತಾಲೂಕಿನಲ್ಲಿ ಹಲವಾರು ಸಮಸ್ಯೆಗಳಿವೆ. ಅದು ನನಗೆ ಮಾತ್ರವಲ್ಲ, ಇಲ್ಲಿರುವ ಎಲ್ಲರಿಗೂ ಗೊತ್ತು. ರಸ್ತೆ ಸರಿಯಿಲ್ಲದೆ ಇರುವುದರಿಂದ ಜನರಿಗೆ ಸಾಕಷ್ಟು ತೊಂದರೆ ಆಗುತ್ತಿದೆ. ಮುಂದಿನ ದಿನಗಳಲ್ಲಿ ಸರ್ಕಾರ ಎಲ್ಲವನ್ನು ಬಗೆಹರಿಸಲಿದೆ. ಮುಳ್ಳೂರು ಆಸ್ಪತ್ರೆ, ಜಿಲ್ಲೆಗೆ ಮಾದರಿ ಆಸ್ಪತ್ರೆಯಾಗಿ ಪ್ರಶಸ್ತಿ ಕೂಡ ಪಡೆದುಕೊಂಡಿತ್ತು. ಆದರೆ ಕಾಲಕ್ರಮೇಣ ಸಮಸ್ಯೆ ಎದುರಾಗಿದೆ. ಸಿಬ್ಬಂದಿ ಕೊರತೆ ಎದ್ದು ಕಾಣುತ್ತಿದೆ. ಲ್ಯಾಬ್ ಟೆಕ್ನಿಸಿಯನ್ ಸೇರಿದಂತೆ ನುರಿತ ವೈದ್ಯರ ಕೊರತೆ ಇದೆ. ಶೀಘ್ರದಲ್ಲೇ ಎಲ್ಲವೂ ಸರಿಯಾಗಲಿದ್ದು, ಆಂಬುಲೆನ್ಸ್ ಸೇವೆ ಕೂಡ ಒದಗಿಸಲಾಗುವುದು ಎಂದರು.

**▸▸ ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ಭರವಸೆ**

ಆರೋಗ್ಯವೇ ಭಾಗ್ಯ ಎಂಬ ನಾಣ್ಣುಡಿಯಂತೆ ಜನರಿಗೆ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಹಾರ್ಟ್ ಸಂಸ್ಥೆಯು ಈಗಾಗಲೇ ಹೆಚ್ ಡಿ ಕೋಟೆ ತಾಲೂಕಿನಲ್ಲಿ 8 ಶಿಬಿರ ಯಶಸ್ವಿಯಾಗಿ ನಡೆಸಿದೆ. ಇದು 9 ನೇ ಆರೋಗ್ಯ ತಪಾಸಣೆ ಶಿಬಿರವಾಗಿದ್ದು, ಎಲ್ಲರೂ ಇದರ ಪ್ರಯೋಜನ ಪಡೆದುಕೊಳ್ಳಬೇಕು. ತಾಲೂಕಿನ ಆಸ್ಪತ್ರೆಗಳು ಬಹಳ ದೂರದಲ್ಲಿ ಇರುವುದರಿಂದ , ತಜ್ಞ ವೈದ್ಯರನ್ನ ಇಲ್ಲಿಗೆ ಕರೆಯಿಸಲಾಗಿದೆ. ಸಕ್ಕರೆ ಕಾಯಿಲೆ, ರಕ್ತದೊತ್ತಡ, ಇ.ಸಿ.ಜಿ, ಕಣ್ಣಿನ ಪರೀಕ್ಷೆ, ಶ್ವಾಸಕೋಶ ಪರೀಕ್ಷೆ ಸೇರಿದಂತೆ ಅನೇಕ ಪರೀಕ್ಷೆಗಳನ್ನು ಮಾಡಲಿದ್ದಾರೆ ಎಂದು ಹೇಳಿದರು.


ಹಾರ್ಟ್ ಸಂಸ್ಥೆಯ ಸಂಸ್ಥಾಪಕ ಶಿವಕುಮಾರ್, ಮುಳ್ಳೂರು ಗ್ರಾ. ಪಂ ಅಭಿವೃದ್ಧಿ ಅಧಿಕಾರಿ ಮಹೇಂದ್ರ ಸ್ವಾಮಿ, ಬಿಲ್ ಕಲೆಕ್ಟರ್ ನಾಗರಾಜು, ಕಾಂಗ್ರೆಸ್ ಮುಖಂಡ ಪುಟ್ಟಸ್ವಾಮಿ, ಮೈಸೂರು ಎ.ಎಸ್.ಜಿ ಕಣ್ಣಿನ ಆಸ್ಪತ್ರೆಯ ಮಹೇಶ್, ಜಾರ್ಜ್, ಮತ್ತು ತಂಡ, ನಾರಾಯಣ ಹೆಲ್ತ್ ಸುಪ್ರೀತ್ ಮತ್ತು ತಂಡ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಸಿಬ್ಬಂದಿ ರವಿರಾಜ್, ಶರಣಪ್ಪ, ಆಸೀಮಾ, ರೇಖಾ, ವೀರಭದ್ರ ಶಿವೇಶ, ವಿನಯ ಕುಮಾರ್, ಶಿವಮ್ಮ, ನೀಲಮ್ಮ, ಮಹಾಲಕ್ಷ್ಮಿ, ಸುಬ್ರಮಣ್ಯ, ಆಶಾ ಕಾರ್ಯಕರ್ತೆಯರು, ಸಂಜೀವಿನಿ ಕಾರ್ಯಕ್ರಮದ ಸುನಂದ, ಸೇರಿದಂತೆ ಸಾರ್ವಜನಿಕರು ಇದ್ದರು.

# ಉಪಟಳ ನೀಡುತಿದ್ದ ಹುಲಿ ಸೆರೆ

ಗುಂಡ್ಲುಪೇಟೆ: ತಾಲೂಕಿನ ಬೊಮ್ಮಲಾಪುರ ಬಳಿ ಅನೇಕ ದಿನಗಳಿಂದ ರೈತರಿಗೆ ಉಪಟಳ ನೀಡಿ ಜಾನುವಾರುಗಳ ಮೇಲೆ ದಾಳಿ ನಡೆಸುತಿದ್ದ ಹುಲಿಯು ಕೊನೆಗೂ ಸೆರೆಯಾಗಿದೆ.

ಬೊಮ್ಮಲಾಪುರ ಸುತ್ತಲಿನ ಗ್ರಾಮಗಳ ಜನ ಜಾನುವಾರುಗಳಿಗೆ ತೊಂದರೆ ನೀಡುತ್ತ ಜನರಲ್ಲಿ ಆತಂಕ ಸೃಷ್ಟಿಸಿದ್ದ ಹುಲಿಯನ್ನು ಅರಣ್ಯ ಇಲಾಖೆ ಕಾರ್ಯಾಚರಣೆ ನಡೆಸುವ ಮೂಲಕ ಸೆರೆ ಹಿಡಿಯಲಾಗಿದೆ. ಕಳೆದ ಮೂರು ವರ್ಷಗಳಿಂದ ಬೊಮ್ಮಲಾಪುರ ಭಾಗದಲ್ಲಿ ಸಂಚರಿಸುತ್ತಾ


ಸಾಕುಪ್ರಾಣಿಗಳನ್ನು ಕೊಲ್ಲುತ್ತಿದ್ದ ಹುಲಿ ಸೆರೆಗೆ ಒತ್ತಾಯಿಸಿ ರೈತರು ಅರಣ್ಯ ಸಿಬ್ಬಂದಿಯನ್ನು ಬೋನಿನಲ್ಲಿ ಕೂಡಿಹಾಕಿದ್ದ ಘಟನೆ ಸಹಾ ರಾಜ್ಯಾದ್ಯಂತ ಸುದ್ದಿಯಾಗಿತ್ತು, ಆದರೆ ಅರಣ್ಯ ಇಲಾಖೆಯ ಬೋನಿಗೆ ಬೀಳದ ಹುಲಿ ಜಮೀನುಗಳಲ್ಲಿ ಬಿಡುಬಿಟ್ಟು ಹಸು ರುರಿ ಸಾಕಾಣಿಕೆ ಮಾಡುತ್ತಿದ್ದ ರೈತರ ಜಾನುವಾರುಗಳನ್ನು ಕೊಲ್ಲುತ್ತಿತ್ತು, ಅಲ್ಲದೆ ಹಾಡ ಹಗಲೇ ಜಮೀನುಗಳ ಅಕ್ಕಪಕ್ಕದಲ್ಲಿ ಸಂಚರಿಸುವ ಮೂಲಕ ಜನರಲ್ಲಿ ಭೀತಿಯುಂಟು ಮಾಡಿತ್ತು,ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆ



ಅದಿಕಾರಿಗಳು ಸಾಕಾನೆ ಹಾಗೂ ಸಿಬ್ಬಂದಿ ನೆರವಿನಿಂದ ಬುಧವಾರ ರಾತ್ರಿ ಕಾರ್ಯಾಚರಣೆ ಕೈಗೊಂಡಿತು. ಥರ್ಮಲ್ ಡ್ರೋಣ್ ಹಾರಿಸಿ ಹುಲಿಯ ಇರುವಿಕೆ ಪತ್ತೆಹಚ್ಚಿದ ನಂತರ ಪಶುವೈದ್ಯರಾದ ವಾಸಿಂ ಹಾಗೂ ಗುರುಸ್ವಾಮಿ ಹುಲಿಗೆ ಅರಿವಳಿಕೆ ನೀಡಿ ಪ್ರಜ್ಞೆ ತಪ್ಪಿಸಿ ಸೆರೆಹಿಡಿದು ಹುಲಿಯನ್ನು ಬಂಡೀಪುರಕ್ಕೆ ಕೊಂಡೊಯ್ಯಲಾಯಿತು.

## ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ಚಾಮರಾಜನಗರ, ತಾಲೂಕಿನ ನಾಗವಳ್ಳಿ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.




ನೃತ್ಯ, ಸಂಗೀತ ಹಾಗೂ ಇಂಗ್ಲಿಷ್ ವಿಷಯಕ್ಕೆ ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳಲಾಗುತ್ತಿದ್ದು, ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ. ಬಿ.ಎ ಪದವಿಯಲ್ಲಿ ಇಂಗ್ಲಿಷ್ ವಿಷಯವನ್ನು ಐಚ್ಛಿಕವಾಗಿ ತೆಗೆದುಕೊಂಡಿರಬೇಕು. ಮತ್ತು ಬಿ.ಎಡ್ ಪದವಿ ಪೂರ್ವಗೊಳಿಸಿರಬೇಕು. ಆಸಕ್ತರು ತಮ್ಮ ಸ್ವ ವಿವರದೊಂದಿಗೆ ಡಿ.23 ರೊಳಗೆ ನೇರವಾಗಿ ಶಾಲೆಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 8310434085, 9886824852, 9036375844 ಸಂಪರ್ಕಿಸಬಹುದೆಂದು ನಾಗವಳ್ಳಿ ಪಿಎಂಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಮುಖ್ಯಮಂತ್ರಿ, ಸಚಿವರು ಪರ್ಸೆಂಟ್ ಆಧಾರದ ಮೇಲೆ ಸರ್ಕಾರ ನಡೆಸುತ್ತಿದ್ದಾರೆ : ಮೂಡ್ನಾಕೂಡು ಪ್ರಕಾಶ್**

# ಕಾಂಗ್ರೆಸ್ಸಿಗರು ಬಿಜೆಪಿ ಕಚೇರಿಗೆ ಮುತ್ತಿಗೆ ಯತ್ನ ಖಂಡನೆ

ಚಾಮರಾಜನಗರ : ಜಿಲ್ಲಾ ಕಾಂಗ್ರೆಸ್ ಸಮಿತಿ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಜಿಲ್ಲಾ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕುವ ಯತ್ನ ಖಂಡಿಸಿ ಬಿಜೆಪಿ ವತಿಯಿಂದ ಪ್ರತಿಭಟನೆ ನಡೆಯಿತು.

ನಗರದ ರಾಮಸಮುದ್ರದ ಕುಲುಮೆ ರಸ್ತೆಯಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಗೆ ಜಿಲ್ಲಾ ಕಾಂಗ್ರೆಸ್ ಸಮಿತಿ ಮುತ್ತಿಗೆ ಹಾಕುವ ಯತ್ನಿಸಿರುವುದನ್ನು ಬಿಜೆಪಿ ಪದಾಧಿಕಾರಿಗಳು ತೀವ್ರವಾಗಿ ಖಂಡಿಸಿ ಕಚೇರಿ ಮುಂಭಾಗದಲ್ಲಿ ಅಕ್ರೋಶ ವ್ಯಕ್ತಪಡಿಸಿದರು.

ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೂಡ್ನಾಕೂಡು ಪ್ರಕಾಶ್ ಮಾತನಾಡಿ. ಕಾಂಗ್ರೆಸ್ ಸರ್ಕಾರದ ಮುಖ್ಯಮಂತ್ರಿಗಳು, ಸಚಿವರು ಪರ್ಸೆಂಟ್ ಆಧಾರದ ಮೇಲೆ ಸರ್ಕಾರ ನಡೆಸುತ್ತಿದ್ದಾರೆ ಇದರ ವಿರುದ್ಧ ಕಾಂಗ್ರೆಸ್ಸಿಗರು ಹೋರಾಟ ಮಾಡಬೇಕಾಗಿದೆ ಹೊರತು ಬಿಜೆಪಿ ವಿರುದ್ಧ ಅಲ್ಲ. ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ. ಇಲಾಖೆಗಳಲ್ಲಿ ಸಾರ್ವಜನಿಕರ ಕೆಲಸಗಳು ಆಗುತ್ತಿಲ್ಲ... ಆಗಾಗಿ.. ನೀವು ಮುತ್ತಿಗೆ ಹಾಕಬೇಕಾಗಿರುವುದು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರ ವಿರುದ್ಧ ನೀವು ಮುತ್ತಿಗೆ ಹಾಕಬೇಕಾಗಿದೆ' ಎಂದರು.



ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರವನ್ನು ಮುಚ್ಚಿಕೊಳ್ಳಲು ಬಿಜೆಪಿ ವಿರುದ್ಧ ಪ್ರತಿಭಟನೆ ಮಾಡುತ್ತಿದೆ. ನಿಮ್ಮ ಪಕ್ಷದ ಜನಪ್ರತಿನಿಧಿಗಳು ಭ್ರಷ್ಟಾಚಾರದಲ್ಲಿ ಮುಳುಗಿದ್ದಾರೆ. ಅದಕ್ಕಾಗಿ ಜನಸಾಮಾನ್ಯರು ಬಲಿಯಾಗುತ್ತಿದ್ದಾರೆ. ಇದರ ಬಗ್ಗೆ ನಮ್ಮ ಪಕ್ಷದ ನಾಯಕರು ಸದನೊಳಗೆ ಪ್ರಶ್ನೆ ಮಾಡಿದ್ದಾರೆ. ಇದರಿಂದ ರಾಜ್ಯ ಬೊಕ್ಕಸ ಕ್ಕೆ 5 ಸಾವಿರ ಕೋಟಿ ಉಳಿದಿದೆ ಇಲ್ಲದಿದ್ದರೆ ನಾಪತ್ತೆ ಆಗುತ್ತಿತ್ತು ಅದರ ಬಗ್ಗೆ ನೀವು ಪ್ರತಿಭಟನೆ ಮಾಡಬೇಕಾಗಿತ್ತು ಎಂದು ಕಿಡಿಕಾಡಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಿ.ವೃಷಬೇಂದ್ರಪ್ಪ, ಹೊನ್ನೂರು ಮಹದೇವಸ್ವಾಮಿ, ಜಿಲ್ಲಾ ಉಪಾಧ್ಯಕ್ಷ ಶಿವುವಿರಾಟ್, ನಟರಾಜು, ಟಗರಪುರ ರೇವಣ್ಣ, ಎಚ್ ಎಮ್ ಬಸವಣ್ಣ, ಚೂಡಾ ಮಾಜಿ ಅಧ್ಯಕ್ಷ ಬಾಲಸುಬ್ರಹ್ಮಣ್ಯಂ, ಕುಲಗಾಣ ಶಾಂತಮೂರ್ತಿ, ನಗರಸಭಾ ಮಾಜಿ ಉಪಾಧ್ಯಕ್ಷೆ ಮಮತ ಬಾಲಸುಬ್ರಹ್ಮಣ್ಯಂ, ಶಿವಣ್ಣ, ನಗರ ಮಂಡಲ ಅಧ್ಯಕ್ಷ ಶಿವರಾಜ್, ಅನಿಲ್, ವೃಷಭೇಂದ್ರಸ್ವಾಮಿ, ಲೋಕೇಶ್ ಜತ್ತಿ, ಎಸ್‌ಪಿ ಮೋರ್ಚಾದ ಅಧ್ಯಕ್ಷ ಚಂದ್ರಶೇಖರ್, ಎಸ್‌ಸಿ ಮೋರ್ಚಾದ ಅಧ್ಯಕ್ಷ ಮುತ್ತಿಗೆಮೂರ್ತಿ, ಎಸ್‌ಟಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ಬುಲೆಟ್‌ಚಂದ್ರ, ರಾಮಸಮುದ್ರ ಶಿವಣ್ಣ, ಕೂಸಣ್ಣ,ಮಹೇಶ್, ಬಂಗಾರನಾಯಕ ಇತರರು ಭಾಗವಹಿಸಿದ್ದರು.

# ಜಂಕ್ ಫುಡ್ ತ್ಯಜಿಸಿ ಸಿರಿಧಾನ್ಯ ಆಹಾರ ಬಳಸಿ

## ಜಿ.ಪಂ. ಸಿ.ಇ.ಓ ಮೋನಾ ರೋತ್ ಸಲಹೆ

ಚಾಮರಾಜನಗರ, ಫುಡ್ ತಿನಿಸುಗಳನ್ನು ತ್ಯಜಿಸಿ ಸಿರಿಧಾನ್ಯದಿಂದ ತಯಾರಿಸಿದ ಆಹಾರವನ್ನು ಸೇವಿಸುವುದರಿಂದ ಆರೋಗ್ಯ ಸುಧಾರಣೆಗೆ ಸಹಕಾರಿಯಾಗಲಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆ.ಡಿ.ಪಿ. ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ವತಿಯಿಂದ ಅಂತರರಾಷ್ಟ್ರೀಯ ವಾಣ ಜ್ಯ ಮೇಳ–2026ರ ಅಂಗವಾಗಿ ಆಯೋಜಿಸಲಾಗಿದ್ದ ಸಿರಿಧಾನ್ಯ ಮತ್ತು ಮರೆತುಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಮಣ ?ಣನ ಮಡಿಕೆಗೆ ಬಿದಿರಿನ ಮೊರದಲ್ಲಿ ರಾಗಿ ತುಂಬಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಇತ್ತೀಚೆಗೆ ಫಾಸ್ಟ್ ಫುಡ್, ಜಂಕ್ ಫುಡ್ ಗಳ ಬಳಕೆ ಹೆಚ್ಚಾಗುತ್ತಿದೆ. ಸಿರಿಧಾನ್ಯಗಳಿಂದ ಉತ್ಪಾದಿಸಲಾಗುವ ಆಹಾರಗಳು ಇಂದು ಕಣ್ಮರೆಯಾಗುತ್ತಿದೆ. ನಾವು ಉಪಯೋಗಿಸುವ ಆಹಾರಗಳಲ್ಲಿ ಪೌಷ್ಟಿಕಾಂಶದ ಕೊರತೆಯಿದೆ. ಜಂಕ್ ಫುಡ್ ಆಹಾರಗಳು ಅತಿ ರುಚಿಯನ್ನು ಹೊಂದಿದ್ದು ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ.ಿಟ ಮಕ್ಕಳಿಗೆ ಇಂತಹ ಆಹಾರಗಳನ್ನು ನೀಡುವ ಬದಲು ಮನೆಯಿಂದಲೇ ಸಿರಿಧಾನ್ಯಗಳಿಂದ ತಯಾರಿಸಿದ ಆಹಾರ ಪದಾರ್ಥಗಳನ್ನು ನೀಡುವುದು ಒಳಿತು ಎಂದರು.ಪ್ಯಾಕ್ ಮಾಡಿದ ಕೆಲ ಆಹಾರ ಪಧಾರ್ಥಗಳನ್ನು ಉಪಯೋಗಿಸುವುದರಿಂದ ಆರೋಗ್ಯಕ್ಕೆ ಹಾನಿಯಾಗಲಿದೆ. ನಮ್ಮ ಹಿರಿಯರು ಸಿರಿಧಾನ್ಯಗಳಿಂದ ತಯಾರಿಸಿದ ಊಟ ಉಪಹಾರ



ಸೇವಿಸಿ ಧೀರ್ಘಕಾಲ ಬದುಕಿರುವುದನ್ನು ಕೇಳಿದ್ದೇವೆ. ಮಕ್ಕಳಿಗೆ ತಾಯಂದಿರು ಮನೆಯಲ್ಲಿಯೇ ತಯಾರಿಸಿದ ಆಹಾರವನ್ನು ನೀಡಬೇಕು. ಸಿರಿಧಾನ್ಯಗಳನ್ನು ಬೆಳೆದು ಮುಂದಿನ ಪೀಳಿಗೆಗೆ ಬಳುವಳಿಯಾಗಿ ನೀಡಬೇಕೆಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೃಷಿ ನಿರ್ದೇಶಕರಾದ ಸು?ಾ?ಮ ಅವರು 2026ರ ಅಂತರಾಷ್ಟ್ರೀಯ ವಾಣ ಜ್ಯ ಸಿರಿಧಾನ್ಯ ಮೇಳವನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ಜನವರಿ 16, 17, 18 ರಂದು ಆಯೋಜಿಸಲಾಗಿದೆ. ಬೆಂಗಳೂರಿನಲ್ಲಿ ನಡೆಯುವ ಕಾರ್ಯಕ್ರಮದ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಇಂದು ವಾಣ ಜ್ಯ ಸಿರಿಧಾನ್ಯ ಮೇಳವನ್ನು ಇಲಾಖೆ ವತಿಯಿಂದ ಆಯೋಜಿಸಲಾಗಿದೆ ಎಂದರು.

ಈ ಹಿಂದೆಯೂ ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಜಿಲ್ಲೆಗೆ ಬಹುಮಾನ ಬಂದಿದ್ದು, ಸಂತೋಷದ ವಿಷಯವಾಗಿದೆ. 2026ರಲ್ಲಿ ನಡೆಯುವ ವಾಣ ಜ್ಯ ಸಿರಿಧಾನ್ಯ ಮೇಳದಲ್ಲಿ ಜಿಲ್ಲೆಯ ಸ್ಪರ್ಧಿಗಳು ಭಾಗವಹಿಸಿ ಬಹುಮಾನ ಪಡೆದು ಜಿಲ್ಲೆಗೆ ಕೀರ್ತಿ ತರಬೇಕೆಂದು ಜಂಟಿ ಕೃಷಿ ನಿರ್ದೇಶಕರಾದ ಸು?ಾ?ಮ ಅವರು ಶುಭ ಕೋರಿದರು. ಟಕಾರ್ಯಕ್ರಮದಲ್ಲಿ ತೀರ್ಪುಗಾರರಾಗಿ ಸಿಮ್ಸ್ ಸಂಸ್ಥೆಯ ಡಾ. ಧನ್ಯಶ್ರೀ, ಡಾ. ಮಂಜುನಾಥ್, ಹರದನಹಳ್ಳಿಯ ಕೆ.ವಿ.ಕೆ ಆಹಾರ ವಿಜ್ಞಾನಿ ಡಾ. ದೀಪ ಭಾಗವಹಿಸಿದ್ದರು. ನಂತರ ವಿವಿಧ ಬಗೆಯ ಸಿರಿಧಾನ್ಯಗಳಿಂದ ತಯಾರಿಸಿದ ಆಹಾರ ತಿನಿಸುಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಜಂಟಿ ಕೃಷಿ ನಿರ್ದೇಶಕರಾದ ಸು?ಾ?ಮ, ತೀರ್ಪುಗಾರರು ಸವಿದು ಮೆಚ್ಚುಗೆ ವ್ಯಕ್ತಪಡಿಸಿದರು.

# ದೇವರಾಜ್.ಟಿ.ಕಾಟೂರು ದಮನಿತ ಸಮಾಜಗಳ ವೇದಿಕೆಯ ರಾಜ್ಯಾಧ್ಯಕ್ಷ



ಮೈಸೂರು: ಸಮಾಜಗಳ ಪರವಾಗಿ ಹೋರಾಟ ಮಾಡಲಿಕ್ಕೆ ನಾಯಕತ್ವದ ಕೊರತೆ ಇರುವ ಕಾರಣ ಸಣ್ಣ ಮತ್ತು ಅತಿ ಸಣ್ಣ ಸಮುದಾಯಗಳ ಧ್ವನಿಯಾಗಿ ನಿಂತು ಹೋರಾಟ ಮಾಡಲು ಈ ದಮನಿತ ಸಮಾಜಗಳ ವೇದಿಕೆಯನ್ನು ನೂತನವಾಗಿ ಅಸ್ಥಿತ್ವಕ್ಕೆ ತಂದು ವಿಧ್ಯಾರ್ಥಿ ಜೀವನದಿಂದಲೂ ಸಾಮಾಜಿಕವಾಗಿ ಹೋರಾಟ ಮಾಡಿಕೊಂಡು ಬರುತ್ತಿರುವ ದೇವರಾಜ್.ಟಿ.ಕಾಟೂರುರನ್ನು ಸರ್ವಾನುಮತದಿಂದ ರಾಜ್ಯಾಧ್ಯಕ್ಷರಾಗಿ ಆಯ್ಕೆ ಮಾಡಿ ಘೋಷಣೆ ಮಾಡಲಾಯಿತು.

> ರಾಜ್ಯಾಧ್ಯಕ್ಷರಾಗಿ ಆಯ್ಕೆ ಮಾಡಿದ ದಮನಿತ ಸಮಾಜಗಳ ಮುಖಂಡರಿಗೆ ಧನ್ಯವಾದಗಳನ್ನು ಸಲ್ಲಿಸುತ್ತಾ ನಾನು ಪಕ್ಷಾತೀತವಾಗಿ ಸಂವಿಧಾನ ಬದ್ದ ಹಕ್ಕುಗಳಿಗಾಗಿ ಶೋಷಿತರ ಪರವಾಗಿ ಹೋರಾಟ ಮಾಡಲು ಎಲ್ಲಾ ತ್ಯಾಗಕ್ಕೂ ಸಿದ್ದರಾಗಿ ಸದಾ ನಿಮ್ಮ ಸೇವೆ ಮಾಡುತ್ತೇನೆ.
> **ದೇವರಾಜ್.ಟಿ.ಕಾಟೂರು**

ನಗರದ ಜಲದರ್ಶಿನಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ದಲಿತ ಹೋರಾಟಗಾರ ಹರಿಹರ ಆನಂದಸ್ವಾಮಿ ಮಾತನಾಡಿ, ಸ್ವಾತಂತ್ರ್ಯ ಬಂದು 75 ವರ್ಷಗಳು ಆಗಿದ್ದರು ಕೂಡ ಸಾಕಷ್ಟು ಸಮುದಾಯಗಳು ಸರ್ಕಾರದ ಸವಲತ್ತುಗಳಿಂದ ವಂಚಿತರಾಗಿ ಮುಖ್ಯ ವಾಹಿನಿಗೆ ಬರದೆ ತೆರಮರೆಗೆ ಸರಿದಿವೆ ಇದು ಸ್ವಾತಂತ್ರ್ಯ ಭಾರತದಲ್ಲಿ ದೊಡ್ಡ ದುರಂತ. ಆಳುವ ಸರ್ಕಾರಗಳು ಡಾ.ಬಿ.ಆರ್. ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನವನ್ನು ಯಥಾವತ್ತಾಗಿ ಜಾರಿ ಮಾಡಿದ್ದರೆ ಇಂದು ಶೋಷಿತ ಸಮುದಾಯಗಳು ಹೋರಾಟ ರೂಪಿಸುವ ಸಭೆಗಳನ್ನೆ ಮಾಡುತ್ತಿರಲಿಲ್ಲಾ, ಆಳುವ ಸರ್ಕಾರದಲ್ಲಿ ಇರುವ ಹಿಂದುಳಿದ,ದಲಿತ ,ಶೋಷಿತ ಸಮುದಾಯಗಳನ್ನು ಪ್ರತಿನಿಧಿಸುವವವರು ಸನಾತಿಗಳ ಪ್ರಭಾವಕ್ಕೆ ಒಳಗಾಗಿ ಸಂವಿಧಾನದ ಆಶಯಗಳನ್ನು ಗಾಳಿಗೆ ತೂರುತ್ತಿದ್ದಾರೆ ಇದನ್ನು ಈ ಸಂಘಟನೆ ಸಂವಿಧಾನ ರಕ್ಷಣೆ ಮಾಡುವ ಹೋರಾಟಗಳನ್ನು ರೂಪಿಸಿಕೊಂಡಾಗ ಮಾತ್ರ ನಮ್ಮಗಳಿಗೆ ಮತ್ತು ಮುಂದಿನ ಪೀಳಿಗೆಗೆ ಭವಿಷ್ಯ ಇರುತ್ತದೆ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಮುಖಂಡ ಜಿ.ಎಂ.ಗಾಡ್ಕರ್ ಮಾತನಾಡಿ, ಮೈಸೂರಿನಲ್ಲಿ ಹುಟ್ಟುವ ಸಂಘಟನೆಗಳು ರಾಜ್ಯ ಮತ್ತು ದೇಶ ವ್ಯಾಪ್ತಿ ವಿಸ್ತರಿಸಿಕೊಂಡು ಜೀವಂತವಾಗಿ ಉಳಿದಿವೆ. ಅದೇ ರೀತಿ ಈ ಸಂಘಟನೆ ಕೂಡ ಡಿಎಸ್ಎಸ್ ಮತ್ತು ರೈತ ಚಳುವಳಿಗಳಂತೆ ಹೋರಾಟ ಮಾಡಿ ಸಂವಿಧಾನ ಬದ್ದ ಹಕ್ಕುಗಳನ್ನು ದಮನಿತ ಸಮಾಜಗಳಿಗೆ ದೊರಕಿಸಿ ಕೊಡಬೇಕು ಎಂದರು.

ಸಭೆಯಲ್ಲಿ ಹೋರಾಟಗಾರ ಬನ್ನೂರ್ ಕುಮಾರ್, ನಗರಪಾಲಿಕೆ ಮಾಜಿ ಸದಸ್ಯ ಡಿ.ನಾಗಭೂಷಣ್, ಡಿಎಸ್ಎಸ್ ಜಿಲ್ಲಾ ಸಂಚಾಲಕ ಚೋರನಹಳ್ಳಿ ಶಿವಣ್ಣ, ಅಶೋಕಪುರಂ ದೊಡ್ಡಗರಡಿ ಅಧ್ಯಕ್ಷ ಜೋಗಿ ಮಹೇಶ್ ಮಾತನಾಡಿದರು. ವೇದಿಕೆಯ ನೂತನ ಪ್ರಧಾನ ಕಾರ್ಯದರ್ಶಿಯಾಗಿ ಸತ್ಯನಾರಾಯಣ,ಉಪೇಂದ್ರಕುಮಾರ್, ಖಜಾಂಚಿಯಾಗಿ ಟಿಂಬರ್ ನಾಗರಾಜು, ಕಾರ್ಯದರ್ಶಿಯಾಗಿ ಪರಮೇಶ್, ಉಪಾಧ್ಯಕ್ಷರಾದ ನಾಸಿರ್, ಮಹೇಶ್, ಲಕ್ಷ್ಮಣ್, ಪಿ.ಶಂಕರ್, ಮಂಜುನಾಥ್, ರಾಬರ್ಟ್, ಆರ್. ಆರ್.ಪ್ರಕಾಶ್, ರಾಮಕೃಷ್ಣ, ಸುನೀಲ್ ಕುಮಾರ್, ನೃಪತುಂಗ, ಕೆಂಪಯ್ಯ ಜಯಪುರ, ಶ್ರೀಕಂಠ, ಬಸವಣ್ಣ ಬದನವಾಳು, ಸಿದ್ದಪ್ಪ, ಬಸವರಾಜು, ಮಲ್ಲೇಶ ಸಭೆಯಲ್ಲಿ ಭಾಗವಹಿಸಿದ್ದರು.

# ಅಗಸ್ತ್ಯ ಗುರುಕುಲ ಶಾಲೆಯ ವಾರ್ಷಿಕೋತ್ಸವ ಸಮಾರಂಭ

ಕೊಳ್ಳೇಗಾಲ: ಕೊಳ್ಳೇಗಾಲ ಪಟ್ಟಣದಲ್ಲಿರುವ ಜನನಿ ಆಸ್ಪತ್ರೆಯ ಹಿಂಭಾಗವಿರುವ ಅಗಸ್ತ ?ಯ ಗುರುಕುಲ ಆಂಗ್ಲ ಮಾದ್ಯಮ ಶಾಲೆಯ ವಾರ್ಷಿಕೋತ್ಸವ ಸಮಾರಂಭ ಡಿ.18 ಗುರುವಾರ ಭ್ರಮರಾಂಭ ಕಲ್ಯಾಣ ಮಂಟಪದಲ್ಲಿ ನೆರವೇರಿತು.

ಸಮಾರಂಭವನ್ನು ಮಲೆ ಮಹದೇಶ್ವರ ಬೆಟ್ಟದ ಸಾಲೂರು ಬೃಹನ್ಮಠ ಸ್ವಾಮೀಜಿ ಶ್ರೀ ಡಾ.ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಯವರು ಉದ್ಘಾಟಿಸಿ ನಂತರ ಆಶೀರ್ವಚನ ಮಾಡಿದರು. ಮಕ್ಕಳಿಗೆ ಒಳ್ಳೆಯ ಶಿಕ್ಷಣವನ್ನು ನೀಡುವುದರ ಜೊತೆಗೆ ಒಳ್ಳೆಯ ಸಂಸ್ಕಾರವನ್ನು ಕಲಿಸಬೇಕಾದ ಜವಾಬ್ದಾರಿ ಶಿಕ್ಷಕರ ಹಾಗೂ ಪೋಷಕರ ಮೇಲಿದೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣ ಪ್ರತಿಯೊಬ್ಬರಿಗೂ ಅತ್ಯಾವಶ್ಯಕವಾಗಿದ್ದು ಶಿಕ್ಷಣ ಇದ್ದರೆ ಬದುಕಿನಲ್ಲಿ ದೊಡ್ಡ ಸಾಧನೆಯನ್ನು ಮಾಡಲು ಸಾಧ್ಯ. ಶಿಕ್ಷಣ ಇಲ್ಲದಿದ್ದರೆ ಸಾಧನೆ ಮಾಡಲು ಅಸಾಧ್ಯ. ಆದ್ದರಿಂದ ಪ್ರತಿಯೊಬ್ಬರೂ ಶಿಕ್ಷಣವನ್ನು ಪಡೆದು ವಿದ್ಯಾವಂತರಾಗಿ ಉತ್ತಮ ಬದುಕನ್ನು ಸಾಗಿಸಬೇಕೆಂದು ಮಕ್ಕಳಿಗೆ ಕಿವಿಮಾತು ಹೇಳಿದರು.


ನಮ್ಮ ರಾಜ್ಯದಲ್ಲಿ ಸಾಕ್ಷರತೆಯ ಪ್ರಮಾಣ ಕಡಿಮೆ ಇದ್ದು, ಕೇರಳ ರಾಜ್ಯದಲ್ಲಿ ಸಾಕ್ಷರತೆಯ ಪ್ರಮಾಣ ಹೆಚ್ಚಾಗಿದೆ. ಆದ್ದರಿಂದ ಪೋಷಕರು ತಮ್ಮ ಮಕ್ಕಳನ್ನು ಸಾಕ್ಷರರನ್ನಾಗಿ ಮಾಡಬೇಕು. ಮಕ್ಕಳು ಬಾಲ್ಯದಿಂದಲೇ ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಬಾಲ್ಯದಲ್ಲಿ ದಿನಕ್ಕೆ 8 ಗಂಟೆಯ ಕಾಲ ಓದುವ ಅಭ್ಯಾಸವನ್ನು ರೂಡಿಸಿಕೊಳ್ಳಬೇಕು. "ಓದು ಎನ್ನುವುದು ಅಪರಂಜಿ ಇದ್ದಹಾಗೆ" ಸಮಯವನ್ನು ಹಾಳು ಮಾಡಿಕೊಳ್ಳಬಾರದು. ಏಕೆಂದರೆ ಸಮಯ ಎನ್ನುವುದು ಅಮೂಲ್ಯವಾದುದ್ದು. ಕಲಿಕೆ ಎನ್ನುವುದು ಮಕ್ಕಳಲ್ಲಿ ನಿರಂತರಾಗಿರಬೇಕೆಂದು ಶ್ರೀ ಡಾ. ಶಾಂತಮಲ್ಲಿಕಾರ್ಜುನ ಸ್ವಾಮೀಜಿಯವರು ಮಕ್ಕಳಿಗೆ ಹಿತವಚನ ಹೇಳಿದರು. ಸಂಸ್ಥೆಯ ಸಂಸ್ಥಾಪಕರಾದ ಅಚ್ಗಾಳ್ ನಾಗರಾಜಯ್ಯರವರು ಅತಿಥಿಗಳನ್ನು ಸ್ವಾಗತಿಸಿದರು. ವೇದಿಕೆಯಲ್ಲಿ ಚರ್ಚ್ ಫಾದರ್ ಜಾಕೋಬ್, ರವಿಕಿರಣ್, ಮುಖ್ಯಶಿಕ್ಷಕರುಗಳು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಮಕ್ಕಳಿಂದ ವಿವಿದ ಬಗೆಯ ಮನೋರಂಜನೆ ಕಾರ್ಯಕ್ರಮಗಳು ನಡೆಯಿತು.



# ಹೆಣ್ಣುಮಕ್ಕಳ ಮೇಲೆ ಅತ್ಯಾಚಾರ ಕಿರುಕುಳ ಖಂಡಿಸಿ ಪ್ರತಿಭಟನೆ

ಗುಂಡ್ಲುಪೇಟೆ: ಹೆಣ್ಣುಮಕ್ಕಳ ಮತ್ತು ಮಹಿಳೆಯರ ರಕ್ಷಣೆ ಹಾಗೂ ಲೈಂಗಿಕ ಕಿರುಕುಳ, ಅತ್ಯಾಚಾರ ಖಂಡಿಸಿ ಆರೋಪಿಗಳಿಗೆ ಜಾಮೀನು ನೀಡದೆ, ಕಠಿಣ ಶಿಕ್ಷೆ ನೀಡುವಂತೆ ಕೋರಿ ಮಹಿಳೋದಯ ಮಹಿಳಾ ಒಕ್ಕೂಟ ವತಿಯಿಂದ ಹಕ್ಕೋತ್ತಾಯ ಪ್ರತಿಭಟನೆ, ಮನವಿ ಸಲ್ಲಿಸಿದರು.

ಪಟ್ಟಣದ ದೇವರಾಜ್ ಅರಸು ಕ್ರೀಡಾಂಗಣದಿಂದ ಘೋಷಣೆಗಳನ್ನು ಕೂಗುತ್ತ ರಾಷ್ಟ್ರೀಯ ಹೆದ್ದಾರಿ ಮೂಲಕ ಸಾಗಿ ತಾಲೂಕು ಕಚೇರಿ ಮುಂಭಾಗ ಜಮಾಯಿಸಿದರು ನಂತರ ಮನವಿ ಪತ್ರ ಸಲ್ಲಿಸಿ ಮಾತನಾಡಿದ ವಲಯ ಸಂಯೋಜಕ ಸಿದ್ದರಾಜು ದೇಶದ ಉದ್ದಗಲಕ್ಕೂ ಪ್ರತಿ ದಿನ, ಹೆಣ್ಣು ಮಕ್ಕಳ ಮತ್ತು ಮಹಿಳೆಯರ ಮೇಲಿನ ಅತ್ಯಾಚಾರಳು, ಲೈಗಿಂಕ ಕಿರುಕುಳ ಹಾಗೂ ಕೊಲೆ ಪ್ರಕರಣಗಳು ಹೆಚ್ಚಾಗುತ್ತಾ ಇರುವುದು ಆಘಾತಕಾರಿ ವಿಷಯವಾಗಿದೆ. ಕೇಂದ್ರ ಮತ್ತು ರಾಜ್ಯ ಸರಕಾರಗಳು ಮಹಿಳೆಯರ ರಕ್ಷಣೆಗೆ ಹಲವಾರು ಕಾನೂನುಗಳನ್ನು ರೂಪಿಸಿದ್ದರೂ ಸಹ, ಕಾರ್ಯ ನಿರ್ವಹಣೆಯಲ್ಲಿ ವಿಫಲರಾಗುತ್ತಿದ್ದೇವೆ ಎಂದು ಭಾಸವಗುತ್ತದೆ, ಈ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕಾನೂನು ರೂಪಿಸುವುದು ಮಾತ್ರವಲ್ಲ ಅದನ್ನು ಅನುಷ್ಠಾನಗೊಳಿಸುವುದು ಅಷ್ಟೆ ಮುಖ್ಯವಾಗಿದೆ ಎಂದರು. ಪೋಲಿಸ್ ಇಲಾಖೆಯ ಮಾಹಿತಿ ಪ್ರಕಾರ ಈ ವರ್ಷ 2025 ರ ಜುಲೈ ಅಂತ್ಯವರೆಗೆ ನಮ್ಮ ರಾಜ್ಯದಲ್ಲಿ ಸುಮಾರು 340 ಅತ್ಯಾಚಾರ ಪ್ರಕರಣಗಳು, 3,089 ಪೋಕೋ ಪ್ರಕರಣಗಳು ಮತ್ತು 3,643 ಲೈಗಿಂಕ ಕಿರುಕುಳ ಪ್ರಕರಣಗಳು, ಸುಮಾರು 25,000 ಬಾಲಕಿಯರು (18 ವರ್ಷ ಒಳಗಿನ) ಗರ್ಭಿಣಿಯರಾಗಿರುವ ಪ್ರಕರಣಗಳು ದಾಖಲಾಗಿವೆ. ಇನ್ನು ಅದೇಷ್ಟೋ ಪ್ರಕರಣಗಳು




ಕಾರಣಾಂತರಗಳಿಂದ ದಾಖಲಾಗದೆ ಉಳಿದಿವೆ. ದಾಖಲಾದ ಪ್ರಕರಣಗಳು ಇನ್ನು ಸರಿಯಾಗಿ ಇತ್ಯಾರ್ಥವಾಗದೆ ಉಳಿದಿರುವುದರಿಂದ ಮಹಿಳೆಯರು ಮತ್ತು ಮಕ್ಕಳು ಉಸಿರುಗಟ್ಟುವ ಭಯದ ವಾತವರಣದಲ್ಲಿ ಬದುಕುವಂತಾಗಿದೆ. ಈ ಭಯದ ವಾತವರಣದಿಂದ ಮಹಿಳೆಯರು ಹೊರಬರಬೇಕಾಗಿದೆ. ಈ ನಿಟ್ಟಿನಲ್ಲಿ ಮಹಿಳೆಯರ ರಕ್ಷಣೆಗಾಗಿ, ಹಕ್ಕುಗಳಿಗಾಗಿ ಮಹಿಳೋದಯ ಮಹಿಳಾ ಒಕ್ಕೂಟವು ಗ್ರಾಮ ಮಟ್ಟದಿಂದ ಕೇಂದ್ರ ಮಟ್ಟದವರೆಗೆ ಮಹಿಳೆಯರ ಸುರಕ್ಷತೆಗೆ ಸೂಕ್ತ ಕ್ರಮ ಜಾರಿಗೊಳಿಸಲು ಹಕ್ಕೋತ್ತಾಯ ಮನವಿ ಮಾಡುತಿದ್ದೇವೆ ಎಂದರು.

ಅತ್ಯಾಚಾರ ಮತ್ತು ಕೊಲೆವೆಸಗಿದ ಆರೋಪಿಗಳನ್ನು ಕೂಡಲೇ ಬಂದಿಸಿ ಅವರಿಗೆ ಮರಣ ದಂಡನೆ ವಿಧಿಸುವುದು, ಮಹಿಳೆಯರ ಮೇಲಿನ ಹೀನಕೃತ್ಯ ನಡೆಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದು ಮಹಿಳೆಯರ ವಿರುದ್ಧ ನಡೆಯುವ ಅಪರಾಧಗಳ ಕುರಿತು ರಾಜ್ಯ / ಕೇಂದ್ರ ಸರಕಾರಗಳು ಅತ್ಯಂತ ತುರ್ತಾಗಿ ಕ್ರಮ ಕೈಗೊಳ್ಳಬೇಕು, ಕೋರ್ಟ್‌ಗಳಲ್ಲಿ ಮಹಿಳೆಯರ ಮೇಲಿನ ಪ್ರಕರಣಗಳು ತ್ವರಿತವಾಗಿ ವಿಲೇವಾರಿ ಮಾಡುವುದು ಮತ್ತು ತಪ್ಪಿತಸ್ತರಿಗೆ ಶಿಕ್ಷೆ ನೀಡಬೇಕು. ಮಹಿಳೆಯರು ನಿರ್ಭೀತಿಯಿಂದ ಜೀವಿಸಲು ತಳಮಟ್ಟದಿಂದ ರಾಷ್ಟ್ರಮಟ್ಟದವರೆಗೂ ಕಾನೂನು ರೀತಿಯಲ್ಲಿ ಸೂಕ್ತ ರಕ್ಷಣೆ ನೀಡುವುದು, ಮಹಿಳೆಯರಿಗೆ ಎಲ್ಲಾ ರೀತಿಯ ಸೂಕ್ತ ರಕ್ಷಣೆ ನೀಡುವುದು,ಭ್ರೂಣ ಲಿಂಗ ಪತ್ತೆಯನ್ನು ನಿಲ್ಲಿಸಬೇಕು,ಹೆಣ್ಣು ಭ್ರೂಣ ಹತ್ಯೆ ಮಾಡುವವರನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಯನ್ನು ನೀಡುವುದು,ಉದ್ಯೋಗ ಸ್ಥಳಗಳಲ್ಲಿ ಮಹಿಳೆಯರಿಗೆ ಸುರಕ್ಷತೆಯ ವಾತವರಣ ನಿರ್ಮಿಸುವುದು,ಎಲ್ಲಾ ಹೆಣ್ಣುಮಕ್ಕಳ ವಸತಿ ನಿಲಯಗಳ ಬಳಿ ಸೂಕ್ತ ಭದ್ರತೆ ನೀಡುವುದು. ಅತ್ಯಾಚಾರಿಗಳಿಗೆ ವಿಧಿಸುವ ಶಿಕ್ಷೆಯನ್ನು ಕಠಿಣಗೊಳಿಸಬೇಕು. ಈಗಿರುವ ಶಿಕ್ಷೆಯ ವಿಧಾನವನ್ನು ಬದಲಿಸಬೇಕು ಮತ್ತು ಅತೀ ಶೀಘ್ರದಲ್ಲಿ ತೀರ್ಪು ನೀಡಿ ಅತ್ಯಾಚಾರಿಗಳನ್ನು ಮಟ್ಟ ಹಾಕಬೇಕು. ಸಮಾಜದಲ್ಲಿರುವ ಇತರ ವಿಕೃತ ಪುರುಷರಿಗೆ ಪಾಠವಾಗಬೇಕು ಎಂದು ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷೆ ರೂಪ , ವಲಯ ಸಂಯೋಜಕ ಸಿದ್ದರಾಜು, ತಾಲ್ಲೂಕು ಕಾರ್ಯಕರ್ತ ಮಹೇಶ್, ಸಮಾಜ ಸೇವಕಿ ಪುಟ್ಟಮ್ಮ, ಮತ್ತಿತರರಿದ್ದರು.

# ಕಲಿಕೆಗೆ ಅಂಗನವಾಡಿಗಳಲ್ಲಿ ಉತ್ತಮ ವಾತಾವರಣ

ಎಚ್.ಡಿ.ಕೋಟೆ: ಶಾಲಾ ಪೂರ್ವ ಶಿಕ್ಷಣ ಯಾವುದೇ ಖಾಸಗಿ ಶಾಲೆಗಳಿಗಿಂತ ಕಲಿಕೆಗೆ ಪೂರಕವಾದ ವಾತಾವರಣ ಅಂಗನವಾಡಿ ಕೇಂದ್ರಗಳಲ್ಲಿ ನಿರ್ಮಾಣವಾಗಿದೆ ಎಂದು ಮೈಸೂರು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಬಿ.ಬಸವರಾಜು ತಿಳಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ನಡೆದ ಮಕ್ಕಳ ಜಾಗೃತಿ ಸಂಸ್ಥೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ನಾಗನಹಳ್ಳಿ, ಬೀಚನಹಳ್ಳಿ ಗ್ರಾಮ ಪಂಚಾಯಿತಿ, ಹೆಚ್.ಸಿ.ಎಲ್. ಪೌಂಡೇಶನ್ ಸಂಯುಕ್ತಾಶ್ರ ಯದಲ್ಲಿ ನಡೆದ ಕಸಬಾ ವೃತದ ಅಂಗನವಾಡಿ ಹಬ್ಬ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಕಲಿಕೆಗಾಗಿ ಏನೆಲ್ಲ ಚಟುವಟಿಕೆಗಳನ್ನು ಮಾಡುತ್ತಿದ್ದೇವೆ ಎಂಬ ವಿಚಾರ ಪೋಷಕರಿಗೆ ಮತ್ತೆ ಸಮುದಾಯಕ್ಕೆ ತಿಳಿಸಬೇಕು. ಈ ನಿಟ್ಟಿನಲ್ಲಿ ಅಂಗನವಾಡಿ ಹಬ್ಬ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಇದು ವಿಶೇಷ ಕಾರ್ಯಕ್ರಮ, ಇದರಿಂದ ಸಮುದಾಯದಲ್ಲಿ ಬಹಳ ಬದಲಾವಣೆಯನ್ನು ಕಂಡಿದ್ದೇವೆ, ಇಲಾಖೆಯಿಂದ ಗರ್ಭಿಣಿ ಬಾಣಂತಿಯರಿಗೆ ಪೌಷ್ಟಿಕ ಆಹಾರ ನೀಡುತ್ತಿದ್ದೇವೆ ಪ್ರತಿಯೊಂದು ಅಂಗನವಾಡಿ ಕೇಂದ್ರಗಳಲ್ಲಿ ಮೂಲ ಸೌಕರ್ಯಗಳನ್ನು ಒಳಗೊಂಡಂತೆ ಯಾವುದೇ ಖಾಸಗಿ ಶಾಲೆಗಳಿಗಿಂತ ಅಂಗನವಾಡಿಗಳಲ್ಲಿ ಕಲಿಕೆಗೆ ಪೂರಕವಾದ ಉತ್ತಮ ವಾತಾವರಣ ಸೃಷ್ಟಿಯಾಗಿದೆ ಎಂದರು. ಅಪೌಷ್ಟಿಕ ಮಕ್ಕಳಿಗೆ ಸಿ.ಎಫ್.ಟಿ ಆರ್.ಐ ನಿಂದ ಗುಣಮಟ್ಟದ ಪೌಷ್ಟಿಕ ಆಹಾರವನ್ನು ನೀಡುತ್ತಿದ್ದೇವೆ. ಇದರ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು. ಪೋಷಕರು



ಮಕ್ಕಳನ್ನು ಅಂಗನವಾಡಿಗೆ ಕಳುಹಿಸಬೇಕು ಎಂದರು.

ಪುರಸಭೆ ಮಾಜಿ ಸದಸ್ಯ ಎಚ್.ಸಿ ನರಸಿಂಹಮೂರ್ತಿ ಮಾತನಾಡಿ, ಅಂಗನವಾಡಿ ಹಬ್ಬ ಇದೊಂದು ವಿಶೇಷ ಕಾರ್ಯಕ್ರಮ, ಸರ್ಕಾರದ ಮಹತ್ವಕಾಂಕ್ಷೆ ಯೋಜನೆ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಕಲಿಕೆಗೋಸ್ಕರ ಏನೆಲ್ಲ ಸೌಲಭ್ಯ ನೀಡಲಾಗಿದೆ ಎಂಬುದನ್ನು ಇವತ್ತಿನ ಕಾರ್ಯಕ್ರಮದಲ್ಲಿ ನೋಡಿದಾಗ ತಿಳಿಯುತ್ತದೆ. ಇದೊಂದು ಜಾತ್ರೆ ಇಲ್ಲಿ ಬಂದಿರುವ ಮಕ್ಕಳ ಪೋಷಕರು ಎಲ್ಲ ಸ್ಟಾಲ್ ಗಳಿಗೂ ಭೇಟಿ ನೀಡಿ ವೀಕ್ಷಣೆ ಮಾಡಬೇಕು. ಮಕ್ಕಳ ಕಲಿಕೆಗೆ ಅಂಗನವಾಡಿಗೆ ಕಳುಹಿಸಬೇಕು ಇದರಿಂದ ಮಕ್ಕಳಲ್ಲಿ ಗುಣ ಮಟ್ಟದ ಕಲಿಕೆಗೆ ಸಹಾಯವಾಗಲಿದೆ, ಕಳೆದ ಹತ್ತಾರು ವರ್ಷಗಳಿಗೆ ಹೋಲಿಕೆ ಮಾಡಿದರೆ ಅಂಗನವಾಡಿಗಳಲ್ಲಿ ಸಾಕಷ್ಟು ಬದಲಾವಣೆಗಳಾಗಿವೆ ಎಂದರು.

ಮಕ್ಕಳ ಜಾಗೃತಿ ಸಂಸ್ಥೆಯ ಉಪ ನಿರ್ದೇಶಕಿ ಅಮೃತಾ ಮಾತನಾಡಿ, ಎಚ್.ಡಿ.ಕೋಟೆ ತಾಲೂಕಿನಲ್ಲಿ 2 ವರ್ಷಗಳಿಂದ ಕೆಲಸ ಮಾಡುತ್ತಿದ್ದು, 10 ಅಂಗನವಾಡಿ ಕೇಂದ್ರಗಳನ್ನು ಆಯ್ಕೆ ಮಾಡಿಕೊಂಡಿ ಶಾಲಾ ಪೂರ್ವ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತಿದ್ದೇವೆ, ಎಂದರು. ಗರ್ಭಿಣಿಯರಿಗೆ ಸೀಮಂತ ಕಾರ್ಯ ಕ್ರಮ ನೆರವೇರಿಸಲಾಯಿತು, ಹಬ್ಬದಲ್ಲಿ ಭಾಗವಹಿಸಿದ ಎಲ್ಲ ಮಕ್ಕ ಳಿಗೂ ಪೆನ್ಸಿಲ್ ಹಾಗೂ ನೋಟ್ ಬುಕ್ ವಿತರಿಸಲಾಯಿತು. 0–ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ವಿಜಯ್ ಕುಮಾರ್, ಎಚ್.ಡಿ.ಕೋಟೆ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿ ಸಿ.ದೀಪಾ, ಜಿಲ್ಲೆಯ ವಿವಿಧ ತಾಲೂಕಿನ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿಗಳಾದ ,ಅಣ್ಣಯ್ಯ, ಗೋವಿಂದರಾಜು, ಅಕ್ಕ ಮಹಾದೇವಿ, ತಾಲೂಕು ಅರೋಗ್ಯಧಿಕಾರಿ ಡಾ. ರವಿಕುಮಾರ್, ಜಿಲ್ಲೆಯ ಮೇಲ್ವಿಚಾರಕಿಯರಾದ ರಜಿತಾ, ಗಾಯತ್ರಿ,ಇಂದುಶ್ರೀ, ಚಿನ್ನಮ್ಮ, ಸುಮಂಗಳ, ಅನುಪಮ, ಆರತಿ, ಬೀಚನಹಳ್ಳಿ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು , ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ಅಧ್ಯಕ್ಷರು, ಸದಸ್ಯರು, ಮಕ್ಕಳ ಜಾಗೃತಿ ಸಂಸ್ಥೆಯ ನಿರ್ದೇಶಕರಾದ ಅಮೃತ, ವ್ಯವಸ್ಥಾಪಕರಾದ ದಿವ್ಯ, ನವೀನ್, ವೃತ್ತ ಸಂಯೋಜಕರಾದ ರಂಗಪ್ಪ ಹಾಗೂ ತಂಡದವರು, ಕಸಬಾ ಒಂದು ಮತ್ತು ಎರಡನೇ ವೃತ್ತದ ಅಂಗನವಾಡಿ ಶಿಕ್ಷಕಿಯರು ಹಾಗೂ ಸಹಾಯಕಿಯರು, ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ನಿಗಮ ಮಟ್ಟದ ಕ್ರೀಡಾ ತಂಡಗಳ ಆಯ್ಕೆ

ಮೈಸೂರು: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್) ಹಾಗೂ ಕೆಪಿಟಿಸಿಎಲ್ ಮೈಸೂರು ವತಿಯಿಂದ 2025–26ನೇ ಸಾಲಿನ ಸೆಸ್ಕ್ ನಿಗಮ ಮಟ್ಟದ ಕ್ರೀಡಾ ತಂಡಗಳ ಆಯ್ಕೆ ಪ್ರಕ್ರಿಯೆ ಗುರುವಾರ ನಡೆಯಿತು.

ನಗರದ ನಝರಬಾದ್‌ನಲ್ಲಿರುವ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ನಡೆದ ಆಯ್ಕೆ ಪ್ರಕ್ರಿಯೆಯಲ್ಲಿ ಸೆಸ್ಕ್ ವಿಭಾಗ ವ್ಯಾಪ್ತಿಗೆ ಒಳಪಡುವ ಮೈಸೂರು, ಮಂಡ್ಯ, ಹಾಸನ, ಚಾಮರಾಜನಗರ ಹಾಗೂ ಕೊಡಗು ವಿಭಾಗದಿಂದ ಒಟ್ಟು 729 ಕ್ರೀಡಾಪಟುಗಳು ಭಾಗವಹಿಸಿದ್ದು, ಇವರಲ್ಲಿ 611 ಪುರುಷರು ಹಾಗೂ 118 ಮಹಿಳಾ ಕ್ರೀಡಾಪಟುಗಳು ಭಾಗವಹಿಸಿದ್ದರು. ಕ್ರೀಡಾ ತಂಡಗಳ ಆಯ್ಕೆ ಪ್ರಕ್ರಿಯೆಯಲ್ಲಿ ಕೇರಂ, ಬ್ಯಾಸ್ಕೆಟ್ ಬಾಲ್, ಈಜು, ವಾಲಿಬಾಲ್, ಚೆಸ್, ಟೆಬಲ್ ಟೆನ್ನಿಸ್, ಷಟಲ್ ಬ್ಯಾಡ್ಮಿಂಟನ್, ಕ್ರಿಕೆಟ್, ಸ್ನೂಕರ್, ಯೋಗ, ಹಾಕಿ, ಟೆಬಲ್ ಟೆನ್ನಿಸ್, ಫುಟ್‌ಬಾಲ್, ಕಬಡ್ಡಿ, ಲಾನ್ ಟೆನ್ನಿಸ್, ಬಾಲ್ ಬ್ಯಾಡ್ಮಿಂಟನ್, ದೇಹದಾರ್ಡ್ಯ ಹಾಗೂ ಅಥ್ಲೆಟಿಕ್ಸ್ ಸ್ಪರ್ಧೆಗಳಿಗೆ ಆಟಗಾರರನ್ನು ಆಯ್ಕೆ ಮಾಡಲಾಯಿತು. ಈ ಎಲ್ಲಾ ಕ್ರೀಡೆಗಳು ಪುರುಷ ಹಾಗೂ ಮಹಿಳೆಯರಿಗೆ ಪ್ರತ್ಯೇಕ ವಿಭಾಗಗಳಲ್ಲಿ ನಡೆಯಿತು.

ಇದಕ್ಕೂ ಮುನ್ನ ನಡೆದ ಕಾರ್ಯಕ್ರಮದಲ್ಲಿ ಸೆಸ್ಕ್ ಮುಖ್ಯ ಇಂಜಿನಿಯರ್ ಹಾಗೂ ಕ್ರೀಡಾ ಸಮಿತಿ



ಅಧ್ಯಕ್ಷರಾದ ಮೃತ್ಯುಂಜಯ ಹಾಗೂ ಸೆಸ್ಕ್ ಮುಖ್ಯ ಆರ್ಥಿಕ ಅಧಿಕಾರಿ ಜಿ.ರೇಣುಕಾ ನಿಗಮ ಮಟ್ಟದ ಕ್ರೀಡಾ ತಂಡಗಳ ಆಯ್ಕೆ ಪ್ರಕ್ರಿಗೆ ವಿದ್ಯುಕ್ತವಾಗಿ ಚಾಲನೆ ನೀಡಿದರು. ನಂತರ ಕ್ರೀಡಾಪಟುಗಳನ್ನು ಉದ್ದೇಶಿಸಿ ಮಾತನಾಡಿದ ಮೃತ್ಯುಂಜಯ ಅವರು, ಪ್ರತಿಯೊಬ್ಬರಲ್ಲೂ ಕ್ರೀಡಾ ಮನೋಭಾವ ಹಾಗೂ ಕ್ರೀಡಾ ಸ್ಫೂರ್ತಿ ಇರಬೇಕಿದ್ದು, ಈ ಮನೋಭಾವ ಕೇವಲ ಕ್ರೀಡೆಯಲ್ಲಿ ಮಾತ್ರವಲ್ಲದೇ, ವೃತ್ತಿಯಲ್ಲೂ ಕ್ರೀಡಾ ಮನೋಭಾವ ಬೆಳೆಸಿಕೊಂಡು ಮುನ್ನಡೆಯಬೇಕೆಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಸೆಸ್ಕ್ ಕ್ರೀಡಾ ಸಮಿತಿ ಕೋಶಾಧ್ಯಕ್ಷ ಪರಮೇಶ್ವರ್, ನೌಕರರ ಸಂಘದ ಉಪಾಧ್ಯಕ್ಷರಾದ ಸಂದೀಪ್, ಮಹೇಶ್, ಡಿಪ್ಲೊಮಾ ಇಂಜಿನಿಯರ್ಸ್ ಸಂಘದ ಉಪಾಧ್ಯಕ್ಷ ರವಿಲಿಂಗಪ್ಪ, ಕವಿಮಂ ಪಜಾ/ಪವ ವರ್ಗಗಳ ರಾಜ್ಯ ಉಪಾಧ್ಯಕ್ಷರಾದ ಮಂಜುನಾಥ್, ನಿಗಮ ಕ್ರೀಡಾ ಕಾರ್ಯದರ್ಶಿ ಎಂ.ಎ. ಮಂಜುನಾಥ್ ಸೇರಿ ಇತರರು ಇದ್ದರು.

## ಚಂಡುಮಲ್ಲಿಗೆ ಬೆಳೆಗಾರ ರೈತರಿಂದ

# ಕಾರ್ಖಾನೆ ಮುಂದುವರೆಸುವಂತೆ ಮನವಿ ಸಲ್ಲಿಕೆ

ಗುಂಡ್ಲುಪೇಟೆ: ತಾಲ್ಲೂಕಿನ ಕಗ್ಗಳಹುಂಡಿ ಗ್ರಾಮದ ಹೊರವಲಯದಲ್ಲಿ ಇರುವ ಸಿಸಿಜಿಬಿ ಎಂಬ ಚಂಡು ಮಲ್ಲಿಗೆ ಕಾರ್ಖಾನೆ ಇದ್ದು ಇದರಿಂದ ಸ್ಥಳೀಯವಾಗಿ ರೈತರಿಗೆ ಹೆಚ್ಚು ಆದಾಯ ಬರುತಿದ್ದು, ರೈತರು ಬೆಳೆದ ಚಂಡುಮಲ್ಲಿಗೆ ಬೆಳೆಗೆ ಸಮೀಪದಲ್ಲಿ ಮಾರುಕಟ್ಟೆ ಸೃಷ್ಠಿಯಾಗಿದ್ದು ಇದನ್ನು ತಪ್ಪಿಸುವ ಹುನ್ನಾರ ನಡೆಯು ತ್ತಿದ್ದು ಹತ್ತಾರು ವರ್ಷಗಳಿಂದ ನಡೆಯುತ್ತಿರುವ ಚಂಡುಮಲ್ಲಿಗೆ ಕಾರ್ಖಾನೆ ಮುಂದುವರೆಸುವಂತೆ ಒತ್ತಾಯಿಸಿ ಚಂಡುಮಲ್ಲಿಗೆ ಬೆಳೆಗಾರರು ಮತ್ತು ರೈತ ಮುಖಂಡರು ತಾಲೂಕು ಕಚೇರಿ ಮುಂಭಾಗದಲ್ಲಿ ಉಪ ತಹಶೀಲ್ದಾರ್ ಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ದೇಶಿಪರ, ಬರಗಿ, ಚನ್ನಮಲ್ಲಿಪುರ, ಬೇರಂಬಾಡಿ, ಮದ್ದೂರು, ಸೇರಿದಂತೆ ಅನೇಕ ಗ್ರಾಮದಲ್ಲಿ ಚಂಡು ಹೂ ಬೆಳೆ ನಂಬಿಕೊಂಡು ಜನರು ಜೀವನ ಸಾಗಿಸುತ್ತಿದ್ದು ಇದನ್ನೂ ಸಹಿಸದೆ ರೈತರಿಗೆ ಮೋಸ ಮಾಡಲು ಕೆಲವರು ಚಂಡು ಮಲ್ಲಿಗೆ



ಕಾರ್ಖಾನೆ ವಿರುದ್ದ ಪ್ರತಿಭಟನೆ ನಡೆಸುತಿದ್ದು ಕಾರ್ಖಾನೆ ನಿಲ್ಲಿಸಯವಂತೆ ಹೊರಾಟ ಮಾಡಿದ್ದು ಸರಿಯಲ್ಲ ರೈತರಿಗೆ ಅನುಕೂಲವಾಗಿ ಅವರ ಜೀವನೋಪಾಯ ಮತ್ತು ಅದಾಯ ಮತ್ತು ನೂರಾರು ಸ್ಥಳೀಯರಿಗೆ ನೌಕರಿ ನೀಡಿರುವ ಕಂಪನಿ ಮುಚ್ಚಿಸಲು ನಿಜವಾದ ರೈತರಾದ ನಾವು ಕಂಪನಿಯ ಪರ ಹೋರಾಟ ಮಾಡುತಿದ್ದು ಚಂಡು ಮಲ್ಲಿಗೆ ಕಾರ್ಖಾನೆ ಉಳಿಯುವಂತೆ ಮನವಿ ಸಲ್ಲಿಸುತ್ತಿರುವ ಬಗ್ಗೆ ಮನವಿ ಸಲ್ಲಿಸುತ್ತಿರುವ ಬಗ್ಗೆ ತಿಳಿಸಿದರು.

**ಕೇರಳಕ್ಕೆ ಕರಿ ಬಿಳಿಕಲ್ಲು ಸಾಗಾಟ ರೈತ ಮುಖಂಡರ ಮೌನ:**

ಗುಂಡ್ಲುಪೇಟೆ ಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತಿದ್ದು, ನೂರಾರು ಲಾರಿಗಳು ಕೇರಳಕ್ಕೆ ಬಿಳಿ ಮತ್ತು ಕರಿ ಕಲ್ಲು ಸಾಗಿಸುತಿದ್ದು ಅಲ್ಲದೆ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಧಿಕ ಭಾರ ತುಂಬಿಕೊಂಡು ನೂರಾರು ಟಿಪ್ಪರ್ ಸಂಚಾರ ಮಾಡಿತ್ತಿದ್ದಾರೆ ಅದರ ಬಗ್ಗೆ ದ್ವನಿ ಎತ್ತುವುದಿಲ್ಲ ಬಡ ವಾಹನ ಸವಾರರ ಜೀವಕ್ಕೆ ಮುಳ್ಳಾಗಿದ್ದಾರೆ ಇದನ್ನು ತಡೆಯುವ ತಾಕತ್ತು ಇಲ್ಲ, ಆದರೆ ರೈತರಿಗೆ ಅನುಕೂಲವಾಗಿ ಇಲ್ಲಿಯೇ ಬೆಳೆದ ಬೆಳೆಗೆ ಮಾರುಕಟ್ಟೆ ಸೃಷ್ಟಿಸಿ ರೈತರಿಗೆ ಅನುಕೂಲವಾದ ಚೆಂಡುಮಲ್ಲಿಗೆ ಕಾರ್ಖಾನೆ ತಡೆಯುವ ರೈತಸಂಘಕ್ಕೆ ಧಿಕ್ಕಾರ ಅವರ ನಡೆಯನ್ನು ವಿರೋಧಿಸುತ್ತ ನಮಗೆ ಚೆಂಡುಮಲ್ಲಿಗೆ ಕಾರ್ಖಾನೆ ಬೇಕು ಎಂದು ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ಚಂಡುಮಲ್ಲಿಗೆ ಬೆಳೆಗಾರರು ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು.

# ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಸರ್ಕಾರಿ ನೌಕರರ ಪಾತ್ರ ಹೆಚ್ಚು: ಜಿಲ್ಲಾಧಿಕಾರಿ ಡಾ.ಕುಮಾರ





**ಮಂಡ್ಯ:** ಜಿಲ್ಲೆಯ ಸರ್ಕಾರಿ ನೌಕರರು ಜಿಲ್ಲೆಗೆ ಉತ್ತಮ ಹೆಸರು ತರುವಂತಹ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಅಭಿನಂದಿಸಿದರು.

ಇಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು ಜಿಲ್ಲಾ ಶಾಖೆ ವತಿಯಿಂದ ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಸರ್ಕಾರಿ ನೌಕರರ ಕುಂದು ಕೊರತೆಗಳ ಸಭೆ ಹಾಗೂ ಮಂಡ್ಯ ಜಿಲ್ಲೆಯ ಡಿ.ಡಿ.ಓ ಗಳಿಗೆ ಹಾಗೂ ಸಂಬಂಧಪಟ್ಟ ವಿಷಯ ನಿರ್ವಾಹಕರುಗಳಿಗೆ ಊಖಿಒಖ 2.0 ತಂತ್ರಾಂಶ ಮತ್ತು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಕುರಿತ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯ ಸರ್ಕಾರ ನಡೆಸಿದ ಶೈಕ್ಷಣಿಕ ಮತ್ತು ಸಾಮಾಜಿಕ ಸಮೀಕ್ಷೆಯಲ್ಲಿ ಜಿಲ್ಲೆಯ ಎಲ್ಲಾ ಶಿಕ್ಷಕರು ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದರಿಂದ ರಾಜ್ಯದಲ್ಲಿಯೇ ಅತಿ ಹೆಚ್ಚು ಸಮೀಕ್ಷೆ ಮಾಡಿದ ಜಿಲ್ಲೆ ಮಂಡ್ಯ ಎಂಬ ಹೆಗ್ಗಳಿಕೆ ಜಿಲ್ಲೆಗೆ ಬಂದಿತು ಎಂದರು.

ಸರ್ಕಾರದ ಯಾವುದೇ ಯೋಜನೆಗಳನ್ನು ಸಮರ್ಪಕವಾಗಿ ಜನರಿಗೆ ಮುಟ್ಟಿಸುವಲ್ಲಿ ಸರ್ಕಾರಿ ನೌಕರರ ಪಾತ್ರ ಹೆಚ್ಚಿದೆ. ಜಿಲ್ಲಾ ಮಟ್ಟದ ಅಧಿಕಾರಿಗಳು ಸಲಹೆ ಸೂಚನೆಗಳನ್ನು ನೀಡಬಹುದು ಆದರೆ ತಳಮಟ್ಟದ ಅಧಿಕಾರಿಗಳು ಸರಿಯಾಗಿ ಕಾರ್ಯ ನಿರ್ವಹಿಸಿದಾಗ ಮಾತ್ರ ಸರ್ಕಾರದ ವಿವಿಧ ಯೋಜನೆಗಳು ಯಶಸ್ಸು ಕಾಣಲು ಸಾಧ್ಯ ಎಂದು ಹೇಳಿದರು.

ಜಿಲ್ಲೆಯಲ್ಲಿ 18 ಸಾವಿರಕ್ಕೂ ಹೆಚ್ಚು ಸರ್ಕಾರಿ ನೌಕರರು ಇದ್ದಾರೆ ಆರೋಗ್ಯ ಸಂಜೀವಿನಿ ಯೋಜನೆ ಅಡಿ ಬಾಕಿ ಇರುವ ಮೊತ್ತವನ್ನು ಶೀಘ್ರವಾಗಿ ವಿಲೇವಾರಿ ಮಾಡುವ ಕ್ರಮ ವಹಿಸಲಾಗುವುದು. ಸಮೀಕ್ಷೆ ನಡೆಸಿದ ಎಲ್ಲಾ ಶಿಕ್ಷಕರಿಗೆ ಸರ್ಕಾರದಿಂದ ನೀಡಲಾಗುವ ಗೌರವ ಧನ ರೂ. 7.63 ಕೋಟಿ ಹಣ ಜಿಲ್ಲಾ ಖಜಾನೆಗೆ ಬಂದಿದೆ. ಸಮೀಕ್ಷೆ ನಡೆಸಿದ ಎಲ್ಲಾ ಶಿಕ್ಷಕರಿಗೂ ತಾಲೂಕು ವರು ಹಣವನ್ನು ತಹಶೀಲ್ದಾರ್ ನೇತೃತ್ವದಲ್ಲಿ ನೀಡಲು ಸಮಯ ಹೆಚ್ಚಾಗುವುದರಿಂದ ಸ್ವತಂ ನಾನೇ 2500 ಕ್ಕೂ ಹೆಚ್ಚು ಸಹಿಗಳನ್ನು ಮಾಡಿ ಈವರೆಗೆ 7 ಕೋಟಿ ಗೌರವದನವನ್ನು ಜಿಲ್ಲೆಯಲ್ಲಿ ಸಮೀಕ್ಷೆ ನಡೆಸಿದ ಶಿಕ್ಷಕರ ಖಾತೆಗೆ ವರ್ಗಾಯಿಸಲಾಗಿದೆ ಎಂದರು.

ತಾಂತ್ರಿಕ ದೋಷ ಉಂಟಾದ ಕಾರಣ ಉಳಿದ ರೂ.63 ಲಕ್ಷವನ್ನು ಪತಿಸಲು ಸಾಧ್ಯವಾಗಿಲ್ಲ ಒಂದು ವಾರದೊಳಗೆ ಸದರಿ ಮೊತ್ತವನ್ನು ಅರ್ಹರಿಗೆ ತಲುಪಿಸುವ ಕ್ರಮ ಕೈಗೊಳ್ಳಲಾಗುವುದು. ಜಿಲ್ಲೆಯ ಸರ್ಕಾರಿ ನೌಕರರು ಒಗ್ಗಟ್ಟಿನಿಂದ ಕಾರ್ಯ ನಿರ್ವಹಿಸುತ್ತಿದ್ದಾರೆ. ಕೆಲಸವನ್ನು ಪ್ರೀತಿಸದ ಹೊರತು ಕೆಲಸ ನಮ್ಮನ್ನು ಪ್ರೀತಿಸುವುದಿಲ್ಲ ಎಂದು ತಿಳಿಸಿದರು.

ಸರ್ಕಾರಿ ನೌಕರರು ಜವಾಬ್ದಾರಿಯನ್ನು ಅರಿತು ತಮ್ಮ ಕಾರ್ಯದಕ್ಷತೆಯನ್ನು ಹೆಚ್ಚಿಸಿ ಕಾರ್ಯನಿರ್ವಹಿಸಿ. ಕೆಲಸದಲ್ಲಿ ಬದ್ಧತೆ ಶಿಸ್ತು ಮತ್ತು ಆಸಕ್ತಿ ಅತಿ ಮುಖ್ಯ. ಮನೆಯಷ್ಟೇ ಕೆಲಸದ ಸ್ಥಳವು ಸಹ ಪವಿತ್ರ. ಸರ್ಕಾರಿ ಕೆಲಸ ಮಾಡಲು ದೇವರು ನಮಗೆಲ್ಲರಿಗೂ ಅವಕಾಶ ನೀಡಿದ್ದಾನೆ. ಮನಸ್ಸಾಕ್ಷಿ ಹಾಗೂ ಆತ್ಮ ಸಾಕ್ಷಿಯಿಂದ ಕರ್ತವ್ಯ ನಿರ್ವಹಿಸೋಣ. ಎಂದು ಕರೆ ನೀಡಿದರು.

ಪ್ರಸ್ತುತ ಜಿಲ್ಲೆಯಲ್ಲಿ ಆರೋಗ್ಯ ಸಂಜೀವಿನಿ ಯೋಜನೆಯಡಿ ಮೂರು ಆಸ್ಪತ್ರೆಗಳು ಮಾತ್ರ ಕಾರ್ಯ ನಿರ್ವಹಿಸುತ್ತಿವೆ. ಈಗಾಗಲೇ ಜಿಲ್ಲೆಯಲ್ಲಿ 12 ಆಸ್ಪತ್ರೆಗಳನ್ನು ಆರೋಗ್ಯ ಸಂಜೀವಿನಿ ಯೋಜನೆಯಡಿ ತರಲು ಕ್ರಮ ವಹಿಸಲಾಗಿದೆ. ಸರ್ಕಾರಿ ನೌಕರರಿಗೆ ಸಂಬಳವನ್ನು ಸೂಕ್ತ ಕಾಲಮಿತಿಯೊಳಗೆ ನೀಡಲು ಡಿ ಡಿ ಓ ಗಳ ಮೇಲೆ ಜವಾಬ್ದಾರಿ ಹೆಚ್ಚಿದೆ. ಜಿಲ್ಲೆಯ ಎಲ್ಲಾ ಡಿಡಿಓಗಳು ತಮ್ಮ ಕರ್ತವ್ಯವನ್ನು ಅರಿತು ವ್ಯವಸ್ಥಿತವಾಗಿ ಹಣಕಾಸಿನ ಜವಾಬ್ದಾರಿಯನ್ನು ನಿಭಾಯಿಸಿ. ಎಚ್ ಆರ್ ಎಂ ಎಸ್ ತತ್ರಾಂಶ 2.0 ನಲ್ಲಿ ಇರುವ ನೂತನ ವಿಚಾರಗಳನ್ನು ತಿಳಿಯಿರಿ ಎಂದು ತಿಳಿಸಿದರು.

ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಆರ್. ನಂದಿನಿ ಅವರು ಮಾತನಾಡಿ ಇಲಾಖೆಯ ಮುಖ್ಯಸ್ಥರು ಜವಾಬ್ದಾರಿಯನ್ನು ನೌಕರರಿಗೆ ಧನಾತ್ಮಕ ರೀತಿಯಲ್ಲಿ ಸ್ಪಂದಿಸಿ. ಮಂಡ್ಯ ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರಿಗೆ ಅರಿವು ಮತ್ತು ಜ್ಞಾನ ಚೆನ್ನಾಗಿದೆ. ಜಿಲ್ಲೆಯ ಎಲ್ಲಾ ಅಧಿಕಾರಿಗಳು ಕಾರ್ಯ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.

ಜಿಲ್ಲೆಯಾದ್ಯಂತ ಮೂರು ತಿಂಗಳಿಗೊಮ್ಮೆ ತಾಲೂಕು ಮಟ್ಟದಲ್ಲಿ ಸರ್ಕಾರಿ ನೌಕರರ ಕುಂದು ಕೊರತೆ ಸಭೆ ನಡೆಸಲಾಗುತ್ತಿದೆ. ತಾಲೂಕು ಮಟ್ಟದಲ್ಲಿ ಪರಿಹರಿಸಬಹುದಾದ ಸಮಸ್ಯೆಗಳನ್ನು ಬಗೆಹರಿಸಲಾಗುತ್ತಿದೆ. ಇಲ್ಲಿ ಎಲ್ಲರೂ ಮುಖ್ಯರು, ಇಲಾಖೆಯ ಮುಖ್ಯಸ್ಥರು ಎಲ್ಲ ನೌಕರರನ್ನು ಉತ್ತಮವಾಗಿ ನಡೆಸಿಕೊಂಡು ಅವರಿಗೆ ಸ್ವಾತಂತ್ರ್ಯ, ಗೌರವ ಮನ್ನಣೆಯನ್ನು ನೀಡಿ ಅವರ ಕಾರ್ಯಗಳನ್ನು ಗುರುತಿಸಿದರೆ ಅದರಿಂದ ನೌಕರರು ಉತ್ತೇಜನಗೊಳ್ಳುತ್ತಾರೆ ಎಂದು ಕಿವಿಮಾತು ಹೇಳಿದರು.

ಈಗಾಗಲೇ ನಮ್ಮಲ್ಲಿ ವಾಟರ್ ಮ್ಯಾನ್, ಬಿಲ್ ಕಲೆಕ್ಟರ್ಗಳಿಗೆ ಇ ಎಫ್ ಐ, ಪಿಎಫ್ ಸೌಲಭ್ಯವನ್ನು ಕೊಡಿಸುವ ಕೆಲಸ ಮಾಡಲಾಗಿದೆ. ಎಲ್ಲ ಇಲಾಖೆಗಳಲ್ಲೂ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರಿಗೂ ಸದರಿ ಸೌಲಭ್ಯವನ್ನು ಕಲ್ಪಿಸಿ. ಇಲಾಖಾ ವಿಚಾರಣಾ ಪ್ರಕರಣಗಳನ್ನು ಸಾಧ್ಯವಾದಷ್ಟು ಬೇಗ ವಿಲೇವಾರಿ ಮಾಡಲಾಗುತ್ತದೆ ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾದಾದಲ್ಲಿ ಅವರ ಮಾತನಾಡಿ ಸರ್ಕಾರಿಗೆ ನೌಕರರಿಗೆ ಸದರಿ ಕಾರ್ಯಕ್ರಮ ಅತ್ಯಂತ ಉಪಯುಕ್ತವಾಗಿದೆ. ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರು ಸದರಿ ಕಾರ್ಯಕ್ರಮದ ಸ್ವರೂಪ ಯೋಗವನ್ನು ಪಡೆದುಕೊಳ್ಳಿ ಎಂದು ಹೇಳಿದರು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಕೆ ನಾಗೇಶ್ ಅವರು ಮಾತನಾಡಿ ಎಚ್ ಆರ್ ಎಂ ಎಸ್ ಮತ್ತು ಇ2 ಕುರಿತಾಗಿ ಇರುವ ದೋಷಗಳನ್ನು ಪರಿಹಾರ ಮಾಡಿಕೊಡಿ. ಜಿಲ್ಲೆಯ ಎಲ್ಲಾ ಸರ್ಕಾರಿ ನೌಕರರಿಗೆ ತಿಂಗಳ ಮೊದಲ ದಿನವೇ ಸಂಬಳ ನೀಡಿ. ಆರೋಗ್ಯ ಸಂಜೀವಿನಿ ಅಡಿ ಜಿಲ್ಲೆಯಲ್ಲಿ ಬಾಕಿ ಇರುವ ಮೊತ್ತವನ್ನು ಶೀಘ್ರವಾಗಿ ಪಾವತಿ ಮಾಡುವಂತೆ ಇತರೆ ಮನವಿಗಳನ್ನು ಸಲ್ಲಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದ ಮೂರ್ತಿ, ಸಂಪನ್ಮೂಲ ವ್ಯಕ್ತಿಗಳಾದ ಶ್ರೀಪಾದ, ಸರ್ಕಾರಿ ನೌಕರರ ಗೌರವಾಧ್ಯಕ್ಷ ಶ್ರೀನಿವಾಸ್, ಸರ್ಕಾರಿ ನೌಕರರ ಹಿರಿಯ ಉಪಾಧ್ಯಕ್ಷ ಚಂದ್ರಶೇಖರ್, ಪಶು ಪಾಲನೆ ಇಲಾಖೆ ಉಪ ನಿರ್ದೇಶಕ ಶಿವಲಿಂಗಯ್ಯ ಸೇರಿದಂತೆ ಇನ್ನಿತರ ಗಣ್ಯರುಗಳು ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಡಿ.20–ಡಿ.21ರಂದು ಎರಡು ದಿನಗಳ ಕಾಲ ಉಚಿತ ಆರೋಗ್ಯ ತಪಾಸಣಾ ಶಿಬಿರ



**ಕೆ.ಆರ್.ನಗರ:** ಸಾಲಿಗ್ರಾಮ ಪಟ್ಟಣದ ಚಂದನ ಪಾಲಿ ಕ್ಲಿನಿಕ್ ಮತ್ತು ಮೆಡಿಕಲ್ಸ್ ವತಿಯಿಂದ ಮೈಸೂರಿನ ಜೆ ಎಸ್ ಎಸ್ ಆಸ್ಪತ್ರೆಯ ನುರಿತ ತಜ್ಞವೈದ್ಯರುಗಳಿಂದ ಡಿ.20 ಮತ್ತು ಡಿ.21ರಂದು ಎರಡು ದಿನಗಳ ಕಾಲ ಸಾಲಿಗ್ರಾಮದ ಮಹಾವೀರ ರಸ್ತೆಯಲ್ಲಿರುವ ಚಂದನ ಪಾಲಿ ಕ್ಲಿನಿಕ್ ನಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ.

ಡಿ. 20ರ ಶನಿವಾರ ಮಧ್ಯಾಹ್ನ 12.30 ರಿಂದ ಸಂಜೆ 4 ಗಂಟೆಯ ವರೆಗೆ ಸ್ತ್ರೀ ರೋಗ ಮತ್ತು ಪ್ರಸೂತಿ ತಜ್ಞ ವೈದ್ಯ ಡಾ.ಆರ್.ಪಿ.ಶೃಂಗ, ಜನರಲ್ ಫಿಜಿಷಿಯನ್ ತಜ್ಞ ವೈದ್ಯ ಡಾ.ಶರಣಬಸಪ್ಪ, ಡಾ.ಜೆ.ಶ್ರೀ ಹರ್ಷ ಅವರುಗಳು ತಪಾಸಣೆ ಮಾಡಲಿದ್ದಾರೆ.

ಡಿ.21ರ ಭಾನುವಾರ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಕೀಲು ಮತ್ತು ಮೂಳೆ ತಜ್ಞ ವೈದ್ಯ ಡಾ.ತೇಜಸ್ ಅವರಿಂದ ತಪಾಸಣೆ ಮಾಡಲಾಗುವುದು.

ಶಿಬಿರದಲ್ಲಿ ವೈದ್ಯರಿಂದ ತಪಾಸಣೆ ಮಾಡಲಾಗುವುದು, ರಕ್ತದೊತ್ತಡ, ಸಕ್ಕರೆ ಕಾಯಿಲೆ, ನಾಡಿ ಮಿಡಿತ, ಹಿಮೋಗ್ಲೋಬಿನ್,

ಇಸಿಜಿ ಮಾಡಲಾಗುತ್ತದೆ. ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡಿಸಿಕೊಳ್ಳಬೇಕೆಂದು ಚಂದನ ಪಾಲಿ ಕ್ಲಿನಿಕ್ ನ ಗೋಪಾಲ್ ಮನವಿ ಮಾಡಿದ್ದಾರೆ.

# ಡಿ21 ರಿಂದ 24 ರವರೆಗೆ ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮ




**ಮಂಡ್ಯ:** 2025–26ನೇ ಸಾಲಿನ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಡಿಸೆಂಬರ್ 21 ರಿಂದ 24 ರವರೆಗೆ (ಗ್ರಾಮೀಣ ಪ್ರದೇಶದಲ್ಲಿ 3 ದಿನಗಳು & ನಗರ ಪ್ರದೇಶದಲ್ಲಿ 4 ದಿನಗಳು) ಹಮ್ಮಿಕೊಳ್ಳಲಾಗಿದೆ.

2025ನೇ ಸಾಲಿನ ಪಲ್ಸ್ ಪೋಲಿಯೋ ಕಾರ್ಯಕ್ರಮದ ಸೂಕ್ಷ್ಮ ಕ್ರಿಯಾ ಯೋಜನೆಯ ಅನುಸಾರ ಪಲ್ಸ್ ಪೋಲಿಯೋ ಕಾರ್ಯಕ್ರಮದಲ್ಲಿ 0–5 ವರ್ಷದೊಳಪಟ್ಟ ಒಟ್ಟು 1,16,724 ಮಕ್ಕಳಿಗೆ ಲಸಿಕೆ ನೀಡಬೇಕಾಗಿದ್ದು, ಶೇ. 100 ರಷ್ಟು ಸಾಧನೆ ಮಾಡುವ ಉದ್ದೇಶದಿಂದ ಜಿಲ್ಲೆಯಲ್ಲಿ ಒಟ್ಟು 723 ಪೋಲಿಯೋ ಬೂತ್‌ಗಳು, 1446 ತಂಡಗಳು, 2892 ಲಸಿಕಾ ಸಿಬ್ಬಂದಿಗಳು, 120 ವಾಹನಗಳನ್ನು ಹಾಗೂ 146 ಮೇಲ್ವಿಚಾರಕರುಗಳನ್ನು ನಿಯೋಜಿಸಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ. ಪಲ್ಸ್ ಪೋಲಿಯೋ ಕಾರ್ಯಕ್ರಮದ ಉದ್ಘಾಟನೆಯನ್ನು ಡಿಸೆಂಬರ್ 21 ರ ಬೆಳಿಗ್ಗೆ 8.00 ಕ್ಕೆ ?ಮಂಡ್ಯ ನಗರದ ಕಲ್ಲಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ? ಜಿಲ್ಲಾ ಆಡಳಿತ ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜ್ಞಾನದ ಅರಿವನ್ನು ಪಡೆಯುವ ಮೂಲಕ ಸಮಾಜದ ಮುಖ್ಯ ವಾಹಿನಿಗೆ ಬರಬೇಕು: ಮಮತಾರಾವ್



**ಕೆ.ಆರ್.ನಗರ:** ಪ್ರತಿಯೊಬ್ಬರೂ ಜ್ಞಾನದ ಅರಿವನ್ನು ಪಡೆಯುವ ಮೂಲಕ ಸಮಾಜದ ಮುಖ್ಯ ವಾಹಿನಿಗೆ ಬರಬೇಕೆಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕಿ ಮಮತಾರಾವ್ ಹೇಳಿದರು.

ಅವರು ಸಾಲಿಗ್ರಾಮ ಪಟ್ಟಣದ ಬಾಹುಬಲಿ ಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿಯಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ಮಹಿಳಾ ವಿಚಾರಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜ್ಞಾನ ವಿಕಾಸ ಕೇಂದ್ರಗಳಲ್ಲಿ ಶಿಕ್ಷಣ, ಆರೋಗ್ಯ, ಸ್ವಾವಲಂಬನೆ, ಉದ್ಯೋಗ, ಕಾನೂನು, ಸರ್ಕಾರದ ವಿವಿಧ ಸೌಲಭ್ಯಗಳು ಸೇರಿದಂತೆ ಹಲವು ಮಾಹಿತಿಗಳನ್ನು ನೀಡುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

ನಮ್ಮ ಬದುಕಿನಲ್ಲಿ ಎಂತಹ ಕಷ್ಟಗಳೇ ಬಂದರೂ ಅವುಗಳನ್ನು ಧೈರ್ಯವಾಗಿ ಎದುರಿಸಲು ನಮಗೆ ಬೇಕಾಗಿರುವುದು ಅದರ ಬಗ್ಗೆ ಅರಿವು. ಅಂತಹ ಜ್ಞಾನವನ್ನು ಪಡೆದು ಸಮಾಜದಲ್ಲಿ ಧೈರ್ಯದಿಂದ ತಮ್ಮ ಬದುಕನ್ನು ನಡೆಸಬೇಕು. ನಮ್ಮಲ್ಲಿರುವ ಕೀಳು ಭಾವನೆಗಳು, ದ್ವೇಷ, ಅಸೂಯೇ, ಮೂಡನಂಬಿಕೆಗಳನ್ನು ಬಿಟ್ಟು ಪರಸ್ಪರ ಪ್ರೀತಿ, ವಿಶ್ವಾಸ, ಸಹೋದರತೆಯ ಸಹ ಬಾಳ್ವೆಯೊಂದಿಗೆ ಜೀವನ ನಡೆಸಿದಾಗ ಪ್ರತಿಯೊಬ್ಬರಿಗೂ ನೆಮ್ಮದಿ ದೊರಕುತ್ತದೆ ಎಂದರು.

ಪ್ರತಿಯೊಬ್ಬರೂ ಕೂಡ ತಮ್ಮ ಮಕ್ಕಳಿಗೆ ಶಿಕ್ಷಣವನ್ನು ಕೊಡಿಸುವ ಕೆಲಸವನ್ನು ಮಾಡಬೇಕು ತಾವುಗಳು ವಿವಿಧ ವಿಷಯಗಳ ಅರಿವಿನ ಶಿಕ್ಷಣವನ್ನು ಪಡೆಯಬೇಕು ಆ ಮೂಲಕ ಜಾಗೃತರಾಗಬೇಕೆಂದರು.

ಮಹಿಳೆಯರು ಪ್ರಮುಖವಾಗಿ ಸಾಮಾಜಿಕ ಜಾಲತಾಣಗಳ ಬಗ್ಗೆ ಅತ್ಯಂತ ಎಚ್ಚರಿಕೆಯನ್ನು ವಹಿಸಬೇಕು ಅವುಗಳನ್ನು ಬಳಸುವ ಮೊದಲು ಅವುಗಳ ಬಗ್ಗೆ ಅರಿವು ಪಡೆಯುವುದರೊಂದಿಗೆ ಮುಂದೆ ಅದರಿಂದಾಗುವ ಅನಾಹುತಗಳನ್ನು ತಡೆಗಟ್ಟಬೇಕು ಎಂದು ಕರೆ ನೀಡಿದರು.

ಭೇರ್ಯ ಸರ್ಕಾರಿ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ.ಸೌಜನ್ಯಮೋಹನ್ ಅವರು ಮಾತನಾಡಿ ಬಾಲ್ಯ ವಿವಾಹವನ್ನು ಯಾರು ಕೂಡ ಮಾಡಬಾರದು ಹಾಗೂ ಅದಕ್ಕೆ ಯಾರು ಕೂಡ ಪ್ರೋತ್ಸಾಹಿಸಬಾರದು ಎಂದರು. ಮನೆಯಲ್ಲಿ ಹೆಣ್ಣು ಗಂಡು ಎಂಬ ತಾರತಮ್ಯ ನೀತಿಯನ್ನು ಅನುಸರಿಸದೇ ಇಬ್ಬರನ್ನು ಸಮಾನವಾಗಿ ಕಾಣಬೇಕು. ಇತ್ತೀಚಿನ ದಿನಗಳಲ್ಲಿ ಚಿಕ್ಕ ಮಕ್ಕಳ ಮೇಲೆ ಹೆಚ್ಚಾಗಿ ಓದಬೇಕು ಓದಬೇಕು ಎಂಬ ಒತ್ತಡ ಜಾಸ್ತಿ ಆಗುತ್ತಿದೆ. ಇದರಿಂದ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಕೆಲಸವಾಗುತ್ತಿದೆ ಎಂದರು. ತಾಯಂದಿರು ತಮ್ಮ ಮಕ್ಕಳ ನಡವಳಿಕೆಗಳ ಬಗ್ಗೆ ಹೆಚ್ಚಿನ ಗಮನವನ್ನು ಹರಿಸುವುದರಿಂದ ಅವರುಗಳು ಸನ್ಮಾರ್ಗದಲ್ಲಿ ನಡೆಯುವಂತೆ ನೋಡಿಕೊಳ್ಳಬೇಕು ಎಂದರು. ಪ್ರಮುಖವಾಗಿ ಮಹಿಳೆಯರು ಅನುಸರಿಸಬೇಕಾದ ವಿವಿಧ ಆರೋಗ್ಯ ವಿಷಯಗಳ ಬಗ್ಗೆ ಮಾಹಿತಿಯನ್ನು ನೀಡಿದರು.

ಅಖಿಲ ಕರ್ನಾಟಕ ಜನಜಾಗೃತಿ ಸಮಿತಿಯ ಸದಸ್ಯ ಸಿ.ಕೆ.ಬಾಲಮನೋಹರ ಮಾತನಾಡಿ ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ ಎಂಬ ಮಾತಿನಂತೆ ಮಹಿಳೆಯು ಇಡೀ ಕುಟುಂಬಕ್ಕೆ ಮಾರ್ಗದರ್ಶಕಗಳಾಗಿ ಕಾರ್ಯನಿರ್ವಹಿಸುವ ಮೂಲಕ ನಾಗರೀಕ ಸಮಾಜ ನಿರ್ಮಾಣಕ್ಕೆ ಶ್ರಮಿಸಬೇಕು ಎಂದು ಕರೆ ನೀಡಿದರು. ಶಿಕ್ಷಣ ಮತ್ತು ಆರೋಗ್ಯದ ಕಡೆಗೆ ಹೆಚ್ಚಿನ ಗಮನವನ್ನು ಹರಿಸಬೇಕು. ಮಹಿಳೆಯರು ತಮ್ಮ ಮನೆ, ಕುಟುಂಬದಲ್ಲಿರುವ ಹಿರಿಯರು ಮತ್ತು ಕಿರಿಯರುಗಳನ್ನು ಪ್ರೀತಿಸುವ ಮತ್ತು ಗೌರವಿಸುವ ಗುಣವನ್ನು ಮೈಗೂಡಿಸಿಕೊಂಡು ಕುಟುಂಬವನ್ನು ಉತ್ತಮವಾಗಿ ನಿರ್ವಹಣೆ ಮಾಡುವ ಕೆಲಸವನ್ನು ಮಾಡಬೇಕು ಆ ಮೂಲಕ ಹೆಣ್ಣು ಸಂಸಾರದ ಕಣ್ಣು ಎಂಬುದನ್ನು ನಿರೂಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಹಿಳೆಯರಿಗೆ ಬಹುಮಾನಗಳನ್ನು ವಿತರಿಸಿ ಹಾಗೂ ಸಾಧಕ ಮಹಿಳೆಯನ್ನು ಸನ್ಮಾನಿಸಲಾಯಿತು. ನಂತರ ಮಹಿಳೆಯರಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡಲಾಯಿತು.

ಸಮಾರಂಭದಲ್ಲಿ ಕಸಾಪ ತಾಲ್ಲೂಕು ಅಧ್ಯಕ್ಷ ಎಸ್.ಕೆ.ಮಧುಚಂದ್ರ, ಜೈ ಭಾರತಿ ಜೈನ ಮಹಿಳಾ ಸಮಾಜದ ಖಜಾಂಚಿ ಉಷಾ ಸುರೇಶ್, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ಉಮೇಶ್ ಪೂಜಾರಿ, ಜ್ಞಾನವಿಕಾಸ ಸಮನ್ವಯಾಧಿಕಾರಿ ಸುಜಾತ, ಮೇಲ್ವಿಚಾರಕಿ ಹೇಮಲತಾ, ಸೇವಾ ಪ್ರತಿನಿಧಿಗಳಾದ ಉಮೇಶ್, ಬಸವರಾಜು, ದೀಪ, ಸುಜಾತ, ಸೌಮ್ಯ, ಶಿಲ್ಪ, ಎಸ್.ಆರ್.ಮಂಜುಳಾರಮೇಶ್, ಶೃತಿ, ಗ್ರಂಥಪಾಲಕಿ ದಿವ್ಯಕುಮಾರಿ, ಮಹಿಳಾ ಸಂಘದವರು ಪಾಲ್ಗೊಂಡಿದ್ದರು.

# ದಯವಿಟ್ಟು ಕ್ರಿಕೆಟ್ ಪ್ರಿಯರಿಗೆ ಮೋಸ ಮಾಡಬೇಡಿ: ಶಶಿ ತರೂರ್



**ನವದೆಹಲಿ:** ಈ ಅವಧಿಯಲ್ಲಿ ಭಾರಿ ಮಂಜು ಕವಿಯುವುದರಿಂದ ಡಿಸೆಂಬರ್ ಮಧ್ಯದಿಂದ ಜನವರಿ ಮಧ್ಯದವರೆಗಿನ ಕ್ರಿಕೆಟ್ ಪಂದ್ಯಗಳನ್ನು ಉತ್ತರ ಭಾರತದ ಬದಲು ದಕ್ಷಿಣ ಭಾರತದಲ್ಲಿ ನಿಗದಿಪಡಿಸಬೇಕು. ಇದರಿಂದ ಕ್ರಿಕೆಟ್ ಪ್ರೇಮಿಗಳು ಯಾವುದೇ ಸಮಸ್ಯೆಗಳಿಲ್ಲದೆ ಪಂದ್ಯ ವೀಕ್ಷಿಸಬಹುದು ಎಂದು ಕಾಂಗ್ರೆಸ್ ಸಂಸದ ಶಶಿ ತರೂರ್ ಗುರುವಾರ ಸಲಹೆ ನೀಡಿದ್ದಾರೆ. ಲಖನೌನಲ್ಲಿ ನಡೆಯಬೇಕಿದ್ದ ಭಾರತ ಮತ್ತು ದಕ್ಷಿಣ ಆಫ್ರಿಕಾ ನಡುವಿನ ನಾಲ್ಕನೇ ಟಿ20 ಪಂದ್ಯವು ರದ್ದಾದ ಒಂದು ದಿನದ ನಂತರ ಅವರ ಹೇಳಿಕೆಗಳು ಬಂದಿವೆ.

ಏಕಾನಾ ಕ್ರೀಡಾಂಗಣವನ್ನು ದಟ್ಟವಾದ ಮಂಜು ಆವರಿಸಿದ್ದರಿಂದ ಪಂದ್ಯವನ್ನು ರದ್ದುಗೊಳಿಸಬೇಕಾಯಿತು. ಇದೀಗ ಉತ್ತರ ಭಾರತದಲ್ಲಿ ಚಳಿಗಾಲದ ಉತ್ತುಂಗದಲ್ಲಿ ಪಂದ್ಯಗಳನ್ನು ನಿಗದಿಪಡಿಸುವ ಬಿಸಿಸಿಐ ನಿರ್ಧಾರದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. 'ಡಿಸೆಂಬರ್ ಮಧ್ಯದಿಂದ ಜನವರಿ ಮಧ್ಯದವರೆಗೆ ಉತ್ತರ ಭಾರತದ ಪ್ರತಿಯೊಂದು ಸ್ಥಳವೂ ಮಂಜಿನಿಂದ ಆವೃತವಾಗಿರುತ್ತದೆ ಮತ್ತು ವರ್ಷದ ಯಾವ ಸಮಯದಲ್ಲಿ ಮಂಜು ಕವಿದಿರುತ್ತದೆ ಎಂದು ನಿಮಗೆ ಚೆನ್ನಾಗಿ ತಿಳಿದಿರುತ್ತದೆ. ಹೀಗಿರುವಾಗ, ಕ್ರಿಕೆಟಿಗರು ಚೆಂಡನ್ನು ನೋಡುವುದು ಅಸಾಧ್ಯವಾಗುತ್ತದೆ ಎಂಬುದು ನನ್ನ ಕಳವಳವಾಗಿದೆ' ಎಂದು ತರೂರ್ ಸಂಸತ್ ಭವನದ ಸಂಕೀರ್ಣದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

# ಡಿ 29 ರಂದು ವಿಶ್ವ ಮಾನವ-ಜಕಣಾಚಾರಿ ಜಯಂತಿ: ಎಡಿಸಿ ಶಿವಾನಂದ ಮೂರ್ತಿ



**ಮಂಡ್ಯ:** ಡಿಸೆಂಬರ್ 29 ರಂದು ವಿಶ್ವ ಮಾನವ ದಿನಾಚರಣೆ ಹಾಗೂ ಜನವರಿ 1 ರಂದು ನಡೆಯಲಿರುವ ಅಮರಶಿಲ್ಪಿ ಜಕಣಾಚಾರಿ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿ ಎಂದು ಅಪರ ಜಿಲ್ಲಾಧಿಕಾರಿ ಬಿ.ಸಿ. ಶಿವಾನಂದ ಮೂರ್ತಿ ಅವರ ಹೇಳಿದರು.

ಮಹಾನ್ ವ್ಯಕ್ತಿಗಳ ಜಯಂತಿಯ ಆಚರಣೆಯ ಮೂಲ ಉದ್ದೇಶ ಅವರ ಆದರ್ಶ ಮತ್ತು ಕೊಡುಗೆಯನ್ನು ಸಾರುವ ಉದ್ದೇಶದಿಂದ ಆಚರಿಸಲಾಗುವುದು. ಎಲ್ಲರೂ ಒಗ್ಗಟ್ಟಿನಿಂದ ಜಯಂತಿಗಳನ್ನು ಆಚರಣೆ ಮಾಡಿದರೆ ಮಹಾನ್ ಚೇತನರ ಜಯಂತಿಗಳಿಗೆ ಮೆರಗು ಬರುತ್ತದೆ ಎಂದು ಹೇಳಿದರು.

ಡಿಸೆಂಬರ್ 29 ರಂದು ವಿಶ್ವಮಾನವ ದಿನಾಚರಣೆ ಯನ್ನು ಮಂಡ್ಯ ವಿಶ್ವವಿದ್ಯಾಲಯದಲ್ಲಿ ಆಚರಿಸಿ. ಕಾರ್ಯಕ್ರಮಕ್ಕೂ ಮುನ್ನ ನಗರದ ಎ.ಪಿ.ಎಂ.ಸಿ ಆವರಣದಲ್ಲಿರುವ ರಾಷ್ಟ್ರಕವಿ ಕುವೆಂಪು ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ವಿಶ್ವ ವಿದ್ಯಾಲಯ ಮಟ್ಟದಲ್ಲಿ ಕನ್ನಡ ವಿಷಯದಲ್ಲಿ ಅತಿ ಹೆಚ್ಚು ಅಂಕ ಪಡೆದ ಇಬ್ಬರೂ ವಿದ್ಯಾರ್ಥಿಗಳಿಗೂ ಸಮ್ಮಾನ ಮಾಡಿ. ಸಂಪನ್ಮೂಲ ವ್ಯಕ್ತಿಯಿಂದ ರಾಷ್ಟ್ರಕವಿ ಕುವೆಂಪು ಅವರ ಚಿಂತನೆ ಮತ್ತು ವಿಚಾರಧಾರೆಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಲು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಿ ಎಂದು ಸೂಚಿಸಿದರು. ಜನವರಿ 1 ರಂದು ನಡೆಯಲಿರುವ ಅಮರಶಿಲ್ಪಿ ಜಕಣಾಚಾರಿ ಜಯಂತಿಯನ್ನು ನಗರದ ಕಲಾಮಂದಿರದಲ್ಲಿ ಹಮ್ಮಿಕೊಳ್ಳಲಾಗುವುದು. ಜಿಲ್ಲಾಧಿಕಾರಿಗಳ ಕಚೇರಿಯಿಂದ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದ ವರೆಗೂ ಮೆರವಣಿಗೆ ಹೊರಡಲಿದೆ .ಮಾರ್ಗಸೂಚಿಯಂತೆ ವೇದಿಕೆಯಲ್ಲಿ ಆಹ್ವಾನಿತ ಗಣ್ಯರು ಮಾತ್ರ ಇರಬೇಕು. ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳು ಹಾಗೂ ಶಾಲಾ ಕಾಲೇಜುಗಳಲ್ಲಿ ಜಯಂತಿಯನ್ನು ಆಚರಿಸುವಂತೆ ಸೂಚನೆ ನೀಡಿ ಎಂದು ಹೇಳಿದರು. ವಿಶ್ವಕರ್ಮ ಸಮುದಾಯಕ್ಕೆ ಸರ್ಕಾರದಿಂದ ನೀಡಲಾಗುವ ಯೋಜನೆಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಸದರಿ ಕಾರ್ಯಕ್ರಮದಲ್ಲಿ ಆಯೋಜಿಸಿ ಎಂದು ಸೂಚಿಸಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಬಿ.ವಿ ನಂದೀಶ್ ಹಾಗೂ ಸಮುದಾಯ ಮುಖಂಡರುಗಳು ಉಪಸ್ಥಿತರಿದ್ದರು.

# ಎಲ್ಲ ಸರ್ಕಾರಗಳು ರೈತ ವಿರೋಧಿಗಳು: ಬಡಗಲಪುರ ನಾಗೇಂದ್ರ




**ಕೆ. ಆರ್ .ನಗರ:** ಕೇಂದ್ರ ಬಿಜೆಪಿ ಅಥವಾ ರಾಜ್ಯ ಕಾಂಗ್ರೆಸ್ ಹಾಗೂ ಜೆಡಿಎಸ್ ಬಿಜೆಪಿ ಯಾವ ಸರ್ಕಾರಗಳು ರೈತರ ನೆರವಿಗೆ ನಿಂತಂತಹ ಸರ್ಕಾರಗಳಲ್ಲ ರೈತ ವಿರೋಧಿ ಎನ್ನೇ ಅನುಸರಿಸಿದ ಸರ್ಕಾರಗಳು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ ಆರೋಪಿಸಿದರು ತಾಲೂಕಿನ ಬಳ್ಳೂರು ಗ್ರಾಮದಲ್ಲಿ ನೂತನವಾಗಿ ಸ್ಥಾಪಿಸಲಾದ ಕರ್ನಾಟಕ ರಾಜ್ಯ ರೈತ ಸಂಘದ ಘಟಕವನ್ನು ಉದ್ಘಾಟಿಸಿ ಮಾತನಾಡಿದರು.

ನಿರಂತರವಾಗಿ ರಾಜ್ಯದ ಪ್ರತಿ ಮೂಲೆಯಲ್ಲೂ ರೈತರನ್ನು ಸಂಘಟಿಸಿ ರೈತರ ಕಷ್ಟ ಸುಖಗಳಿಗೆ ಸ್ಪಂದಿಸಿ ಅವರಿಗೆ ನೆರವಾಗುವ ರೀತಿಯಲ್ಲಿ ನಿರಂತರ ಚಳುವಳಿ ಮಾಡಿಕೊಂಡು ಬರುತ್ತಿರುವ ಕರ್ನಾಟಕ ರಾಜ್ಯ ರೈತ ಸಂಘದಲ್ಲಿ ಸಾಕಷ್ಟು ಹೋರಾಟಗಾರರು ಅಮರರಾಗಿದ್ದಾರೆ. ಅವರ ಹೋರಾಟದ ಸಾಧನೆಯನ್ನು ನಾವು ಎಂದಿಗೂ ಮರೆಯಲು ಸಾಧ್ಯವಿಲ್ಲ. ಅವರ ಮಾರ್ಗದರ್ಶನದಲ್ಲಿ ಸಂಘ ಕಟ್ಟಿ ರೈತರಿಗೆ ಅನುಕೂಲ ಮಾಡಿಕೊಡುವುದು ನಮ್ಮೆಲ್ಲರ ಜವಾಬ್ದಾರಿ ಆಗಿದೆ ಎಂದರು.

ಕರ್ನಾಟಕ ರಾಜ್ಯ ರೈತ ಸಂಘ ಅದರದೇ ಆದ ದೊಡ್ಡ ಚಳುವಳಿ ಮಹತ್ವವನ್ನು ಹೊಂದಿದೆ. ರಾಜ್ಯದ ಉದ್ದಗಲಕ್ಕೂ ಸಂಘಟನೆಗಳು ಪ್ರಬಲವಾಗಿ ರೈತರು ಸಂಘಟಿತರಾಗುತ್ತಿದ್ದಾರೆ ಅದರಂತೆ ಸಾಲಿಗ್ರಾಮದಲ್ಲೂ ಎಸ್ ಬಿ ಶೇಖರ್ ನೇತೃತ್ವದಲ್ಲಿ ನೂತನವಾಗಿ ತಾಲೂಕು ರೈತ ಸಂಘದ ಕಚೇರಿ ಉದ್ಘಾಟನೆ ಮಾಡಲಾಗಿದೆ. ಅದೇ ರೀತಿ ಇಂದಿನಿಂದ ಬಳ್ಳೂರು ರೈತ ಸಂಘ ಕಾರ್ಯ ಪ್ರಾರಂಭ ಮಾಡಲಿದೆ. ಯಾವುದೇ ಜಾತಿ ಭೇದ ಪಕ್ಷಗಳಿಲ್ಲದೆ ನೊಂದ ಜನರ ಕಣ್ಣೀರು ಒರೆಸುವ ಸಂಘ ಇದಾಗಬೇಕು. ಎಷ್ಟೇ ರಾಜಕಾರಣಿಗಳು ಭ್ರಷ್ಟರಾದರೂ . ಬಗ್ಗಿ ಬಡಿಯಬಹುದು. ಆದರೆ ಒಬ್ಬ ಹೋರಾಟಗಾರ ಭ್ರಷ್ಟನಾದರೆ ಮಹತಪ್ಪು ಇದರ ಬಗ್ಗೆ ಎಚ್ಚರ ಇರಲಿ ಎಂದರು .

ಯಾವುದೇ ಒಬ್ಬ ರೈತ ತನ್ನದೇ ಆದ ವ್ಯಕ್ತಿತ್ವ ಮತ್ತು ಸ್ವಾಭಿಮಾನವನ್ನು ಉಳಿಸಿಕೊಳ್ಳಬೇಕು ಎಂದರೆ ಆ ರೈತನ ಹೆಗಲಿನ ಮೇಲೆ ಹಸಿರು ಟವಲ್ ಇರಬೇಕು ಆಗ ಅದರ ಘನತೆನೇ ಬೇರೆ ಇರುತ್ತೆ. ಪೊಲೀಸ್ ಠಾಣೆ ಮತ್ತು ತಾಲೂಕು ಕಚೇರಿ ಸೇರಿದಂತೆ ವಿವಿಧ ಸರ್ಕಾರಿ ಕಚೇರಿಗಳಲ್ಲಿ. ರೈತರಿಗೆ ಮೊದಲು ಬೆಲೆ ಇರಲಿಲ್ಲ. ಆದರೆ ನಮ್ಮ ಚಳುವಳಿ ಶಕ್ತಿ. ಎಲ್ಲ ಇಲಾಖೆಗಳಲ್ಲೂ ರೈತರನ್ನು ಕೂರಿಸಿ ಗೌರವ ಕೊಡುವ ಪದ್ಧತಿಯನ್ನು ಅಧಿಕಾರಿಗಳು ಬಳಸಿಕೊಂಡಿದ್ದಾರೆ. ಪ್ರಜಾಪ್ರಭುತ್ವದ ಸಂವಿಧಾನದ ಅಡಿಯಲ್ಲಿ ಚುನಾಯಿತ ಪ್ರತಿನಿಧಿಗಳು ಮತ್ತು ಅಧಿಕಾರಿಗಳು ರೈತರ ಸೇವಕರು ಅಷ್ಟೇ. ಆದರೆ ಇತ್ತೀಚಿನ ದಿನಗಳಲ್ಲಿ ರಾಜಕಾರಣಿಗಳಿಗೆ ಅಧಿಕಾರಿಗಳಿಗೆ ರೈತರೇ ಅದ್ದೂರಿ ಸನ್ಮಾನ ಹಾರತ್ತೂರ ಹಾಕುತ್ತಿದ್ದೀರಿ ಅದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಕರ್ನಾಟಕ ರೈತ ಸಂಘ ಚಳುವಳಿ ಪ್ರತಿಫಲ 10 ಲಕ್ಷದ 27 ಸಾವಿರ ರೈತ ಕುಟುಂಬಗಳಿಗೆ ಸಾಗುವಳಿ ಕೊಡಿಸಿದ್ದೇವೆ. ಇನ್ನು 17 ಲಕ್ಷ ಅರ್ಜಿಗಳು ಪೆಂಡಿಂಗ್ ಉಳಿದಿದೆ. 75 ಲಕ್ಷ ಪಂಪ್ಸೆಟ್ಟುಗಳು ಇವೆ. ಅದರಲ್ಲಿ 50 ಲಕ್ಷ ಅಧಿಕೃತ 25 ಲಕ್ಷ ಅನಾದಿಕೃತ ವಾಗಿದ್ದು ಶೀಘ್ರದಲ್ಲೇ ಅವುಗಳು ಅಧಿಕೃತ ಆಗಲಿವೆ. ಪಂಪ್ ಸೆಟ್ ಗಳಿಗೆ ಉಚಿತ ವಿದ್ಯುತ್ ಸೇರಿದಂತೆ ರೈತರಿಗೆ ಎದುರಾಗುವ ಸಮಸ್ಯೆಗಳ ವಿರುದ್ಧ ಹೋರಾಟ ನಡೆಸಿ ಅನುಕೂಲ ಮಾಡಿ ಕೊಟ್ಟಿರುವ ಕೀರ್ತಿ ನಮ್ಮ ಸಂಘಕ್ಕೆ ಸಲ್ಲುತ್ತದೆ. ಅದೇ ರೀತಿ ಗ್ರಾಮ ಮತ್ತು ತಾಲೂಕು ಮಟ್ಟದಲ್ಲಿ ರೈತರ ಸಮಸ್ಯೆಗಳಿಗೆ ಸ್ಪಂದಿಸುವಂತಹ ಸಂಘ ನಿಮ್ಮದಾಗಬೇಕು ಎಂದರು.

> **ಗುಂಡೂರಾವ್ ಮುಖ್ಯಮಂತ್ರಿಯ ಕಾಲದಲ್ಲಿ ರೈತರ ಸಮಸ್ಯೆ ಬಗೆಹರಿಸುವಂತೆ ನಡೆಸುತ್ತಿದ್ದ ಚಳುವಳಿಯಲ್ಲಿ 139 ಜನ ಬಲಿಯಾದರೂ, ಯಡಿಯೂರಪ್ಪ ಮುಖ್ಯಮಂತ್ರಿ ಕಾಲದಲ್ಲಿ. ರೈತರಲ್ಲದೆ ಯಾವ ಉದ್ಯಮಿಗಳು ಬೇಕಾದರೂ ಎಷ್ಟು ಎಕ್ಕರೆ ಜಮೀನನ್ನು ಖರೀದಿಸಬಹುದು ಎಂಬ ಕಾಯ್ದೆ ಜಾರಿ ಮಾಡಿ ರೈತರಿಗೆ ಮೋಸ ಮಾಡಿದರು. ಅದಕ್ಕಾಗಿ ಎರಡು ಸರ್ಕಾರಗಳನ್ನು ಚುನಾವಣೆಯಲ್ಲಿ ರೈತರು ಸೋಲಿಸಿದರು. ಆ ಕಾಯ್ದೆ ಜಾರಿ ಆದ ಬಳಿಕ ರಾಜಸ್ಥಾನದ ಮಾರ್ವಾಡಿಗಳು ನಮ್ಮ ರೈತರ ಸಾವಿರಾರು ಎಕ್ಕರೆ ಜಮೀನನ್ನು ಖರೀದಿ ಮಾಡಿ ನಮ್ಮ ರಾಜ್ಯದ ರೈತರನ್ನೇ ಆಳುತ್ತಿದ್ದಾರೆ. ಇವುಗಳನ್ನು ಅರ್ಥ ಮಾಡಿಕೊಂಡು ನಮ್ಮ ರೈತರಿಗೆ ಅನ್ಯಾಯ ಆಗದಂತೆ ತಡೆಯುವುದು ನಮ್ಮ ಜವಾಬ್ದಾರಿ.**
>
> **ಬಡಗಲಪುರ ನಾಗೇಂದ್ರ. ಅಧ್ಯಕ್ಷ.**
> **ಕರ್ನಾಟಕ ರಾಜ್ಯ ರೈತ ಸಂಘ.**

ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನಕ್ಕೆ ರಾಜ್ಯ ಅಧ್ಯಕ್ಷರು ರೈತರಿಗೆ ಪೂಜೆ ಸಲ್ಲಿಸಿ, ನಂತರ ನಾಮಫಲಕ ಅನಾವರಣ ಗೊಳಿಸಿದರು. ನೂತನವಾಗಿ ಸಂಘಕ್ಕೆ ಸೇರ್ಪಡೆಯಾದ ರೈತರಿಗೆ ಹಸಿರು ಟವಲ್ ಹಾಕುವ ಮೂಲಕ ಸಂಘಕ್ಕೆ ಸೇರ್ಪಡೆ ಮಾಡಿಕೊಂಡರು. ರೈತರ ಯಾವುದೇ ಸಮಸ್ಯೆ ಇದ್ದರೂ ಸರ್ಕಾರದ ಮಟ್ಟದಲ್ಲಿ ಧ್ವನಿ ಎತ್ತುವುದಾಗಿ ಭರವಸೆ ನೀಡಿದರು. ಬಳ್ಳೂರು ರೈತ ಸಂಘದ ಪದಾಧಿಕಾರಿಗಳು ರಾಜ್ಯ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಸಾಲಿಗ್ರಾಮ ತಾಲೂಕು ರೈತ ಅಧ್ಯಕ್ಷ ಎಸ್ ಬಿ ಶೇಖರ್, ನಗರ ಅಧ್ಯಕ್ಷ ಕೃಷ್ಣೇಗೌಡ,ಸಂಘದ ಅಧ್ಯಕ್ಷ ಸುರೇಶ್ ಅವರನ್ನು ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರೈತ ಸಂಘ ಬಳ್ಳೂರು ಘಟಕದ ಅಧ್ಯಕ್ಷ ಸುರೇಶ್, ಗೌರವಾಧ್ಯಕ್ಷರಾದ ದಶರಥ, ರಾಮೇಗೌಡ, ಬಸವಲಿಂಗೇಗೌಡ, ಪ್ರಭಾಕರ್, ಉಪಾಧ್ಯಕ್ಷ ಪ್ರಸನ್ನ, ಕಾರ್ಯದರ್ಶಿ ವಿಜಯಕುಮಾರ್, ಖಜಾಂಚಿ ಕುಮಾರ್, ನಿರ್ದೇಶಕರಾದ ಲೋಕೇಶ್, ನಾರಾಯಣಸ್ವಾಮಿ, ರಾಜೇಂದ್ರನಾಯಕ, ಲೋಕೇಶ್ , ರಾಜಶೇಖರ್, ಅಂಗಡಿಹರೀಶ್,


ರಾಜು, ಮಹೇಶ್, ಬಸವನಾಯಕ, ರಾಜನಾಯಕ, ವಿ ಹರೀಶ್, ಎಂ ರವಿ, ಲೋಕೇಶ್ ,ಎಸ್ ಹರೀಶ್, ಮಂಜಚಾರಿ, ಅಭಿ, ಮಹದೇವ್, ಗಿರೀಶ್, ಜಯರಾಮ್, ಸಂತೋಷ್, ಲೋಕೇಶ್, ರಾಮಯ್ಯ, ನಾಗೇಂದ್ರ, ಕೃಷ್ಣ, ಕೆ ರಾಮು ಸೇರಿದಂತೆ ಗ್ರಾಮದ ಯಜಮಾನರು ಹಾಗೂ ಅಕ್ಕಪಕ್ಕದ ರೈತ ಬಂಧುಗಳು ಇದ್ದರು.

# ವಾಯುಮಾಲಿನ್ಯಕ್ಕೆ ಅಂಕುಶ: ದೆಹಲಿಯಲ್ಲಿ ಹಳೆ ವಾಹನಗಳ ನಿರ್ಬಂಧ

**ನವದೆಹಲಿ:** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಹೆಚ್ಚುತ್ತಿರುವ ವಾಯುಮಾಲಿನ್ಯದ ಹಿನ್ನೆಲೆಯಲ್ಲಿ ಹಳೆಯ ಕಾರು ಮತ್ತು ವಾಹನಗಳ ಸಂಚಾರಕ್ಕೆ ನಿರ್ಬಂಧ ಹೇರಿದ್ದು ನಿಯಮ ಪಾಲಿಸದಿದ್ದರೆ 20 ಸಾವಿರ ದಂಡ ಅಥವಾ ದೆಹಲಿ ಗಡಿಯಿಂದ ಹೊರ ಹಾಕುವುದಾಗಿ ದೆಹಲಿ ಪೊಲೀಸರು ಎಚ್ಚರಿಕೆ ನೀಡಿದ್ದಾರೆ.

ದೆಹಲಿ ವಾಯು ಮಾಲಿನ್ಯ ಮೇಲ್ವಿಚಾರಣೆಯು ಬಿಎಸ್ ಮಾನದಂಡಗಳು ಮತ್ತು ಕೇಂದ್ರ ಪರಿಸರ ಮಾಲಿನ್ಯ ಮಂಡಳಿ–ಪಿಯುಸಿಸಿ ಸಿಂಧುತ್ವ ತಕ್ಷಣ ಪರಿಶೀಲಿಸಲು ವಾಹನ ನೋಂದಣಿ ಸಂಖ್ಯೆಗಳನ್ನು ನಮೂದಿಸುವ ಪೋರ್ಟಬಲ್ ಯಂತ್ರಗಳನ್ನು ಅವಳವಡಿಸುವ ಮೂಲಕ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ದೆಹಲಿ ಸರ್ಕಾರ ಮುಂದಾಗಿದೆ.

ಬೆಳಿಗ್ಗೆ ಮಬ್ಬು ಕವಿದ ವಾತಾವರಣದಲ್ಲಿ ಡಿಎನ್‌ಡಿ ಫ್ಲೈವೇಯಲ್ಲಿ ದೆಹಲಿ–ನೋಯ್ಡಾ ಗಡಿಯಲ್ಲಿ ವಿಷಕಾರಿ ಹೊಗೆಯ ದಪ್ಪ ಪದರ ಆವರಿಸಿದೆ, ಹತ್ತಿರದ ಚಿಲ್ಲಾ ಗಡಿಯಲ್ಲಿ ಗಾಳಿಯ ಗುಣಮಟ್ಟ ಅಪಾಯಕಾರಿ ವರ್ಗಕ್ಕೆ ಇಳಿದ್ದು ಸುಮಾರು 490 ರ ವಾಯು ಸೂಚ್ಯಂಕ ದಾಖಲಿಸಿದೆ. ದೆಹಲಿ ಪೊಲೀಸರು ಮತ್ತು ಸಾರಿಗೆ ಅಧಿಕಾರಿಗಳು ವಾಹನಗಳ ಕಟ್ಟುನಿಟ್ಟಿನ ತಪಾಸಣೆ ಕೈಗೊಂಡಿದ್ದಾರೆ.



# ಬೆಂಗಳೂರು ಹಾಗೂ ಐದು ಜಿಲ್ಲೆಗಳಲ್ಲಿ ಏಕಕಾಲಕ್ಕೆ ಟ್ರೇಲರ್ ಅನಾವರಣ



ಶಿವರಾಜಕುಮಾರ್, ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಪ್ರಮುಖಪಾತ್ರದಲ್ಲಿ ನಟಿಸಿರುವ, ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ ಹಾಗೂ ಎಂ. ರಮೇಶ್ ರೆಡ್ಡಿ ಅವರು ತಮ್ಮ ಸೂರಜ್ ಪ್ರೊಡಕ್ಷನ್ ಬ್ಯಾನರ್ ನಲ್ಲಿ ನಿರ್ಮಿಸಿರುವ ಕನ್ನಡದ ಬಹುನಿರೀಕ್ಷಿತ ಮಲ್ಟಿಸ್ಟಾರರ್ 45 ಚಿತ್ರ ಆರಂಭದಿಂದಲೂ ಸಾಕಷ್ಟು ಸದ್ದು ಮಾಡುತ್ತಿದೆ. ಡಿಸೆಂಬರ್ 25 ರಂದು ತೆರೆಗೆ ಬರುತ್ತಿದೆ. ಅದಕ್ಕೂ ಮುನ್ನ "45" ಚಿತ್ರದ ಟ್ರೇಲರ್ ಬಿಡುಗಡೆಯಾಗಿದೆ. ಟ್ರೇಲರ್ ಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಬೆಂಗಳೂರು ಪೂರ್ಣಪ್ರಜ್ಞ ವಿದ್ಯಾಪೀಠದ ಬಳಿಯಿರುವ ಮೈದಾನದಲ್ಲಿ ಆಯೋಜಿಸಲಾಗಿದ್ದ ಅದ್ದೂರಿ ಸಮಾರಂಭದಲ್ಲಿ ಬೆಂಗಳೂರು ನಗರದ ಪೊಲೀಸ್ ಆಯುಕ್ತರಾದ ಸೀಮಂತ್ ಕುಮಾರ್ ಸಿಂಗ್ ಟ್ರೇಲರ್ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು.

ಬೆಂಗಳೂರು ಸೇರಿದಂತೆ ಕರ್ನಾಟಕದ ಐದು ಜಿಲ್ಲೆಗಳಲ್ಲಿ ಏಕಕಾಲಕ್ಕೆ ಈ ಚಿತ್ರದ ಟ್ರೇಲರ್ ಅನಾವರಣವಾಗಿದ್ದು ವಿಶೇಷ.

ಶಿವರಾಜಕುಮಾರ್, ಉಪೇಂದ್ರ, ರಾಜ್ ಬಿ ಶೆಟ್ಟಿ, ಸುಧಾರಾಣಿ, ಪ್ರಮೋದ್ ಶೆಟ್ಟಿ, ನಿರ್ದೇಶಕ ಅರ್ಜುನ್ ಜನ್ಯ ಹಾಗೂ ನಿರ್ಮಾಪಕ ರಮೇಶ್ ರೆಡ್ಡಿ ಅವರು ಸಮಾರಂಭದ ಉಪಸ್ಥಿತರಿದ್ದರು. ಟ್ರೇಲರ್ ಬಿಡುಗಡೆ ನಂತರ ಚಿತ್ರದ ಕುರಿತು ಮಾತನಾಡಿದರು.

ನಾನು ಮೂರು ಜನ ನಾಯಕರ ಅಭಿಮಾನಿಯಾಗಿ ಈ ಸಿನಿಮಾ ನಿರ್ದೇಶನ ಮಾಡಿದ್ದೇನೆ. ಹಾಗಾಗಿ ನನಗೆ ಈ ಸಿನಿಮಾ ನಿರ್ದೇಶಿಸುವುದು ಅಷ್ಟು ಕಷ್ಟ ಆಗಲಿಲ್ಲ. ನಾನು ಸಿನಿಮಾ ನಿರ್ದೇಶಕನಾಗಲು ಶಿವರಾಜಕುಮಾರ್ ಅವರೆ ಕಾರಣ. ಇನ್ನೂ, ಈ ಚಿತ್ರದ ನಾಲ್ಕನೇ ಹೀರೋ ನಿರ್ಮಾಪಕ ರಮೇಶ್ ರೆಡ್ಡಿ. ಅವರು ಯಾವುದೇ ಕೊರತೆ ಬಾರದ ಹಾಗೆ ಈ ಸಿನಿಮಾ ಮಾಡಿದ್ದಾರೆ. ನಾನು ಚಿತ್ರ ನಿರ್ದೇಶನಕ್ಕೂ ಮುನ್ನ ಅನಿಮೇಶನ್ ನಲ್ಲಿ ಈ ಸಿನಿಮಾ ಕಥೆ ಮಾಡಿ ಶಿವಣ್ಣ ಹಾಗೂ ರಮೇಶ್ ರೆಡ್ಡಿ ಅವರಿಗೆ ತೋರಿಸಿದ್ದೆ. ಅವರು ಅದನ್ನು ನೋಡಿ ಮೆಚ್ಚಿಕೊಂಡಿದ್ದರು. ನಮ್ಮ ಹಿರಿಯರು ನಮಗೆ ತಿಳಿಸಿಕೊಟ್ಟಿರುವ ಅನೇಕ ಸಂಸ್ಕೃತಿಯನ್ನು ನಾವು ಮರೆತಿದ್ದೇವೆ. ಆ ವಿಷಯದ ಒಂದೆಳೆ ಇಟ್ಟುಕೊಂಡು ಈ ಸಿನಿಮಾ ಕಥೆ ಮಾಡಿದ್ದೇನೆ. ಎಲ್ಲಾ ತಂತ್ರಜ್ಞರ ಹಾಗೂ ಕಲಾವಿದರ ಸಹಕಾರದಿಂದ ಚಿತ್ರ ಚೆನ್ನಾಗಿ ಬಂದಿದೆ. ಡಿಸೆಂಬರ್ 25ರಂದು ಬಿಡುಗಡೆಯಾಗುತ್ತಿದೆ ಎಲ್ಲರೂ ನೋಡಿ ಪ್ರೋತ್ಸಾಹಿಸಿ ಎಂದರು.

ಟ್ರೇಲರ್ ಚೆನ್ನಾಗಿ ಮೂಡಿಬಂದಿದೆ ಎಂದು ಮಾತನಾಡಿದ ನಟ ಶಿವರಾಜಕುಮಾರ್, ಉಪೇಂದ್ರ ಹಾಗೂ ರಾಜ್ ಬಿ ಶೆಟ್ಟಿ ಅವರ ಜೊತೆಗೆ ಕೆಲಸ ಮಾಡಿದ್ದು ಬಹಳ ಖುಷಿಯಾಗಿದೆ. ಸುಧಾರಾಣಿ ಅವರು ಅತಿಥಿ ಪಾತ್ರದಲ್ಲಿ ಅಭಿನಯಿಸಿದ್ದಾರೆ. ಪ್ರಮೋದ್ ಶೆಟ್ಟಿ ಕೂಡ ನಟಿಸಿದ್ದಾರೆ. ರಮೇಶ್ ರೆಡ್ಡಿ ಅವರ ನಿರ್ಮಾಣದ ಬಗ್ಗೆ ಎಷ್ಟು ಹೇಳಿದರು ಕಡಿಮೆ. ಅಷ್ಟು ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ. ನಾನು ಮೊದಲು ಹೇಳಿದ್ದೆ. ಈಗಲೂ ಹೇಳುತ್ತಿದ್ದೇನೆ. ಈ ಚಿತ್ರ ಬಿಡುಗಡೆ ಆದ ಮೇಲೆ ಅರ್ಜುನ್ ಜನ್ಯ ಎಲ್ಲಿಗೊ ಹೋಗುತ್ತಾರೆ ಎಂದರು.

ಈ ಸಿನಿಮಾದಲ್ಲಿ ತೆರೆಯ ಮೇಲೆ ಮೂರು ಸ್ಟಾರ್ ಗಳು ಕಾಣಿಸಿದ್ದೇವೆ. ಆದರೆ ತೆರೆಯ ಹಿಂದೆ ಮೂರು ಸ್ಟಾರ್ ಗಳು ಇದ್ದಾರೆ. ಮೊದಲ ಸ್ಟಾರ್ ನಿರ್ಮಾಪಕ ರಮೇಶ್ ರೆಡ್ಡಿ. ಅವರು ದುಡಿದಿದ್ದನ್ನೆಲ್ಲಾ ಈ ಚಿತ್ರಕ್ಕೆ ಸುರಿದಿದ್ದಾರೆ. ಎರಡನೇ ಸ್ಟಾರ್ ನಿರ್ದೇಶಕ ಅರ್ಜುನ್ ಜನ್ಯ ಎರಡು ವರ್ಷದಿಂದ ಶ್ರಮ ಹಾಕಿದ್ದಾರೆ. ಮೂರನೇ ಸ್ಟಾರ್ ಛಾಯಾಗ್ರಾಹಕ ಸತ್ಯ ಹೆಗಡೆ. ಇನ್ನೂ, ಇಪ್ಪತ್ತರ ಯುವಕನನ್ನು ನಾಚಿಸುವ ಉತ್ಸಾಹವಿರುವ ಶಿವಣ್ಣ ಹಾಗು "ಸು ಫ್ರಮ್ ಸೋ" ಚಿತ್ರದ ಮೂಲಕ ಬಹುಬೇಡಿಕೆಯ ನಟರಾಗಿರುವ ರಾಜ್ ಬಿ ಶೆಟ್ಟಿ ಅವರ ಜೊತೆಗೆ ಕೆಲಸ ಮಾಡಿದ್ದು ಸಂತೋಷವಾಗಿದೆ ಎಂದರು ನಟ ಉಪೇಂದ್ರ.

ನಾನು ಈ ಚಿತ್ರದ ಕುರಿತು ನಿರ್ದೇಶಕ ಅರ್ಜುನ್ ಜನ್ಯ ಹಾಗೂ ನಿರ್ಮಾಪಕ ರಮೇಶ್ ರೆಡ್ಡಿ ಅವರ ಬಳಿ ವಿಚಾರಿಸುತ್ತಿದ್ದೆ. ಇನ್ನೂ, ನಾನು ಶಿವರಾಜಕುಮಾರ್ ಹಾಗು ಉಪೇಂದ್ರ ಅವರ ಅಭಿಮಾನಿ. ಈ ಚಿತ್ರ ಮುಗಿದ ಮೇಲೆ ಎಷ್ಟೋ ಜನ ನನ್ನನ್ನು ಕೇಳಿದರು. ಅಂತಹ ದೊಡ್ಡ ಸ್ಟಾರ್ ಗಳ ಜೊತೆಗೆ ಕೆಲಸ ಮಾಡಿದ್ದೀರಿ. ಏನು ಅನಿಸಿತು ಎಂದು. ನಾನು ಹೇಳಿದೆ. ನಾನು ಸ್ಟಾರ್ ಗಳ ಜೊತೆಗೆ ಕೆಲಸ ಮಾಡಿದ್ದೀನಿ ಅಂತ ಅನಿಸಲೇ ಇಲ್ಲ ಎಂದು. ಅವರಿಬ್ಬರೂ ಅಷ್ಟು ಸರಳವಾಗಿದ್ದರು. ಇನ್ನೂ, ನಾವು ಪರಭಾಷಾ ಹಾವಳಿ ಅನ್ನುತ್ತೇವೆ. ನಾವು ಕೂಡ ಹಾವಳಿ ಕೊಡುವ ಚಿತ್ರ ಮಾಡಬೇಕು. ಆ ರೀತಿಯ ಚಿತ್ರ "45" ಆಗಲಿದೆ ಎನ್ನುವ ಭರವಸೆ ನನ್ನಗಿದೆ ಎಂದು ನಟ ರಾಜ್ ಬಿ ಶೆಟ್ಟಿ ತಿಳಿಸಿದರು.

ಚಿತ್ರ ಉತ್ತಮವಾಗಿ ಮೂಡಿಬರಲು ಸಹಕಾರ ನೀಡಿದ ಪ್ರತಿಯೊಬ್ಬರಿಗೂ ಧನ್ಯವಾದ ತಿಳಿಸಿದ ನಿರ್ಮಾಪಕ ರಮೇಶ್ ರೆಡ್ಡಿ, ಡಿಸೆಂಬರ್ 25 ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ಎಲ್ಲರೂ ಚಿತ್ರಮಂದಿರಗಳಲ್ಲೇ ಚಿತ್ರ ನೋಡಿ ಎಂದರು.

ಚಿತ್ರದಲ್ಲಿ ನಟಿಸಿರುವ ಪ್ರಮೋದ್ ಶೆಟ್ಟಿ ಹಾಗೂ ಸುಧಾರಾಣಿ ಅವರು "45" ಚಿತ್ರದ ಕುರಿತು ತಮ್ಮ ಅನುಭವ ಹಂಚಿಕೊಂಡರು.

# ಜನಪ್ರಿಯವಾಗುತ್ತಿದೆ 'ಪ್ರೇಮಿ'ಯ ಮೊದಲ ಹಾಡು

ಅಮ್ಮ ಬರೆದ ಕಥೆಗೆ ಮಗನೇ ನಾಯಕ .

ಶ್ರೀ ಗುರು ಕರಿಬಸವೇಶ್ವರ ಪ್ರೊಡಕ್ಷನ್ ಲಾಂಛನದಲ್ಲಿ ಬಿ.ಸಿದ್ದಲಿಂಗಯ್ಯ ಅವರು ನಿರ್ಮಿಸುತ್ತಿರುವ ಹಾಗೂ ಎಸ್ ಪ್ರದೀಪ್ ವರ್ಮ ಅವರು ನಿರ್ದೇಶಿಸುತ್ತಿರುವ ಈ ಚಿತ್ರಕ್ಕಾಗಿ ನಿಖಿಲ್ ರಾಜ್ ಶೆಟ್ಟಿ ಬರೆದಿರುವ, ಚೇತನ್ ಗಂಧರ್ವ ಹಾಡಿರುವ ಹಾಗೂ ಪ್ರದೀಪ್ ವರ್ಮ ಸಂಗೀತ ನೀಡಿರುವ "ಮನಸ್ಸು ಏನೋ ಕಾಡಿದೆ" ಎಂಬ ಹಾಡು ಇತ್ತೀಚೆಗೆ 02 ಮ್ಯೂಸಿಕ್ ಯೂಟ್ಯೂಬ್ ಚಾನಲ್ ನಲ್ಲಿ ಬಿಡುಗಡೆಯಾಗಿದೆ. ಈ ಸುಮಧುರ ಗೀತೆಗೆ ಮೆಚ್ಚುಗೆಯ ಮಹಾಪೂರವೇ ಹರಿದು ಬರುತ್ತಿದೆ. ಗುರುಗಳಾದ ಚಿಂತಲಪಲ್ಲಿ ಶ್ರೀ ನಿವಾಸ ರವರು ಹಾಡು ಬಿಡುಗಡೆ ಮಾಡಿ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ನಟನೆ ಬಗ್ಗೆ ಆಸಕ್ತಿಯುಳ್ಳ ಅದ್ವಿಕ್ ಈ ಚಿತ್ರದ ಮೂಲಕ ನಾಯಕನಾಗಿ ಚಂದನವನಕ್ಕೆ ಅಡಿ ಇಡುತ್ತಿದ್ದಾರೆ. ಅವರ ತಂದೆ ಸಿದ್ದಲಿಂಗಯ್ಯ ಅವರೆ ಈ ಚಿತ್ರ ನಿರ್ಮಾಣ ಮಾಡುತ್ತಿದ್ದು, ತಾಯಿ ಅಕ್ಕಮಹಾದೇವಿ ಅವರು ಕಥೆ ಬರೆದಿದ್ದಾರೆ. ಮಗನ ಆಸೆಗೆ ಅಪ್ಪ – ಅಮ್ಮ ಬೆನ್ನೆಲುಬಾಗಿ ನಿಂತಿದ್ದಾರೆ. ಅಕ್ಕಮಹಾದೇವಿಯ ಅವರು ಖ್ಯಾತ ಲೇಖಕಿ ಟಿ.ಗಿರಿಜಾ ಅವರ ಸಹೋದರಿ. ನೈಜ ಕಥೆ ಆದರಿಸಿದ ಈ ಚಿತ್ರ ಪ್ರೇಮ ಕಥಾಹಂದರ ಹೊಂದಿದೆ. ಪ್ರೇಮಕಥೆಯೇ ಪ್ರಧಾನವಾದರೂ ನೋಡುಗರಿಗೆ ಬೇಕಾದ ಎಲ್ಲಾ ಅಂಶಗಳು "ಪ್ರೇಮಿ" ಚಿತ್ರದಲ್ಲಿದೆ. ಜ್ಯೋತಿಷ್ಯದ ಕುರಿತದ ವಿಷಯವೂ ಇದರಲ್ಲಿದೆ. ಐದು ಹಾಡುಗಳ ಪೈಕಿ ಮೊದಲ ಹಾಡು ಇಂದು ಬಿಡುಗಡೆಯಾಗಿದೆ. ನಾನೇ ಸಂಗೀತ ನಿರ್ದೇಶನದ ಜೊತೆಗೆ ನಿರ್ದೇಶನವನ್ನು ಮಾಡಿದ್ದೇನೆ. ಖಳನಾಯಕನಾಗೂ ಅಭಿನಯಿಸಿದ್ದೇನೆ ಎಂದು ಪ್ರದೀಪ್ ವರ್ಮ ಹೇಳಿದರು.

ಬಾಲ್ಯದಿಂದಲೂ ನಟನಾಗಬೇಕೆಂಬ ಕನಸು. ಅದು ಈಗ ಈಡೇರಿದೆ. ಅಪ್ಪ – ಅಮ್ಮ ನನ್ನ ಆಸೆಗೆ ಆಸರೆಯಾದರು. ಪ್ರದೀಪ್ ವರ್ಮ ಅವರು ನನ್ನ ಮೊದಲ ಚಿತ್ರ ನಿರ್ದೇಶನ ಮಾಡಿದ್ದಾರೆ. ಸಂಗೀತ ನಿರ್ದೇಶಕರು ಅವರು ಅಂತ ಮೊದಲ ತಿಳಿದಿತ್ತು. ಪ್ರದೀಪ್ ವರ್ಮ ಅವರ ನಿರ್ದೇಶನದ "ಕುರುಡು ಕಾಂಚಾಣ" ಚಿತ್ರದ ಕಥೆ ಕೇಳಿ ಈ ಚಿತ್ರವನ್ನು ಅವರಿಂದಲೇ ನಿರ್ದೇಶಿಸಬೇಕೆಂದು ತೀರ್ಮಾನ ಮಾಡಲಾಯಿತು. ಚಿತ್ರತಂಡದ ಸಹಕಾರದಿಂದ "ಪ್ರೇಮಿ" ಒಂದೊಳ್ಳೆ ಚಿತ್ರವಾಗಿ ಮೂಡಿಬಂದಿದೆ. ಸದ್ಯದಲ್ಲೇ ಬಾಕಿಯಿರುವ ಹಾಡುಗಳು, ಟೀಸರ್ ಹಾಗೂ ಟ್ರೇಲರ್ ಅನಾವರಣವಾಗಲಿದೆ ಎಂದರು ನಾಯಕ ಅದ್ವಿಕ್.



ನಾನು ಜನಪ್ರಿಯ ಲೇಖಕಿ ಟಿ.ಗಿರಿಜಾ ಅವರ ಸಹೋದರಿ. ವೃತ್ತಿಯಲ್ಲಿ ಶಿಕ್ಷಕಿ. ಹಲವು ಕಥೆಗಳನ್ನು ಬರೆದಿದ್ದೇನೆ. ಪ್ರೇಮಕಥೆಗಳೆ ಹೆಚ್ಚು. ಇದು ನೈಜ ಕಥೆ. ಈ ಕಥೆ ಸಿನಿಮಾ ರೂಪ ಪಡೆದುಕೊಂಡು ನನ್ನ ಮಗನೇ ನಾಯಕನಾಗಿರುವುದು ಖುಷಿಯಾಗಿದೆ ಎಂದು ಅಕ್ಕಮಹಾದೇವಿ ತಿಳಿಸಿದರು.

ನಾನು ಹೋಟೆಲ್ ಉದ್ಯಮಿ. ಸಿನಿಮಾ ರಂಗ ಹೊಸತು. ಮಗನಿಗಾಗಿ ಸಿನಿಮಾ ನಿರ್ಮಾಣ ಮಾಡಿರುವುದಾಗಿ ನಿರ್ಮಾಪಕ ಸಿದ್ದಲಿಂಗಯ್ಯ ಹೇಳಿದರು.

ಈ ಚಿತ್ರಕ್ಕೆ ಸಂಭಾಷಣೆ ಬರೆದವರು ಓ ಒ ವಿಮಲ್ ರಾಜ್ ಹಾಗೂ ಸಂಕಲನ ಸಂಜೀವ್ ರೆಡ್ಡಿ ಮತ್ತು

ಅಸೋಸಿಯೇಟ್ ಡೈರೆಕ್ಟರ್ ಪೂರ್ಣಚಂದ್ರ ದೇವಾನಂದ್

ನನ್ನ ಪಾತ್ರ ಚೆನ್ನಾಗಿದೆ. ಹಳ್ಳಿ ಹುಡುಗಿಯಾಗಿ ಕಾಣಿಸಿಕೊಂಡಿದ್ದೇನೆ ಎಂದರು ನಾಯಕಿ ಸಾತ್ವಿಕ.

ಎರಡನೇ ನಾಯಕಿಯಾಗಿ ಅಭಿನಯಿಸಿರುವ ಶೋಭಿತ, ಕಲಾವಿದರಾದ, ದ್ವಿತ ಇ ಗೌಡ, "ಪ್ರೇಮ ಲೋಕ" ಸುರೇಶ್ ಖ, ರಾಘವೇಂದ್ರ, ಕಿರಣ್ ರಾಜ್, ಹರ್ಷಿತಾ, ಹರೀಶ್ ಉಕ್ಕಡಗಾತ್ರಿ, ವೀರೇಶ್ ಹಿರೇಮಠ್ , ಮಾಸ್ಟರ್ ಸಂತೃಪ್ತಿ, ಮಾಸ್ಟರ್ ಹರ್ಷಲ್ ಹಾಗೂ ಛಾಯಾಗ್ರಾಹಕ ಗೌತಮ್ ಮಟ್ಟಿ ಮುಂತಾದವರು "ಪ್ರೇಮಿ' ಚಿತ್ರದ ಕುರಿತು ಮಾತನಾಡಿದರು.

# ಶುಭಸ್ಯ ಶೀಘ್ರಂ ಧಾರಾವಾಹಿಯಲ್ಲಿ ನೆಗೆಟಿವ್ ರೋಲ್‌ನಲ್ಲಿ ರಾಧಿಕಾ

ಶ್ರೀ ಬಾಲಾಜಿ ಫೋಟೋ ಸ್ಟುಡಿಯೋ ಚಿತ್ರದಲ್ಲಿ ಅಭಿನಯಿಸಿದ ನಾಯಕಿ ರಾಧಿಕಾ ಅಚ್ಯುತರಾವ್ ನೆನಪಿನಲ್ಲಿರಬಹುದು!!

ಇಲ್ಲದಿದ್ದಲ್ಲಿ ಹೇಗೂ ನಾವು ಕನ್ನಡದ ನಾಯಕಿಯರನ್ನು ಮರೆಯುವವರೆ ತಾನೆ..

ಈಗ ಮತ್ತೆ ನೆನಪಿಸಿಕೊಳ್ಳುವ ಸಮಯ..

ಮೊದಲ ಚಿತ್ರದಲ್ಲಿಯೇ ಉತ್ತಮ ಅಭಿನಯ ತೋರಿದ್ದ ರಾಧಿಕಾ ಶುಭಸ್ಯ ಶೀಘ್ರಂ ಧಾರಾವಾಹಿಯಲ್ಲಿ ನೆಗೆಟಿವ್ ರೋಲ್ ಮಾಡುತ್ತಿದ್ದಾರೆ.. ಜಿ ಪವರ್ ನಲ್ಲಿ ಪ್ರಸಾರ ಆಗುತ್ತಿದೆ..

ಇದಕ್ಕಿಂತ ಖುಷಿಪಡುವ ಸಂಗತಿ ಎಂದರೆ ತೆಲುಗಿನ ಭೂತಂ ಪ್ರೇತಂ ಚಿತ್ರದಲ್ಲಿ ರಾಧಿಕಾ ನಾಯಕಿ ಪಾತ್ರ ನಿರ್ವಹಿಸುತ್ತಿದ್ದಾರೆ..

ತೆಲುಗು ಚಿತ್ರರಂಗಕ್ಕೆ ನಾವು ಪರಿಚಯಿಸುತ್ತಿದ್ದೇವೆ ಎಂದು ಸಂಭ್ರಮದಿಂದ ಚಿತ್ರತಂಡ ಪೋಸ್ಟರ್ ಪ್ರಕಟಿಸಿದೆ!!

ಹೊಸ ವರ್ಷದ ಫೆಬ್ರವರಿಯಲ್ಲಿ ಚಿತ್ರ ತೆರೆಯ ಮೇಲೆ ಬರಲಿದೆಯಂತೆ.. ರಾಧಿಕಾ ಈ ಚಿತ್ರದಲ್ಲಿ ಪ್ರೊಡಕ್ಷನ್ ಡಿಸೈನರ್ ಹಾಗೂ ಸಹ ನಿರ್ದೇಶಕಿಯಾಗಿಯೂ ಸಹ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದು ಕನ್ನಡಿಗರಿಗೆಅಭಿಮಾನದ ವಿಷಯ.. ಚಿತ್ರದ ಮೊದಲ ಹಾಡು ಹೊಸ ವರ್ಷದ ಜನವರಿ ಒಂದರಂದು ಸಂಭ್ರಮದಲ್ಲಿದೆ..

ಗುಡ್ ಲಕ್ ರಾಧಿಕಾ!!



# ದಿ ಕ್ಯಾರಮ್ ಕ್ವೀನ್ ಚಿತ್ರಕ್ಕೆ ಚೆನ್ನೈನಲ್ಲಿ ಮುಹೂರ್ತ

ನಿಹಾನ್ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ನಾಗೇಶ್ ಪಾಟೀಲ್ ಟಿ ನಿರ್ಮಾಣದ ಮೊದಲ ಸಿನಿಮಾ ದಿ ಕ್ಯಾರಮ್ ಕ್ವೀನ್ ಚಿತ್ರಕ್ಕೆ ಚೆನ್ನೈನಲ್ಲಿ ಮುಹೂರ್ತ .

ಇದು ವಿಶ್ವ ಚಾಂಪಿಯನ್ ಎಂ.ಬಿ.ಖಾಜಿಮ ಅವರ ಬಯೋಪಿಕ್ .

ಇತ್ತೀಚೆಗೆ ಸ್ಯಾನ್ ಫ್ರಾನ್ಸಿಸ್ಕೋ (ಯುಎಸ್‌ಎ)ದಲ್ಲಿ ನಡೆದ ಕ್ಯಾರಮ್ ವಿಶ್ವಕಪ್‌ನಲ್ಲಿ ಮಹಿಳಾ ಸಿಂಗಲ್ಸ್, ಮಹಿಳಾ ಡಬಲ್ಸ್ ಮತ್ತು ಮಹಿಳಾ ತಂಡ ಚಾಂಪಿಯನ್ ಶಿಪ್ – ಮೂರು ಪ್ರಶಸ್ತಿಗಳನ್ನು ಗೆದ್ದ ವಿಶ್ವ ಚಾಂಪಿಯನ್ 16 ವರ್ಷ ವಯಸ್ಸಿನ ಎಂ.ಬಿ. ಖಾಜಿಮ ಅವರ ಸಾಧನೆಯನ್ನು ಸಿನಿಮಾ ರೂಪದಲ್ಲಿ ತೆರೆಗೆ ತರಲು ನಿಹಾನ್ ಎಂಟರ್ಟೈನ್ಮೆಂಟ್ ಸಂಸ್ಥೆಯ ನಾಗೇಶ್ ಪಾಟೀಲ್ ಟಿ ಅವರು ಮುಂದಾಗಿದ್ದಾರೆ. ತಮಿಳು, ತೆಲುಗು, ಕನ್ನಡ, ಮಲೆಯಾಳಂ ಹಾಗೂ ಹಿಂದಿ ಭಾಷೆಗಳಲ್ಲಿ ಮೂಡಿಬರುತ್ತಿರುವ ಈ ಚಿತ್ರವನ್ನು ಮುರಳಿ ಎಸ್ ವೈ ನಿರ್ದೇಶಿಸುತ್ತಿದ್ದಾರೆ. ಇತ್ತೀಚೆಗೆ ಈ ಚಿತ್ರದ ಮುಹೂರ್ತ ಸಮಾರಂಭ ಚೆನ್ನೈನ ಪ್ರಸಾದ್ ಲ್ಯಾಬ್ ನಲ್ಲಿ ನಡೆದಿದ್ದು, ಜನವರಿಯಿಂದ ಚಿತ್ರೀಕರಣ ಆರಂಭವಾಗಲಿದೆ.

ಚಲನಚಿತ್ರ ಕ್ಷೇತ್ರದಲ್ಲಿ ತನ್ನ ಮೊದಲ ಹೆಜ್ಜೆ ಇಡುತ್ತಿರುವ ನಿಹಾನ್ ಎಂಟರ್‌ಟೈನ್‌ಮೆಂಟ್ ಸಂಸ್ಥೆ, ತನ್ನ ಮೊದಲ ನಿರ್ಮಾಣವಾಗಿ ?ದಿ ಕ್ಯಾರಮ್ ಕ್ವೀನ್? ಚಿತ್ರವನ್ನು ಅಧಿಕೃತವಾಗಿ ಘೋಷಿಸಿದೆ.



ಸಾಮಾನ್ಯ ಹಿನ್ನೆಲೆಯಿಂದ ಬಂದ ಯುವತಿಯೊಬ್ಬಳು ತನ್ನ ಪ್ರತಿಭೆ, ಶ್ರಮ ಮತ್ತು ಅಸಾಧಾರಣ ಹೋರಾಟದ ಮೂಲಕ ಕ್ಯಾರಮ್ ಕ್ರೀಡೆಯಲ್ಲಿ ಸಾಧಿಸಿದ ಪಯಣವೇ ಈ ಚಿತ್ರದ ಪ್ರಮುಖ ಕಥಾಹಂದರ. ತಮಿಳು ಚಲನಚಿತ್ರರಂಗದ ಪ್ರತಿಭಾವಂತ ನಟ ಕಾಳಿ ವೆಂಕಟ್, ರಾಂಧ್ಯ ಭೂಮೇಶ್ ಗೌಡ ಹಾಗೂ ರಿಶಿ ಪ್ರಕಾಶ್ ಈ ಚಿತ್ರದ ಪ್ರಮುಖಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಉಳಿದ ತಾರಾಬಳಗ ಹಾಗೂ ತಂತ್ರಜ್ಞರ ಕುರಿತು ಮಾಹಿತಿಯನ್ನು ಸದ್ಯದಲ್ಲೇ ತಿಳಿಸಲಾಗುವುದೆಂದು ನಿರ್ದೇಶಕ ಮುರಳಿ ಎಸ್ ವೈ ತಿಳಿದಿದ್ದಾರೆ.

# ಮಾರ್ಕ್ ಸಿನಿಮಾದ ಮಸ್ತ್ ಮಲೈಕಾ ಹಾಡು ಬಿಡುಗಡೆ

ಕಿಚ್ಚ ಸುದೀಪ್ ನಟನೆಯ ಮಾರ್ಕ್ ಸಿನಿಮಾ ಇದೇ ತಿಂಗಳ 25ರಂದು ತೆರೆಗೆ ಬರ್ತಿದೆ. ಪ್ರಚಾರ ಕಾರ್ಯ ಕೂಡ ಭರದಿಂದ ಸಾಗಿದೆ. ಇದರ ಭಾಗವಾಗಿ ಮಾರ್ಕ್ ಸಿನಿಮಾದ ಸ್ಪೆಷಲ್ ನಂಬರ್ ಬಿಡುಗಡೆ ಮಾಡಲಾಗಿದೆ.

ಮಾರ್ಕ್ ಸಿನಿಮಾದ ಮಸ್ತ್ ಮಲೈಕಾ ಹಾಡು ರಿಲೀಸ್ ಆಗಿದೆ. ಈ ಹಾಡಿನಲ್ಲಿ ಕಿಚ್ಚ ಸುದೀಪ್ ಹಾಗೂ ನಿಶ್ವಿಕಾ ನಾಯ್ಡು ಮಸ್ತ್ ಆಗಿ ಕುಣಿದಿದ್ದಾರೆ. ಮಲೈಕಾ ಆಗಿ ನಿಶ್ವಿಕಾ ಕಾಣಿಸಿಕೊಂಡಿದ್ದಾರೆ.

ಅನೂಪ್ ಭಂಡಾರಿ ಮಸ್ತ್ ಮಲೈಕಾ ಹಾಡಿಗೆ ಸಾಹಿತ್ಯ ಬರೆದಿದ್ದಾರೆ. ಸುದೀಪ್ ಮಗಳು ಸಾನ್ವಿ ಸುದೀಪ್ ಹಾಗೂ ನಕಾಶ್ ಅಜೀಜ್ ಇದನ್ನ ಹಾಡಿದ್ದಾರೆ. ಅಜನೀಶ್ ಲೋಕನಾಥ್ ಈ ಚಿತ್ರಕ್ಕೆ ಸಂಗೀತ ಕೊಟ್ಟಿದ್ದಾರೆ. ಮಾರ್ಕ್ ಚಿತ್ರವನ್ನ ವಿಜಯ್ ಕಾರ್ತಿಕೇಯ ಡೈರೆಕ್ಷನ್ ಮಾಡಿದ್ದಾರೆ. ಮ್ಯಾಕ್ಸ್ ಚಿತ್ರ ಆದ್ಮೇಲೆ ಈ ಒಂದು ಚಿತ್ರವನ್ನ ಸುದೀಪ್ ಜೊತೆಗೆ ಮಾಡಿದ್ದಾರೆ. ಚಿತ್ರದಲ್ಲಿ ದೀಪ್ಷಿಕಾ, ನವೀನ್ ಚಂದ್ರ, ಗುರು ಸೋಮಸುಂರಂ, ರೋಶಿನಿ ಪ್ರಕಾಶ್, ಗೋಪಾಲ್‌ಕೃಷ್ಣ ದೇಶಪಾಂಡೆ, ಮಹಾಂತೇಶ್ ಹಿರೇಮಠ್, ಡ್ರ್ಯಾಗನ್ ಮಂಜು, ಅರ್ಚನಾ ಕೊಟ್ಟಿಗೆ, ಯೋಗಿ ಬಾಬು, ಶೈನ್ ಟಾಮ್ ಚಾಕೋ ಅಭಿನಯಿಸಿದ್ದಾರೆ. ಸತ್ಯ ಜ್ಯೋತಿ ಫಿಲ್ಮ್ ಹಾಗೂ ಕಿಚ್ಚ ಕ್ರಿಯೇಷನ್ ಬ್ಯಾನರ್ ನಡಿ ಸಿನಿಮಾ ತಯಾರಾಗಿದೆ.



# ಕಮಲ್ ರಾಜ್ ಪಂಚ ಕೃತಿ ಲೋಕಾರ್ಪಣೆ

ಕನ್ನಡ ಚಿತ್ರರಂಗದಲ್ಲಿ ನಟ, ನಿರ್ಮಾಪಕ, ನಿರ್ದೇಶಕ ಮತ್ತು ವಿತರಕರಾಗಿ ಗುರುತಿಸಿಕೊಂಡಿರುವ ಕಮಲ್ ರಾಜ್ (ಕಲೀಂ ಪಾಷ) ಸದಭಿರುಚಿಯ ಬರಹಗಾರರೂ ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಇಲ್ಲಿಯವರೆಗೆ ತಮ್ಮ ಸಿನಿಮಾಗಳಿಗೆ ಕಥೆ, ಚಿತ್ರಕಥೆ, ಸಾಹಿತ್ಯ ಮತ್ತು ಸಂಭಾಷಣೆಗಳನ್ನು ಬರೆದು ಸೈ ಎನಿಸಿಕೊಂಡಿದ್ದ ಕಮಲ್ ರಾಜ್, ಇದೀಗ ತಾವು ರಚಿಸಿರುವ ಐದು ಕೃತಿಗಳನ್ನು ಬಿಡುಗಡೆ ಮಾಡಿದ್ದಾರೆ.

ದೇವರ ಯುನಿವರ್ಸಲ್ ಬಿಸಿನೆಸ್ ಸ್ಕೂಲ್, ಮಾರ್ಕೇಟಿಂಗ್ ಐಕಾನ್ಸ್ ಆಫ್ ಇಂಡಿಯಾ ಎಸ್‌ಆರ್‌ಕೆ ಅಂಡ್ ಮೋದಿ, ಟು ಮೈ ಕಿಡ್ಸ್ ಇಮಾದ್ ಅಂಡ್ ಆಲಿಯಾ, ಟಿಪ್ಪು ಸುಲ್ತಾನ್ ಮತ್ತು 1000 ಶಾಯರಿಯಾನ್ ಜಸ್ಬಾತ್ ದಿಲ್ ಸೇ ಎಂಬ ಹೆಸರಿನ ಐದು ಈ ಐದು ಕೃತಿಗಳು ಇತ್ತೀಚೆಗೆ ಬಿಡುಗಡೆಯಾಗಿ ಹೊರಬಂದಿದ್ದು, ಯುವನಟ ವಿರಾಟ್, ಪ್ರಕಾಶಕ ಮತ್ತು ನಿರ್ಮಾಪಕ ವಿ. ಲಕ್ಷ್ಮೀಕಾಂತ್, ನಟರಾದ ರಕ್ಷಕ್, ಹುಚ್ಚ ವೆಂಕಟ್ ಸೇರಿದಂತೆ ಚಿತ್ರರಂಗ ಮತ್ತು ವಿವಿಧ ಕ್ಷೇತ್ರಗಳ ಹಲವು ಗಣ್ಯರು ಹಾಜರಿದ್ದು ಈ ಕೃತಿಗಳನ್ನು ಲೋಕಾರ್ಪಣೆಗೊಳಿಸಿದರು.

ನೈಸರ್ಗಿಕ ವ್ಯವಹಾರ, ಮಾರುಕಟ್ಟೆ ತಂತ್ರಗಳು, ತಂದೆ ಮತ್ತು ಮಕ್ಕಳ ನಡುವಿನ ಬಾಂಧವ್ಯ, ಐತಿಹಾಸಿಕ ವ್ಯಕ್ತಿಗಳ ಸಾಧನೆಗಳು ಮತ್ತು ಭಾವ ಲಹರಿ ಗೀತೆಗಳ ಗುಚ್ಛವನ್ನು ಕುರಿತಾಗಿ ಈ ಕೃತಿಗಳನ್ನು ರಚಿಸಲಾಗಿದ್ದು, ಇಂಗ್ಲಿಷ್ ಮತ್ತು ಕನ್ನಡ ಸೇರಿದಂತೆ ಎರಡೂ ಭಾಷೆಗಳಲ್ಲೂ ಈ ಕೃತಿಗಳು ಲಭ್ಯವಿದೆ.

ತಮ್ಮ ಕೃತಿಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಕಮಲ್ ರಾಜ್,



ಇಲ್ಲಿಯವರೆಗೆ ನಮ್ಮ ಸಿನಿಮಾಕ್ಕೆ ಮಾತ್ರ ಹೆಚ್ಚಾಗಿ ಬರೆಯುತ್ತಿದ್ದೆ. ಇದೀಗ ಸಿನಿಮಾದ ಜೊತೆಗೆ ಅದರ ಹೊರತಾಗಿರುವ ಮತ್ತು ಎಲ್ಲರೂ ತಿಳಿದುಕೊಳ್ಳಲೇ ಬೇಕಾಗಿರುವ ಒಂದಷ್ಟು ವಿಷಯಗಳನ್ನು ಈ ಕೃತಿಗಳ ಮೂಲಕ ಜನರ ಮುಂದಿಡುತ್ತಿದ್ದೇನೆ. ಈ ಐದೂ ಕೃತಿಗಳು ಕೂಡ ಐದು ವಿಭಿನ್ನವಾದ ವಿಷಯಗಳನ್ನು ಒಳಗೊಂಡಿದೆ. ಪ್ರಕೃತಿ ತನ್ನ ದೈನಂದಿನ ಚಟುವಟಿಕೆಗಳು ಮತ್ತು ವ್ಯವಹಾರವನ್ನು ಹೇಗೆ ಮಾಡುತ್ತದೆ ಅದು ನಮಗೆ ಹೇಗೆ ಪಾಠವಾಗುತ್ತದೆ ಎಂಬುದನ್ನು ದೇವರ ಯುನಿವರ್ಸಲ್ ಬಿಸಿನೆಸ್ ಸ್ಕೂಲ್ ಕೃತಿಯಲ್ಲಿ ಹೇಳಿದ್ದೇನೆ. ಇಂದಿನ ತಲೆಮಾರಿಗೆ ನಟರಾದ ಶಾರೂಖ್ ಖಾನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಮಾರುಕಟ್ಟೆ ವಿಷಯದಲ್ಲಿ ಹೇಗೆ ಮಾದರಿಯಾಗುತ್ತಾರೆ ಎಂಬುದನ್ನು ಮಾರ್ಕೇಟಿಂಗ್ ಐಕಾನ್ಸ್ ಆಫ್ ಇಂಡಿಯಾ ಎಸ್‌ಆರ್‌ಕೆ ಅಂಡ್ ಮೋದಿ ಪುಸ್ತಕದಲ್ಲಿ ಬರೆದಿದ್ದೇನೆ. ಈ ಎರಡೂ ಕೃತಿಗಳೂ ಇಂದಿನ ಕಾರ್ಪೋರೇಟ್ ಮತ್ತು ಮಾರ್ಕೇಟಿಂಗ್ ವ್ಯವಸ್ಥೆಗೆ ಪೂರಕವಾಗಿದೆ ಎಂದರು.

ಇದಲ್ಲದೆ ಟು ಮೈ ಕಿಡ್ಸ್ ಇಮಾದ್ ಅಂಡ್ ಆಲಿಯಾ ಮತ್ತು 1000 ಶಾಯರಿಯಾನ್ ಜಸ್ಬಾತ್ ದಿಲ್ ಸೇ ಎಂಬ ಹೆಸರಿನ ಕೃತಿಗಳು ಭಾವನಾತ್ಮಕ ಬರಹಗಳಾಗಿದ್ದು, ಟಿಪ್ಪು ಸುಲ್ತಾನ್ ಒಂದು ಐತಿಹಾಸಿಕ ಪಾತ್ರದ ಸಕಾರಾತ್ಮಕ ಅಂಶಗಳ ವಿವರಣೆಯನ್ನು ಓದುಗರ ಮುಂದಿಡುವಂಥದ್ದು ಎಂದು ತಮ್ಮ ಎಲ್ಲಾ ಐದೂ ಕೃತಿಗಳ ಬಗ್ಗೆ ಕಿರು ಪರಿಚಯ ಮಾಡಿಕೊಟ್ಟರು. ಇನ್ನು ಕಮಲ್ ರಾಜ್ ರಚಿಸಿರುವ ಈ ಎಲ್ಲಾ ಕೃತಿಗಳು ಕರ್ನಾಟಕ ರಾಜ್ಯದಾದ್ಯಂತ ಎಲ್ಲಾ ಪುಸ್ತಕ ಮಳಿಗೆಗಳು ಮತ್ತು ಆನ್‌ಲೈನ್‌ನಲ್ಲೂ ಲಭ್ಯವಿದೆ ಎಂದು ಪ್ರಕಾಶಕರು ತಿಳಿಸಿದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,